11 July 2026 Saturday
SINCE 1957

ಭಾವನಾಂತರಂಗ

ಜೀವನದಲ್ಲಿ ಯಾವುದೂ ಶಾಶ್ವತವಲ್ಲ ಎಂದು ತಿಳಿದು ನಡೆದರೆ ಮಾತ್ರ, ಸ್ವಾರ್ಥ, ಕೆಟ್ಟತನದ ಹಾದಿಯಲ್ಲಿ ಹೆಜ್ಜೆ ಹಾಕುವದಿಲ್ಲ!

-ಸ್ನೇಹಾ ಆನಂದ್

info.varthaman@gmail.com

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ



ಮೊರಾರ್ಜಿ ವಸತಿ ಶಾಲೆ ಸುತ್ತಲೂ ಕಾಂಪೌಂಡ್ ನಿರ್ಮಾಣ ಪುಟ ಸಂ. 2



ಕಾರ್ಯಾಚರಣೆಗಿಳಿದ ಅಧಿಕಾರಿಗಳು, 30ಕ್ಕೂ ಅಂಗಡಿ ತೆರವು ಪುಟ ಸಂ. 3



ಆಡಳಿತದಲ್ಲಿ ಕನ್ನಡ ಅನುಷ್ಠಾನ ಕಡ್ಡಾಯ: ಪುರುಷೋತ್ತಮ ಬಿಳಿಮಲೆ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್


VARTHAMAN Volume: 69 Issue: 222 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಅ.21ರಂದು ದಸರಾ ಜಂಬೂಸವಾರಿ

## ಚಾಮುಂಡಿಬೆಟ್ಟದಲ್ಲಿ ಅ.11ರಂದು ನಾಡಹಬ್ಬಕ್ಕೆ ಅಧಿಕೃತ ಚಾಲನೆ | ಈ ಬಾರಿ ದಸರಾ ಅದ್ದೂರಿ

**ಬೆಂಗಳೂರು:** ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಅಕ್ಟೋಬರ್ 11ರಂದು ಅಧಿಕೃತ ಚಾಲನೆ ದೊರೆಯಲಿದೆ. ಅಕ್ಟೋಬರ್ 21ರಂದು ಐತಿಹಾಸಿಕ ಜಂಬೂಸವಾರಿ ಮೆರವಣಿಗೆ ನಡೆಯಲಿದೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಶುಕ್ರವಾರ ನಡೆದ ಉನ್ನತ ಮಟ್ಟದ ಸಭೆಯಲ್ಲಿ ದಸರಾ ಆಚರಣೆ ದಿನಾಂಕ ಹಾಗೂ ಕಾರ್ಯಕ್ರಮಗಳ ಕುರಿತು ಮಹತ್ವದ ತೀರ್ಮಾನ ಕೈಗೊಳ್ಳಲಾಯಿತು.



ಚಾಮುಂಡಿಬೆಟ್ಟದಲ್ಲಿ ಅಕ್ಟೋಬರ್ 11ರಂದು ಬೆಳಿಗ್ಗೆ 11.50ಕ್ಕೆ ಶುಭ ಧನುರ್ ಲಗ್ನದಲ್ಲಿ ಮೈಸೂರು ದಸರಾ ಮಹೋತ್ಸವಕ್ಕೆ ಅಧಿಕೃತ ಚಾಲನೆ ನೀಡಲಾಗುತ್ತದೆ. ಅಕ್ಟೋಬರ್ 21ರಂದು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಐತಿಹಾಸಿಕ ಜಂಬೂಸವಾರಿ ಮೆರವಣಿಗೆ ನಡೆಯಲಿದೆ. ಅಂದು ಸಂಜೆ 4.10ರಿಂದ 4.35ರ ನಡುವೆ ಮುಖ್ಯಮಂತ್ರಿ ತಾಯಿ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಜಂಬೂಸವಾರಿಗೆ ಚಾಲನೆ ನೀಡಲಿದ್ದಾರೆ.

ವಿಶ್ವವಿಖ್ಯಾತ ದಸರಾ ಮಹೋತ್ಸವದ ಸಕಲ ಸಿದ್ಧತೆಗೆ ರಾಜ್ಯ ಸರ್ಕಾರ ಈ ಮೂಲಕ ಚಾಲನೆ ನೀಡಿದೆ. ದಸರಾ ಉದ್ಘಾಟನೆಗೆ ಯಾರನ್ನು ಆಯ್ಕೆ ಮಾಡಬೇಕು ಎಂಬುದನ್ನು ಮುಖ್ಯಮಂತ್ರಿ ನಿರ್ಧಾರಕ್ಕೆ ಬಿಡಲಾಯಿತು.

ದಸರಾ ಮಹೋತ್ಸವವನ್ನು ವಿಜೃಂಭಣೆಯಿಂದ ಹಾಗೂ ಸಾಂಪ್ರದಾಯಿಕ ವೈಭವದೊಂದಿಗೆ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಭೆಯಲ್ಲಿ ಅಧಿಕಾರಿಗಳಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚನೆ ನೀಡಿದರು.





## ದಸರಾದಲ್ಲಿ ಕಂಬಳ ಆಯೋಜನೆಗೆ ವಿರೋಧ

### ಪಾಸ್ ವಿತರಣೆಯಲ್ಲಿ ಪಾರದರ್ಶಕತೆ ಅಗತ್ಯ: ಸಂಸದ ಯದುವೀರ್

**ಬೆಂಗಳೂರು:** ನಾಡಹಬ್ಬ ಮೈಸೂರು ದಸರಾ ಮಹೋತ್ಸವದಲ್ಲಿ ಕಂಬಳ ಆಯೋಜನೆ ನಿರ್ಧಾರವನ್ನು ಮರು ಪರಿಶೀಲನೆ ನಡೆಸುವ ಅಗತ್ಯವಿದೆ ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ಆಕ್ಷೇಪ ವ್ಯಕ್ತಪಡಿಸಿದರು.



ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಉನ್ನತ ಮಟ್ಟದ ದಸರಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು ನಾಡಹಬ್ಬ ಮೈಸೂರು ದಸರಾ ಸಿದ್ಧತೆಗಳ ಕುರಿತು ಸಲಹೆ ನೀಡಿದರು. ಮೈಸೂರು ದಸರಾದ ಪರಂಪರೆ, ಸ್ಥಳೀಯರ ಅಭಿಪ್ರಾಯ, ಸಾರ್ವಜನಿಕರ ಸುರಕ್ಷತೆ ಹಾಗೂ ಜನರ ಆಕ್ಷೇಪವನ್ನು ಪರಿಗಣಿಸಿ ದಸರಾದಲ್ಲಿ ಕಂಬಳದ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಸರ್ಕಾರಕ್ಕೆ ಆಗ್ರಹಿಸಿದರು.

ದಸರಾ ಸಂದರ್ಭದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಹಾಗೂ ಹೊರ ರಾಜ್ಯಗಳಿಂದ ಲಕ್ಷಾಂತರ ಜನರು ಮೈಸೂರಿಗೆ ಆಗಮಿಸುವುದರಿಂದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ವಿಶೇಷ ಆದ್ಯತೆ ನೀಡಬೇಕು. ಸಾರ್ವಜನಿಕರ ಸುರಕ್ಷತೆ, ಸುಗಮ ಸಂಚಾರ, ಮಹಿಳೆಯರು ಹಾಗೂ ಮಕ್ಕಳ ಭದ್ರತೆ, ಪ್ರವಾಸಿಗರಿಗೆ ಅಗತ್ಯ ಸೌಲಭ್ಯಗಳು ಮತ್ತು ತುರ್ತು ಸೇವೆಗಳ ಸಮರ್ಪಕ ವ್ಯವಸ್ಥೆಯನ್ನು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಖಚಿತಪಡಿಸಬೇಕು ಎಂದು ಸಲಹೆ ನೀಡಿದರು.

## ಸರಳ ಸಂಭ್ರಮದ ಪ್ರಶ್ನೆಯೇ ಇಲ್ಲ: ಸಿಎಂ

**ಬೆಂಗಳೂರು:** ನಾಡಹಬ್ಬ ದಸರಾವನ್ನು ಬರಗಾಲದ ಕಾರಣಕ್ಕೆ ಸ್ವಲ್ಪ ಹಣ ಉಳಿಸಲು ಹೋಗಿ ಸರಳವಾಗಿ ಆಚರಣೆ ಮಾಡುವ ಪ್ರಶ್ನೆಯೇ ಇಲ್ಲ. ನಮ್ಮ ಸಂಸ್ಕೃತಿ ಪರಂಪರೆ ವೈಭವವನ್ನು ಕಡಿಮೆ ಮಾಡುವುದು ಬೇಡ ಎಂದು ಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದರು.

ದಸರಾ ಆಚರಣೆ ಸಂಬಂಧ ಶುಕ್ರವಾರ ನಡೆದ ಪೂರ್ವಭಾವಿ ಸಭೆ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಬಾರಿ 11 ದಿನಗಳ ಕಾಲ ವಿಜೃಂಭಣೆಯಿಂದ ದಸರಾ ಆಚರಿಸಲು ತೀರ್ಮಾನಿಸಲಾಗಿದೆ. ರಾಜ್ಯದ ಎಲ್ಲಾ ಸಂಸ್ಕೃತಿ ಪರಂಪರೆಗಳಿಗೆ ಅನುಗುಣವಾಗಿ ಹೊಸ ಹೊಸ ಕಾರ್ಯಕ್ರಮಗಳನ್ನು ಅಳವಡಿಸಲಾಗುವುದು ಎಂದು ತಿಳಿಸಿದರು.

ಈ ಬಾರಿಯ ದಸರಾ ಕಾರ್ಯಕ್ರಮದ ಅಂಗವಾಗಿ ಆಗಸ್ಟ್ 26ರಂದು ಬೆಳಗ್ಗೆ 10 ಗಂಟೆಗೆ ಗಜಪೂಜೆ ನಡೆಯಲಿದೆ. ದಸರಾ ಉದ್ಘಾಟನೆಯನ್ನು ಅ.11ರಂದು ಬೆಳಗ್ಗೆ 11.50ಕ್ಕೆ ನಿಗದಿ ಮಾಡಲಾಗಿದೆ. ಜಂಬು

## ಸಂಪುಟ ವಿಸ್ತರಣೆಗೆ ಒತ್ತಡವಿಲ್ಲ: ಡಿಕೆಶಿ

### ಪಕ್ಷದ ವರಿಷ್ಠರ ಜೊತೆ ಚರ್ಚಿಸಿ ಶೀಘ್ರ ತೀರ್ಮಾನ: ಸಿಎಂ ಡಿಕೆಶಿ

**ಬೆಳಗಾವಿ:** ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಸದ್ಯಕ್ಕೆ ಯಾವುದೇ ಒತ್ತಡ ಇಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಬೆಳಗಾವಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಶುಕ್ರವಾರ ಮಾತನಾಡಿದ ಅವರು, ನಮ್ಮ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಇಂದು ಅಥವಾ ನಾಳೆ ವಿದೇಶದಿಂದ ಬರಬಹುದು. ಅವರು ಕರೆದಾಗ ನಾನು ಹೋಗಿ ಚರ್ಚೆ ನಡೆಸುತ್ತೇನೆ ಎಂದು ಹೇಳಿದರು.

ಅಲ್ಲದೆ, ಪಕ್ಷದ ಕೇಂದ್ರ ನಾಯಕರು ನಾಳೆ ಅಥವಾ ನಾಡಿದ್ದು ರಾಜ್ಯಕ್ಕೆ ಆಗಮಿಸುವ ನಿರೀಕ್ಷೆ ಇದೆ. ಬಳಿಕ ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚೆ ನಡೆಯಲಿದೆ ಎಂದು ಹೇಳಿದರು.

ರಾಹುಲ್ ಗಾಂಧಿ ವಾಪಸಾದ ಬಳಿಕ, ಅಂದರೆ ಜುಲೈ 12 ಅಥವಾ 14ರ ನಂತರ ಸಚಿವ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಇದೆ. ಅಲ್ಲದೆ, ಐವರು ವಿಧಾನ ಪರಿಷತ್ ಸದಸ್ಯರ ನೇಮಕಾತಿ ಕುರಿತೂ ಚರ್ಚೆ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ.

### ಸಿಎಂ ಡಿಕೆಶಿ–ಹೆಬ್ಬಾಳ್ಕರ್ ಭೇಟಿ:

## ಮಂತ್ರಿಗಿರಿಗೆ ಮನವಿ

**ಬೆಳಗಾವಿ:** ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಅಧಿಕೃತ ಕಚೇರಿಗೆ ತಮ್ಮ ಕುಟುಂಬದೊಂದಿಗೆ ಆಗಮಿಸಿದ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತುಕತೆ ನಡೆಸಿದರು.

ಮುಖ್ಯಮಂತ್ರಿ ನಿವಾಸದಲ್ಲಿ ನಡೆದ ಭೇಟಿಯು ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ. ಸಚಿವ ಸ್ಥಾನದ ಮೇಲೆ ಕಣ್ಣಿಟ್ಟಿರುವ ಲಕ್ಷ್ಮಿ ಹೆಬ್ಬಾಳ್ಕರ್ ಅವರು, ಮಂತ್ರಿಗಿರಿ ನೀಡುವಂತೆ ಸಿಎಂ ಡಿಕೆಶಿಗೆ ಮನವಿ ಮಾಡಿದ್ದಾರೆ ಎನ್ನಲಾಗಿದೆ. ಲಕ್ಷ್ಮೀ ಹೆಬ್ಬಾಳ್ಕರ್ ತಾಯಿ ಗಿರಿಜಾ ಹಟ್ಟಿಹೊಳಿ. ಸಹೋದರಿಯರು ಟಿಫನ್ ತೆಗೆದುಕೊಂಡು ಆಗಮಿಸಿದ್ದರು. ಇದಕ್ಕೂ ಮೊದಲೇ ಎಂಎಲ್ಸಿ ಚನ್ನರಾಜ್ ಹಟ್ಟಿಹೊಳಿ ಮತ್ತು ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಆಗಮಿಸಿದ್ದರು.

## ಬೀದಿಬದಿ ವ್ಯಾಪಾರಿಗಳ ತೆರವು ಸಚಿವರ ವೈಯಕ್ತಿಕ ನಿರ್ಧಾರವಲ್ಲ

**ಬೆಳಗಾವಿ:** ಬೀದಿ ವ್ಯಾಪಾರಿಗಳ ಅತಿಕ್ರಮಣ ತೆರವು ಕಾರ್ಯಾಚರಣೆಯನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ಯಾವುದೇ ಒಬ್ಬ ಸಚಿವರ ವೈಯಕ್ತಿಕ ನಿರ್ಧಾರವಲ್ಲ. ಚುನಾಯಿತ ಪ್ರತಿನಿಧಿಗಳ ಜೊತೆ ವ್ಯಾಪಕ ಸಮಾಲೋಚನೆ ನಡೆಸಿದ ಬಳಿಕ ಸರ್ಕಾರ ಕೈಗೊಂಡ ನಿರ್ಧಾರ ಎಂದು ತಿಳಿಸಿದರು.

ಪುಟ 2ಕ್ಕೆ

## ಜಲಾಶಯಗಳ ನೀರಿನ ಮಟ್ಟ

| | |
|---|---|
| **ಕೆ ಆರ್ ಎಸ್** | |
| ಗರಿಷ್ಠ ಮಟ್ಟ | 124.80 ಅಡಿ |
| ಇಂದಿನ ಮಟ್ಟ | 88.60 ಅಡಿ |
| ಒಳಹರಿವು | 15189 ಕ್ಯುಸೆಕ್ |
| ಹೊರ ಹರಿವು | 785 ಕ್ಯುಸೆಕ್ |
| **ಕಬಿನಿ ಜಲಾಶಯ** | |
| ಗರಿಷ್ಠ ಮಟ್ಟ | 2284 ಅಡಿ |
| ಇಂದಿನ ಮಟ್ಟ | 2267.66 ಅಡಿ |
| ಒಳಹರಿವು | 15198 ಕ್ಯುಸೆಕ್ |
| ಹೊರ ಹರಿವು | 500 ಕ್ಯುಸೆಕ್ |
| **ಹಾರಂಗಿ ಜಲಾಶಯ** | |
| ಗರಿಷ್ಠ ಮಟ್ಟ | 2859 ಅಡಿ |
| ಇಂದಿನ ಮಟ್ಟ | 2843.66 ಅಡಿ |
| ಒಳಹರಿವು | 2751 ಕ್ಯುಸೆಕ್ |
| ಹೊರ ಹರಿವು | 180 ಕ್ಯುಸೆಕ್ |
| **ಹೇಮಾವತಿ ಜಲಾಶಯ** | |
| ಗರಿಷ್ಠ ಮಟ್ಟ | 2922 ಅಡಿ |
| ಇಂದಿನ ಮಟ್ಟ. | 2902.07 ಅಡಿ |
| ಒಳಹರಿವು | 11470 ಕ್ಯುಸೆಕ್ |
| ಹೊರಹರಿವು | 300 ಕ್ಯುಸೆಕ್ |

## ವಂಚನೆ ಪ್ರಕರಣ: ಜಾಲಪ್ಪ ಸೊಸೆಗೆ 5 ವರ್ಷ ಜೈಲು

**ಬೆಂಗಳೂರು:** ಮೆಡಿಕಲ್ ಸೀಟು ಕೊಡಿಸುವುದಾಗಿ 45 ಲಕ್ಷ ರೂ. ಪಡೆದು ವಂಚಿಸಿದ್ದ ಪ್ರಕರಣದಲ್ಲಿ ಮಾಜಿ ಸಚಿವ ದಿ.ಆರ್.ಎಲ್. ಜಾಲಪ್ಪ ಸೊಸೆ ನಾಗವೇಣಿ ಅವರನ್ನು ದೋಷಿ ಎಂದು ಬೆಂಗಳೂರಿನ 42ನೇ ಎಸಿಎಂಎಂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಘೋಷಿಸಿ ಐದು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ.



ಪ್ರಕರಣದ ಪ್ರಮುಖ ಆರೋಪಿ ಹಾಗೂ ಆರ್.ಎಲ್.ಜಾಲಪ್ಪ ಅವರ ಪುತ್ರ ಜೆ.ನರಸಿಂಹಸ್ವಾಮಿ ವಿಚಾರಣೆಯ ಅವಧಿಯಲ್ಲೇ ಮೃತ ಪಟ್ಟಿದ್ದರಿಂದ ಅವರ ವಿರುದ್ಧದ ಪ್ರಕರಣ ಅಂತ್ಯ ಗೊಂಡಿತ್ತು. ಉಳಿದ ಆರೋಪಿ ಪತ್ನಿ ನಾಗವೇಣಿ ವಿರುದ್ಧದ ವಿಚಾರಣೆ ಪೂರ್ಣಗೊಳಿಸಿದ ನ್ಯಾಯಾಲಯ ಶುಕ್ರವಾರ ಮಹತ್ವದ ತೀರ್ಪು ಪ್ರಕಟಿಸಿದೆ.

ಜೆ.ನರಸಿಂಹಸ್ವಾಮಿ ಮತ್ತು ನಾಗವೇಣಿ ಅವರು ಪ್ರಕಾಶ್ ಕುಮಾರ್ ಎಂಬುವರಿಗೆ ಮೆಡಿಕಲ್ ಸೀಟ್ ಕೊಡಿಸುವುದಾಗಿ ನಂಬಿಸಿ 45 ಲಕ್ಷ ಪಡೆದು ವಂಚಿಸಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ಸಂಬಂಧ ಯಲಹಂಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂದೀಪ್ ಪಾಟೀಲ್ ಅವರು ನಾಗವೇಣಿಗೆ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 120ಬಿ (ಸಂಚು) ಅಡಿ ಮೂರು ವರ್ಷಗಳ ಜೈಲು ಶಿಕ್ಷೆ ಹಾಗೂ ರೂ.10,000 ದಂಡ, ಸೆಕ್ಷನ್ 420 (ವಂಚನೆ) ಅಡಿ ಐದು ವರ್ಷಗಳ ಜೈಲು ಶಿಕ್ಷೆ ಹಾಗೂ 10,000 ರೂ. ದಂಡ ವಿಧಿಸಿ ಆದೇಶದ್ದಾರೆ.

ಚಿಕ್ಕಬಳ್ಳಾಪುರ ಕ್ಷೇತ್ರದಿಂದ ದಿ.ಆರ್.ಎಲ್.ಜಾಲಪ್ಪ ನಾಲ್ಕು ಬಾರಿ ಕಾಂಗ್ರೆಸ್ ಪಕ್ಷದಿಂದ ಸಂಸದರಾಗಿದ್ದರು. ಕೇಂದ್ರ ಜವಳಿ ಸಚಿವರಾಗಿದ್ದರು.

## ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ಸಭೆ ಶೀಘ್ರ: ಎಚ್‌ಡಿಕೆ

**ಬೆಂಗಳೂರು:** ಬಿಜೆಪಿ–ಜೆಡಿಎಸ್ ಮಧ್ಯೆ ಸಮನ್ವಯ ಸಮಿತಿ ಸಭೆ ಶೀಘ್ರ ನಡೆಯಲಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಜೊತೆ ಚರ್ಚೆ ನಂತರ ಮಾತನಾಡಿದ ಅವರು, ರಾಜ್ಯ

ಪುಟ 2ಕ್ಕೆ

### ವಿಜಯೇಂದ್ರ–ಎಚ್‌ಡಿಕೆ ಸುದೀರ್ಘ ಸಮಯ ಚರ್ಚೆ


**ಬೆಂಗಳೂರು:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಅವರನ್ನು ಶುಕ್ರವಾರ ಭೇಟಿ ಮಾಡಿ ಚರ್ಚಿಸಿದರು. ಬೆಂಗಳೂರಿನಲ್ಲಿ ಭೇಟಿಯಾದ ಅವರು ರಾಜ್ಯ ರಾಜಕೀಯದ ಪ್ರಚಲಿತ ವಿದ್ಯಮಾನಗಳ ಕುರಿತು ಸಮಗ್ರವಾಗಿ

ಪುಟ 2ಕ್ಕೆ



## ಮೈಸೂರು ವಿವಿ ಪರಿಶಿಷ್ಟರ ಶಿಷ್ಯವೇತನ ಬಿಕ್ಕಟ್ಟು ಪರಿಹಾರ

**ಬೆಂಗಳೂರು:** ಮೈಸೂರು ವಿಶ್ವವಿದ್ಯಾನಿಲಯದ 2026–27ನೇ ಸಾಲಿನಲ್ಲಿ ಸಂಶೋಧನೆ ಕೈಗೊಂಡಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಂಶೋಧನಾ ವಿದ್ಯಾರ್ಥಿಗಳ ಶಿಷ್ಯವೇತನ ಸಮಸ್ಯೆಯನ್ನು ಸಚಿವ ಡಾ.ಯತೀಂದ್ರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಬಗೆಹರಿಸಲಾಯಿತು.




ಸಚಿವರ ಗೃಹ ಕಛೇರಿ ಕಾವೇರಿಯಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ವಿದ್ಯಾರ್ಥಿಗಳ ಈ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಬೇಕು. ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಒಟ್ಟು 116 ವಿದ್ಯಾರ್ಥಿ ಗಳಿಗೂ ಪ್ರವೇಶಾತಿ ನೀಡಬೇಕು ಎಂದು ಸಚಿವರು ಅಧಿಕಾರಿಗಳಿಗೆ ತಿಳಿಸಿದರು. ಮಂಡ್ಯ ಮತ್ತು ಚಾಮರಾಜನಗರ ವಿಶ್ವವಿದ್ಯಾಲಯಗಳು ಪ್ರತ್ಯೇಕ ಗೊಂಡಿರುವುದರಿಂದ ಮೈಸೂರು ವಿಶ್ವವಿದ್ಯಾಲಯಕ್ಕೆ ಆರ್ಥಿಕ ಸಂಪನ್ಮೂಲಗಳ

ಪುಟ 2ಕ್ಕೆ

## ಸಾಹಿತಿ ಸಿ.ಎನ್.ಮುಕ್ತಾ ವಿಧಿವಶ

**ಮೈಸೂರು:** ಖ್ಯಾತ ಸಾಹಿತಿ ಸಿ.ಎನ್.ಮುಕ್ತಾ (ಕಳ್ಳಂಬೆಳ್ಳ ನರಸಿಂಹಮೂರ್ತಿ ಮುಕ್ತಾ) ಶುಕ್ರವಾರ ಮುಂಜಾನೆ ಅನಾರೋಗ್ಯದಿಂದ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 75 ವರ್ಷ ವಯಸ್ಸಾಗಿತ್ತು.



ಮುಕ್ತಾ ಅವರು 75ಕ್ಕೂ ಅಧಿಕ ಕಾದಂಬರಿ, 15 ಕಥಾಸಂಕಲನ ಬರೆದಿದ್ದಾರೆ. ಅವರ ವಿಮುಕ್ತಿ ಕಾದಂಬರಿ ಆಧರಿಸಿ ರಾಜೇಂದ್ರಸಿಂಗ್ ಬಾಬು ಅವರು ದೋಣಿ ಸಾಗಲಿ ಸಿನಿಮಾ ನಿರ್ದೇಶಿಸಿದ್ದರು. ಅಲ್ಲದೆ ಮೇಘ ಮಂದಾರ ಕಾದಂಬರಿ ಆಧರಿಸಿ ಕೋಡ್ಲು ರಾಮಕೃಷ್ಣ ಅವರು ಮಿಸ್ ಕ್ಯಾಲಿಫೋರ್ನಿಯಾ ಸಿನಿಮಾ ನಿರ್ದೇಶಿಸಿದ್ದರು. ರಾಜ್ಯೋತ್ಸವ ಪ್ರಶಸ್ತಿ, ಅತ್ತಿಮಬ್ಬೆ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದರು.

ಸುಖದ ಸೋಪಾನ, ಕ್ಷಮಯಾ ಧರಿತ್ರಿ, ದಡ ಸೇರಿದ ನೌಕೆ, ಜೀವನಚಕ್ರ, ಅಮೃತಮಯಿ, ವಿಮುಕ್ತಿ ಅವರ ಪ್ರಸಿದ್ಧ ಕಾದಂಬರಿಗಳು. ಹಲವು ಕಾದಂಬರಿಗಳು ರಾಜ್ಯದ ಪ್ರಮುಖ ವಾರಪತ್ರಿಕೆಗಳಲ್ಲಿ ಧಾರಾವಾಹಿಯಾಗಿ ಪ್ರಕಟವಾಗಿವೆ.

ಅವಿವಾಹಿತರಾಗಿದ್ದ ಅವರಿಗೆ ಸೋದರ, ಸೋದರಿ ಇದ್ದಾರೆ. ಸರ್ಕಾರಿ ಪ್ರೌಢಶಾಲೆಯ ಇಂಗ್ಲಿಷ್ ಶಿಕ್ಷಕಿಯಾಗಿ, ಮುಖ್ಯ ಶಿಕ್ಷಕಿಯಾಗಿ 25 ವರ್ಷಕ್ಕೂ ಅಧಿಕ ಕಾಲ ಕಾರ್ಯನಿರ್ವಹಿಸಿ ಸ್ವಯಂ ನಿವೃತ್ತಿ ಪಡೆದಿದ್ದರು. ಸಾಹಿತಿ ನವರತ್ನ ರಾಮ್ ರಾವ್ ಮುಕ್ತಾ ಅವರ ಚಿಕ್ಕಪ್ಪ. ಲಕ್ಷ್ಮಿಪುರಂನ ಆರ್.ಟಿ.ಓ ವೃತ್ತ

ಪುಟ 2ಕ್ಕೆ

## ಅಕ್ರಮ ವಲಸಿಗರಿಗೆ ಶಾಶ್ವತ ನೆಲೆ

### ರಾಜ್ಯ ಸರ್ಕಾರದಿಂದ ಅಕ್ರಮ ಪಿಆರ್‌ಸಿ: ಅಮಿತ್ ಶಾಗೆ ಕರಂದ್ಲಾಜೆ ಪತ್ರ

**ಬೆಂಗಳೂರು:** ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿರುವ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ಕುರಿತು ಸಂವಿಧಾನಾತ್ಮಕ ಹಾಗೂ ರಾಷ್ಟ್ರೀಯ ಭದ್ರತಾ ಆಧಾರದ ಮೇಲೆ ತಕ್ಷಣದ ಮಧ್ಯಪ್ರವೇಶ ಮಾಡುವಂತೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಕೇಂದ್ರದ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದಾರೆ.



ಕರ್ನಾಟಕ ಸರ್ಕಾರ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ಕುರಿತು ಕೇಂದ್ರ ಸರ್ಕಾರದ ಮಧ್ಯಪ್ರವೇಶವನ್ನು ಕೋರಿ ಮನವಿ ಸಲ್ಲಿಸುತಿದ್ದೇನೆ. ಈ ಅಧಿಸೂಚನೆಯು ಸಂವಿಧಾನಾತ್ಮಕ, ಕಾನೂನುಬದ್ಧ ಹಾಗೂ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ. ಕೇಂದ್ರ ಸರ್ಕಾರದಿಂದ ತುರ್ತು


ಪುಟ 2ಕ್ಕೆ

# ಜಿಬಿಎ ಚುನಾವಣೆ: ಡಿಸೆಂಬರ್‌ಗೆ ಸಮಯ ಕೇಳಿ 'ಸುಪ್ರೀಂ'ಗೆ ಮನವಿ

## ಎಸ್‌ಐಆರ್‌ಗೆ ಸಿಬ್ಬಂದಿ ನೇಮಕ: ರಾಜ್ಯ ಸರ್ಕಾರದ ಅರ್ಜಿ | ಆಗಸ್ಟ್‌ನಲ್ಲಿ ಚುನಾವಣೆ ಕಷ್ಟ

**ನವದೆಹಲಿ:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆಯನ್ನು ಡಿಸೆಂಬರ್ ಒಳಗೆ ನಡೆಸಲು ಅನುಮತಿ ನೀಡುವಂತೆ ಕೋರಿ ಸುಪ್ರೀಂ ಕೋರ್ಟ್‌ಗೆ ರಾಜ್ಯ ಸರ್ಕಾರ ಅರ್ಜಿ ಸಲ್ಲಿಸಿದೆ. ರಾಜ್ಯದಲ್ಲಿ ಎಸ್‌ಐಆರ್ ನಡೆಯುತ್ತಿರುವುದರಿಂದ ಆಗಸ್ಟ್‌ನಲ್ಲಿ ಚುನಾವಣೆ ನಡೆಸುವುದು ಕಷ್ಟ ಎಂದು ರಾಜ್ಯ ಸರ್ಕಾರ ವಾದ ಮಂಡಿಸಿದೆ.

ಬೆಂಗಳೂರಿನಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದೆ. ಕರಡು ಮತದಾರರ ಪಟ್ಟಿ ಪ್ರಕಟಣೆ, ಆಕ್ಷೇಪಣೆಗಳ ಸ್ವೀಕಾರ ಮತ್ತು ಅವುಗಳ ವಿಚಾರಣೆ ಇನ್ನೂ ಪೂರ್ಣಗೊಂಡಿಲ್ಲ. ಚುನಾವಣೆ ನಡೆಸುವ ಸಿಬ್ಬಂದಿಯೇ ಎಸ್‌ಐಆರ್ ಕೆಲಸದಲ್ಲೂ ನಿರತರಾಗಿದ್ದಾರೆ. ಸುಮಾರು 8,972 ಬಿಎಲ್ಓಗಳು, 938 ಮೇಲ್ವಿಚಾರಕರು, 28 ಇಆರ್‌ಒ, 75 ಸಹಾಯಕ ಇಆರ್‌ಒಗಳು ಸೇರಿದಂತೆ ಸಾವಿರಾರು ಸಿಬ್ಬಂದಿ ಈಗಾಗಲೇ ಎಸ್‌ಐಆರ್ ಕಾರ್ಯದಲ್ಲಿ ತೊಡಗಿದ್ದಾರೆ



ಎಂದು ಸುಪ್ರೀಂ ಕೋರ್ಟ್‌ಗೆ ರಾಜ್ಯ ಸರ್ಕಾರ ತಿಳಿಸಿದೆ.

ಐದು ಬೆಂಗಳೂರು ನಗರ ಪಾಲಿಕೆಗಳಿಗೆ 31 ಆಗಸ್ಟ್ 2026 ರೊಳಗೆ ಚುನಾವಣೆ ಪೂರ್ಣಗೊಳಿಸುವಂತೆ ಸುಪ್ರೀಂ ಕೋರ್ಟ್ ನಿರ್ದೇಶಿಸಿತ್ತು. ಈ 20 ಮೇ 2026ರ ಆದೇಶವನ್ನು ಮಾರ್ಪಡಿಸುವಂತೆ ಸರ್ಕಾರ ಕೋರಿದೆ. ಜಿಬಿಎ ಚುನಾವಣೆಗೆ ಸುಮಾರು 60 ಸಾವಿರ ಸಿಬ್ಬಂದಿ ಅಗತ್ಯವಿದೆ.

ಪುಟ 2ಕ್ಕೆ

### ಸೋಲಿನ ಭೀತಿಯಿಂದ ಮುಂದೂಡಿಕೆ: ಬಿಜೆಪಿ

ಸೋಲಿನ ಭೀತಿಯಿಂದ ಜಿಬಿಎ ಚುನಾವಣೆ ಮುಂದೂಡಿಕೆಗೆ ಸರ್ಕಾರ ಮುಂದಾಗಿದೆ. ಸುಪ್ರೀಂ ಕೋರ್ಟ್‌ಗೆ ಮರು ಪರಿಶೀಲನಾ ಅರ್ಜಿ ಹಾಕಿದ್ದಾರೆ. ಮತದಾರರ ಹಕ್ಕನ್ನ ಕಿತ್ತುಕೊಳ್ಳಲು ಹೊರಟಿದ್ದಾರೆ. ಜಿಬಿಎನಲ್ಲಿ ಸತ್ತವರ ಹೆಸರನ್ನ ತೆಯಬೇಕು. ಆದರೆ ಹೊರಗಡೆಯಿಂದ ಬಂದವರ ಹೆಸರನ್ನು ಸೇರಿಸಲಾಗ್ತಿದೆ. ಈ ಪ್ರಾಂತ್ಯದವರ ಹಕ್ಕನ್ನ ಕಿತ್ತುಕೊಳ್ಳಲು ಆಗಲ್ಲ. ಗುಂಪಾಗಿ ಹೋಗಿ ಪರಿಷ್ಕರಣೆ ಮಾಡಲಾಗ್ತಿದೆ. ಸೋಲಿನ ಭೀತಿಯಿಂದ ಜಿಬಿಎ ಚುನಾವಣೆ ಮುಂದೂಡಿಕೆ ಮಾಡಲಾಗುತ್ತಿದೆ ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.

### ಜಿಬಿಎ ಚುನಾವಣೆಗೆ ಸಿದ್ಧತೆ

**ಬೆಂಗಳೂರು:** ಆಗಸ್ಟ್ ಅಂತ್ಯದೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆ ನಡೆಸಲು ಸರ್ಕಾರ ಸಿದ್ಧವಿದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಅಧಿಕಾರಿಗಳು ಕೆಲವು ನ್ಯಾಯಸಮ್ಮತ ಆತಂಕಗಳನ್ನು ವ್ಯಕ್ತಪಡಿಸಿದ್ದರೂ ಈ ವಿಷಯದಲ್ಲಿ ತಾವು ಮಧ್ಯಪ್ರವೇಶ ಮಾಡುವುದಿಲ್ಲ. ಕಾಂಗ್ರೆಸ್ ಪಕ್ಷ ಈಗಾಗಲೇ ಜಿಬಿಎ ಚುನಾವಣೆಗೆ ಸಿದ್ಧತೆ ಆರಂಭಿಸಿದೆ ಎಂದು ತಿಳಿಸಿದರು.

ಮೋಡ ಬಿತ್ತನೆ ಮೂಲಕ ಮಳೆ ಕೊರತೆಯನ್ನು ನಿವಾರಿಸಬೇಕೆಂಬ ಬೇಡಿಕೆ ಕುರಿತು ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಶಾಸಕರಿಂದ ಈ ಕುರಿತು ಬಲವಾದ ಒತ್ತಾಯ ವ್ಯಕ್ತವಾಗಿದೆ. ಈ ಪ್ರಸ್ತಾವನೆ ಕುರಿತು ಕಾನೂನು ಹಾಗೂ ಹಣಕಾಸು

ಪುಟ 2ಕ್ಕೆ

## ನಟ ಪ್ರಕಾಶ್ ರಾಜ್‌ಗೆ ಜಾಮೀನು



**ಬೆಂಗಳೂರು:** ಒಂದಕ್ಕಿಂತ ಹೆಚ್ಚು ರಾಜ್ಯಗಳಲ್ಲಿ ಮತದಾರರ ಗುರುತಿನ ಚೀಟಿ ಹೊಂದಿದ್ದಾರೆಂಬ ಆರೋಪ ಪ್ರಕರಣದಲ್ಲಿ ಖ್ಯಾತ ನಟ ಪ್ರಕಾಶ್ ರಾಜ್‌ಗೆ ಬಿಗ್ ರಿಲೀಫ್ ಸಿಕ್ಕಿದೆ. ಪ್ರಕರಣದ ವಿಚಾರಣೆ ನಡೆಸಿದ ಕೋರ್ಟ್ ಜಾಮೀನು ಮಂಜೂರು ಮಾಡಿದೆ.

ನಟ ಪ್ರಕಾಶ್ ರಾಜ್ ವಿರುದ್ಧ ನಾಲ್ಕು ವೋಟರ್ ಐಡಿ ಹೊಂದಿರುವ ಆರೋದಡಿ ಬೆಂಗಳೂರಿನ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಜಾಮೀನು ರಹಿತ ವಾರಂಟ್ ಜಾರಿ ಮಾಡಿತ್ತು. ವಾರಂಟ್ ರೀಕಾಲ್ ಮಾಡಿಸಲು ನಟ ಕೋರ್ಟ್‌ಗೆ ಹಾಜರಾಗಿದ್ದರು. ಅರ್ಜಿ ವಿಚಾರಣೆ ನಡೆಸಿದ 48ನೇ ಎಸಿಜೆಎಂ ಕೋರ್ಟ್ ಜಾಮೀನು ಮಂಜೂರು ಮಾಡಿದೆ. 4 ಸಾವಿರ ನಗದು ಶ್ಯೂರಿಟಿ ನೀಡಲು ಕೋರ್ಟ್ ಸೂಚಿಸಿದೆ. ಪ್ರಕಾಶ್ ರಾಜ್ ನಾಲ್ಕು ವೋಟರ್ ಐಡಿ ಹೊಂದಿದ್ದರೆಂದು ಪಿಸಿಆರ್ ದಾಖಲಿಸಲಾಗಿತ್ತು. ದಿಲೀಪ್ ರಾಜ್ ಎಂಬವರು ನಟನ ವಿರುದ್ಧ ಕೇಸ್ ಹಾಕಿದ್ದರು.

# ಹಾರೋಕೊಪ್ಪ ಡೇರಿಯ ನೂತನ ಕಟ್ಟಡ ನಿರ್ಮಾಣಕ್ಕೆ ಲಿಂಗೇಶ್‌ಕುಮಾರ್ ಚಾಲನೆ

ಚನ್ನಪಟ್ಟಣ: ತಾಲೂಕಿನಲ್ಲಿ ಹೈನೋದ್ಯಮಕ್ಕೆ ಪೂರಕ ವಾತಾವರಣ ನಿರ್ಮಾಣ ಮಾಡಲು ಕ್ರಮ ಕೈಕೊಳ್ಳಲಾಗುತ್ತಿದೆ ಎಂದು ಬಿಡಿಸಿಸಿ ಬ್ಯಾಂಕ್ ಮತ್ತು ಬಮೂಲ್ ನಿರ್ದೇಶಕರಾದ ಎಸ್. ಲಿಂಗೇಶ್‌ಕುಮಾರ್ ತಿಳಿಸಿದರು.

ತಾಲೂಕಿನ ಹಾರೋಕೊಪ್ಪ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಕಟ್ಟಡ ಮತ್ತು ಬಿಎಂಸಿ ಕೇಂದ್ರದ ನಿರ್ಮಾಣದ ಕಾಮಗಾರಿಗೆ ಶುಕ್ರವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಹಾಲು ಉತ್ಪಾದನೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನದಲ್ಲಿರುವ ಕ್ಷೇತ್ರದ ಹೈನೋದ್ಯಮಕ್ಕೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಶ್ರಮಿಸಲಾಗುತ್ತಿದೆ ಎಂದರು.

### ಹಾರೋಪಕೊಪ್ಪ: ಹಾಲಿನ ಉತ್ಪಾದನೆಯಲ್ಲಿ ಜಿಲ್ಲೆಗೆ ಪ್ರಥಮ

ಜಿಲ್ಲೆಯಲ್ಲೇ ಅತೀ ಹೆಚ್ಚು ಹಾಲು ಉತ್ಪಾದನೆ ಮಾಡುವ ಮೂಲಕ ಪ್ರಥಮ ಸ್ಥಾನದಲ್ಲಿರುವ ಹಾರೋಕೊಪ್ಪ ಗ್ರಾಮದ ಹಾಲು ಉತ್ಪಾದಕ ರೈತರಿಗೆ ಅಗತ್ಯ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು ಇದರಲ್ಲಿ ಪ್ರಥಮವಾಗಿ ಸುಸಜ್ಜಿತ ಕಟ್ಟಡ ನಿರ್ಮಾಣದ ಜೊತೆಗೆ ಬಿಎಂಸಿ ಕೇಂದ್ರವನ್ನು ನಿರ್ಮಾಣ ಮಾಡಲು ಚಾಲನೆ ನೀಡಲಾಗಿದೆ. ಈ ಕಟ್ಟಡಕ್ಕೆ ಬಮೂಲ್, ಕೆಎಂಎಫ್, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಗಳಿಂದ ಒಟ್ಟು 20 ಲಕ್ಷ ರೂ. ವರೆಗೆ ಅನುದಾನ ಲಭ್ಯವಾಗಲಿದೆ. ಹೆಚ್ಚುವರಿ ಅನುದಾನ ಸಂಗ್ರಹಕ್ಕೆ ಜನಪ್ರತಿನಿಧಿಗಳಿಂದ ಅನುದಾನಕ್ಕೆ ಮಂಡಳಿಯೊಂದಿಗೆ ತಮ್ಮ ಸಹಕಾರ ಇರಲಿದೆ ಎಂದರು.



### ಮ್ಯಾಟ್‌ಗಳಿಗೆ ಬೇಡಿಕೆ

ಹಾರೋಕೊಪ್ಪ ಗ್ರಾಮದಲ್ಲಿ 2 ಸಾವಿರ ರಾಸುಗಳು ಇವೆ, ರೈತರು 2 ಸಾವಿರ ಮ್ಯಾಟ್‌ಗೆ ಬೇಡಿಕೆ ಇಟ್ಟಿದ್ದಾರೆ. ಏಕಕಾಲಕ್ಕೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಮ್ಯಾಟ್‌ಗಳನ್ನು ಪೂರೈಸುವುದು ಸಾಧ್ಯವಿಲ್ಲ. ಆದರೂ ಈ ಬಗ್ಗೆ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್‌ಅವರ ಗಮನ ಸೆಳೆದು ಶೇ. 50 ರಷ್ಟು ಮ್ಯಾಟ್ ಕೊಡಿಸಲು ಶ್ರಮಿಸುತ್ತೇನೆ ಎಂದು ಆಡಳಿತ ಮಂಡಳಿ ನಿರ್ದೇಶಕರಿಗೆ ಲಿಂಗೇಶ್‌ಕುಮಾರ್ ಭರವಸೆ ನೀಡಿದರು.

ಸಂದರ್ಭದಲ್ಲಿ ಡೈರಿ ಆಡಳಿತ ಮಂಡಳಿಯಿಂದ ಬಮೂಲ್ ನಿರ್ದೇಶಕ ಎಸ್. ಲಿಂಗೇಶ್‌ಕುಮಾರ್, ಬಮೂಲ್ ಶಿಥಿಲ ಕೇಂದ್ರ ವ್ಯವಸ್ಥಾಪಕ ಹೇಮಂತ್, ಬಮೂಲ್ ವಿಸ್ತರಣಾಧಿಕಾರಿ ಮಹದೇವೇಗೌಡರನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಸಂದರ್ಭದಲ್ಲಿ ಡೈರಿ ಉಪಾಧ್ಯಕ್ಷರಾಗಿ ಹೆಚ್.ಎಂ. ಕರೀಗೌಡ, ನಿರ್ದೇಶಕರುಗಳಾದ ಗ್ರಾ..ಪಂ. ಮಾಜಿ ಅಧ್ಯಕ್ಷ ಡಿ. ಶಿವಲಿಂಗಯ್ಯ, ಚಿಕ್ಕತಮ್ಮಯ್ಯ, ಹೆಚ್.ಎಂ. ಮಹದೇವ, ಹೆಚ್. ಎಸ್. ಸಾಗರ್ ಹಾಗೂ ಕಮಲಮ್ಮ ಹಾಗೂ ತಾಯಮ್ಮ, ಜ್ಯೋತಿ, ಪಿ. ಚೌಡಯ್ಯ ಹಾಗೂ ಮುಖಂಡರಾದ ಸೋಗಾಲ ಸೊಸೈಟಿ ಮಾಜಿ ಅಧ್ಯಕ್ಷ ಹೆಚ್.ಎಲ್. ಶಂಕರೇಗೌಡ (ಹೊಟೇಲ್), ಹಾರೋಕೊಪ್ಪ ಗ್ರಾ.ಪಂ ಮಾಜಿ ಅಧ್ಯಕ್ಷ ಹೆಚ್.ಟಿ. ಶಂಕರೇಗೌಡ, ಹೆಚ್. ಎಲ್. ಶಂಕರೇಗೌಡರು(ಮಾಜಿ ಚೇರ್ಮನ್), ಯ॥ ಜೆ. ಪುಟ್ಟಸ್ವಾಮಿಗೌಡ, ಯ॥ ಹೆಚ್.ಎಂ. ಪುಟ್ಟೇಗೌಡ, ಗ್ರಾ.ಪಂ. ಮಾಜಿ ಸದಸ್ಯ ಹೆಚ್.ಎಸ್. ದೇವರಾಜು, ಹೆಚ್.ಕೆ. ಮಹೇಂದ್ರಕುಮಾರ್, ಹೆಚ್.ಕೆ. ಮರೀಗೌಡ, ಎಸ್. ಸಿದ್ದರಾಜು, ಮೇಳಪ್ಪ ಸಿದ್ದಪ್ಪ, ಹೆಚ್.ಡಿ.ಸಿದ್ದೇಗೌಡ, ಕುಮಾರ ಬೋರೇಗೌಡ, ಸೋಮಸುಂದರ್, ಸಂಘದ ಸಿಇಒ ಸಿದ್ದೇಗೌಡ ಪಿ, ಹಾಲು ಪರೀಕ್ಷಕರಾದ ಸಿದ್ದರಾಜು ಹಾಗೂ ಸಾಗರ್, ಗುಮಾಸ್ತ ಜಗದೀಶ್ ಆರಾಧ್ಯ, ಸಹಾಯಕರಾದ ಕಿರಣ್ ಹಾಗೂ ಮರಿಸ್ವಾಮಿ ಉಪಸ್ಥಿತರಿದ್ದರು.

### ದಿನನಿತ್ಯ 8 ಲಕ್ಷ ಲೀಟರ್ ಹಾಲು ಉತ್ಪಾದನೆ

**ಹೆಚ್.ಎಸ್.ಪುಟ್ಟರಾಜು**

ಸಂಘದ ಅಧ್ಯಕ್ಷರಾದ ಹೆಚ್.ಎಸ್. ಪುಟ್ಟರಾಜು ಅವರು ಮಾತನಾಡಿ, ಸಂಘದಲ್ಲಿ ನಿತ್ಯ 8 ಸಾವಿರ ಲೀ. ಹಾಲು ಉತ್ಪಾದನೆ ಆಗುತ್ತಿದ್ದು, ಹಾಲು ಉತ್ಪಾದನೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿದೆ. ಇನ್ನಷ್ಟು ಸೌಲಭ್ಯಗಳನ್ನು ಕಲ್ಪಿಸಲು 60 ಲಕ್ಷ ರೂ ಅಂದಾಜು ವೆಚ್ಚದಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಕ್ರಿಯಾಯೋಜನೆ ಸಿದ್ದವಾಗಿದೆ. ಇದೀಗ ಭೂಮಿ ಪೂಜೆ ನೆರವೇರಿದೆ. ಕಟ್ಟಡದ ಜೊತೆಗೆ ಬಿಎಂಸಿ ಕೇಂದ್ರ ಸ್ಥಾಪನೆ ಆದರೆ ರೈತರ ಹಾಲಿಗೆ ಹೆಚ್ಚಿನ ಗುಣಮಟ್ಟ ಕಾಪಾಡಿ ಹೆಚ್ಚು ಲಾಭ ರಲು ಸಹಕಾರಿಯಾಗಿದೆ ಎಂದರು.

ಮೊದಲ ಪುಟದಿಂದ

## ಸಚಿವರ ವೈಯಕ್ತಿಕ ನಿರ್ಧಾರವಲ್ಲ

ನಾವು ಬೀದಿ ವ್ಯಾಪಾರಿಗಳ ವಿರುದ್ಧವಲ್ಲ. ಯಾರಿಗೂ ತೊಂದರೆ ನೀಡುವುದಿಲ್ಲ. ಆದರೆ ಮುಖ್ಯ ರಸ್ತೆಗಳಲ್ಲಿ ವ್ಯಾಪಾರಕ್ಕೆ ಅವಕಾಶ ಇರುವುದಿಲ್ಲ. ಈ ಕುರಿತು ಸುಪ್ರೀಂ ಕೋರ್ಟ್ ಕೂಡ ಸ್ಪಷ್ಟ ನಿರ್ದೇಶನಗಳನ್ನು

ನೀಡಿದೆ. ಆದ್ದರಿಂದ ಕೆಲವು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗಿದೆ. ಬೀದಿ ವ್ಯಾಪಾರಿಗಳು ಸಂಚಾರಕ್ಕೆ ಅಡ್ಡಿಯಾಗದಂತೆ ವ್ಯಾಪಾರ ನಡೆಸಲು ನಿಗದಿತ ವ್ಯಾಪಾರ ವಲಯಗಳನ್ನು (ವೆಂಡಿಂಗ್ ವಲಯಗಳು) ಗುರುತಿಸಲಾಗುವುದು ಎಂದು ತಿಳಿಸಿದರು. ಅರ್ಹ ಬೀದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ವಿತರಿಸಲು ಸರ್ಕಾರ ಸಮೀಕ್ಷೆ ನಡೆಸಿದೆ. ಸುಮಾರು 30 ಸಾವಿರ ಬೀದಿ ವ್ಯಾಪಾರಿಗಳು ನೆರವಿಗಾಗಿ ವಾಹನಗ ಳಿಗೆ ಅರ್ಜಿ ಸಲ್ಲಿಸಿದ್ದಾರೆ. ವಾಹನಗಳ ವಿತರಣೆಗೆ ಶೀಘ್ರದಲ್ಲೇ ಟೆಂಡರ್ ಕರೆಯಲಾಗುವುದು ಎಂದು ತಿಳಿಸಿದರು.

## ಜಿಬಿಎ ಚುನಾವಣೆಗೆ ಸಿದ್ಧತೆ

ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು.

## ಸಮಿತಿ ಸಭೆ ಶೀಘ್ರ: ಎಚ್‌ಡಿಕೆ

ರಾಜಕೀಯದ ಬಗ್ಗೆ ವಿಜಯೇಂದ್ರ ಜೊತೆ ಚರ್ಚೆ ನಡೆದಿದೆ. ಸಮನ್ವಯ ಸಮಿತಿ ಬಗ್ಗೆ ಈಗಾಗಲೇ ಅಂತಿಮ ಆಗಿದೆ. ಅಲ್ಲದೆ, ಹಿರಿಯೂರು ಉಪಚುನಾವಣೆಗೆ ಜೆಡಿಎಸ್ ಗೆ ಟಿಕೆಟ್ ಕೊಡಿ ಅಂತ ಮನವಿ ಮಾಡಿದ್ದೇನೆ ಎಂದು ತಿಳಿಸಿದರು. ರಾಜ್ಯ ಸರ್ಕಾರ ಶಾಶ್ವತ ನಿವಾಸ ಪ್ರಮಾಣ ಪತ್ರ ನಿಡ್ತಿರೋದು ಅಕ್ರಮ ವಲಸಿಗರನ್ನು ಸಕ್ರಮ ಮಾಡಲು ಎಂಬ ಬಿಜೆಪಿ ಆರೋಪಕ್ಕೆ ಕೇಂದ್ರ ಸಚಿವ ಕುಮಾರಸ್ವಾಮಿ ಧ್ವನಿಗೂಡಿಸಿದರು.

## ಸಾಹಿತಿ ಸಿ.ಎನ್.ಮುಕ್ತಾ ವಿಧಿವಶ

ಸಮೀಪದ ನಿವಾಸದಲ್ಲಿ ಅವರ ಅಂತಿಮ ದರ್ಶನ ಏರ್ಪಡಿಸಲಾಗಿತ್ತು. ಶುಕ್ರವಾರ ಮಧ್ಯಾಹ್ನ ನಗರದ ಚಾಮುಂಡಿ ಬೆಟ್ಟದ ತಪ್ಪಲಿನ ವಿದ್ಯುತ್ ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಯಿತು.

## ವಿಜಯೇಂದ್ರ–ಎಚ್‌ಡಿಕೆ ಚರ್ಚೆ

ಚರ್ಚಿಸಿದ್ದಾರೆ. ಇದೇ ವೇಳೆ ರೈತವಿರೋಧಿ, ಜನವಿರೋಧಿ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಮುಂದಿನ ಹೋರಾಟದ ರೂಪುರೇಷೆಗಳು, ಮುಂಬರುವ ಚುನಾವಣಾ ಸವಾಲುಗಳನ್ನು ಮತ್ತಷ್ಟು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ಎರಡೂ ಪಕ್ಷಗಳ ಮೈತ್ರಿಯನ್ನು ಬಲಪಡಿಸಿ, ಒಂದಾಗಿ ಮುನ್ನಡೆಯುವ ನಿಟ್ಟಿನಲ್ಲಿ ಸುದೀರ್ಘವಾಗಿ ಸಮಾಲೋಚನೆ ನಡೆಸಿದ್ದಾರೆ.

## ಸಮಯ ಕೇಳಿ 'ಸುಪ್ರೀಂ'ಗೆ ಮನವಿ

ಮತದಾನ ಕೇಂದ್ರ ಸಿಬ್ಬಂದಿ, ರಿಟರ್ನಿಂಗ್ ಆಫೀಸರ್, ಭದ್ರತಾ ಸಿಬ್ಬಂದಿ ಸೇರಿದಂತೆ ದೊಡ್ಡ ಪ್ರಮಾಣದ ಮಾನವ ಸಂಪನ್ಮೂಲ ಬೇಕಾಗುತ್ತದೆ. ಈಗ ಎಸ್‌ಐಆರ್ ಕೂಡ ನಡೆಯುತ್ತಿರುವುದರಿಂದ ಸಿಬ್ಬಂದಿ ಕೊರತೆ ಉಂಟಾಗುತ್ತದೆ. ಬೆಂಗಳೂರು ಮತದಾರರ ಸಂಖ್ಯೆ ಅತ್ಯಂತ ದೊಡ್ಡದಾಗಿದೆ. ಸುಮಾರು 1.03 ಕೋಟಿ ಮತದಾರರಿದ್ದಾರೆ. ಸುಮಾರು 40 ಲಕ್ಷ ಮನೆಗಳಿಗೆ ಭೇಟಿ ನೀಡಿ ಮತಪಟ್ಟಿ ಪರಿಶೀಲನೆ ನಡೆಸಬೇಕಿದೆ. ನಿಖರ ಮತದಾರರ ಪಟ್ಟಿಯಿಲ್ಲದೆ ಚುನಾವಣೆ ನಡೆಸುವುದು ಸೂಕ್ತವಲ್ಲ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗೆ ಅಂತಿಮ ಹಾಗೂ ಸರಿಯಾದ ಮತದಾರರ ಪಟ್ಟಿ ಅಗತ್ಯ. ಹೀಗಾಗಿ, ಚುನಾವಣೆ ನಡೆಸಲು ಡಿಸೆಂಬರ್ ವರೆಗೆ ಸಮಯ ಬೇಕು ಎಂದು ರಾಜ್ಯ ಸರ್ಕಾರ ಮನವಿ ಮಾಡಿದೆ.

## ಅಕ್ರಮ ವಲಸಿಗರಿಗೆ ಶಾಶ್ವತ ನೆಲೆ

ಪರಿಶೀಲನೆ ಅಗತ್ಯವಿದೆ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದ ಇದು ಆತಂಕಕಾರಿಯಾಗಿದೆ. ಇದರಲ್ಲಿನ ಅರ್ಹತಾ ಮಾನದಂಡಗಳು ಮುಖ್ಯವಾಗಿ ನಿವಾಸ ಮತ್ತು ಸ್ಥಳೀಯ ಕಂದಾಯ ಅಧಿಕಾರಿಗಳ ಪರಿಶೀಲನೆಯ ಮೇಲೆ ಆಧಾರಿತವಾಗಿವೆ. ಅಕ್ರಮ ವಲಸಿಗರು ಹಾಗೂ ವಿದೇಶಿ ನಾಗರಿಕರನ್ನು ತಡೆಯಲು ಪರಿಣಾಮಕಾರಿ ಕಾರ್ಯವಿಧಾನವೂ ಇಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

## ಶಿಷ್ಯವೇತನ ಬಿಕ್ಕಟ್ಟು ಪರಿಹಾರ

ಕೊರತೆ ಎದುರಾಗಿದೆ. ಈ ಕಾರಣದಿಂದ ಇಷ್ಟೊಂದು ದೊಡ್ಡ ಮಟ್ಟದ ಆರ್ಥಿಕ ಹೊರೆಯನ್ನು ಸಂಪೂರ್ಣವಾಗಿ ಭರಿಸಲು ವಿಶ್ವವಿದ್ಯಾಲಯಕ್ಕೆ ಸಾಧ್ಯವಾಗುವುದಿಲ್ಲ ಎಂದು ಮೈಸೂರು ವಿವಿ ಕುಲಪತಿ ಅಸಹಾಯಕತೆ ವ್ಯಕ್ತಪಡಿಸಿದರು. ಒಟ್ಟು ವಿದ್ಯಾರ್ಥಿಗಳಲ್ಲಿ 58 ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಹಾಗೂ ಉಳಿದ 58 ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯ ವತಿಯಿಂದ ಶಿಷ್ಯವೇತನ ಹಂಚಿಕೆ ಮಾಡಿ ನೀಡುವಂತೆ ತೀರ್ಮಾನಕ್ಕೆ ಬರಲು ಸೂಚಿಸಿದರು. ಸಚಿವರ ಈ ನಿರ್ಧಾರಕ್ಕೆ ಸಮಾಜ ಕಲ್ಯಾಣ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆ ಅಧಿಕಾರಿಗಳು ಪೂರಕವಾಗಿ ಪ್ರತಿಕ್ರಿಯಿಸಿದರು.

# ದೇಗುಲ ಜೀರ್ಣೋದ್ಧಾರಕ್ಕೆ 10 ಲಕ್ಷ

## ಶ್ರೀ ಬನ್ನಿಮಹಾಕಾಳಿ ಅಮ್ಮನವರ ದೇವಾಲಯ ಜೀರ್ಣೋದ್ಧಾರಕ್ಕೆ ನಗರಸಭೆವತಿಯಿಂದ ಸಹಾಯ

ರಾಮನಗರ: ನಗರದ ಪ್ರಧಾನ ದೇವತೆ ಶ್ರೀ ಬನ್ನಿ ಮಹಾಕಾಳಿ ಅಮ್ಮನವರ ದೇವಾಲಯದ ಜೀರ್ಣೋದ್ಧಾರಕ್ಕೆ ನಗರಸಭೆವತಿಯಿಂದ 10 ಲಕ್ಷ ರೂಗಳ ಧನ ಸಹಾಯದ ಚೆಕ್ ಅನ್ನು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ವಿತರಿಸಿದರು.

ನಗರಸಭೆಯ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇವಾಲಯದ ಪ್ರಮುಖರು ಚೆಕ್ ಸ್ವೀಕರಿಸಿದರು. ಈ ವೇಳ ಮಾತನಾಡಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ, ನಗರಸಭೆಯ 2026–27ನೇ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಬನ್ನಿಮಹಂಕಾಳಿ ದೇವಾಲಯದ ಜೀರ್ಣೋದ್ಧಾರಕ್ಕಾಗಿ 10 ಲಕ್ಷ ರೂಗಳ ಚೆಕ್ ನೀಡಲಾಗಿದೆ. ಇದು ನಾಗರೀಕರ ತೆರಿಗೆ ಹಣ, ಈ ಹಣವನ್ನು ಪೂರ್ಣವಾಗಿ ದೇಗುಲದ ಜೀರ್ಣೋದ್ಧಾರಕ್ಕೆ ವಿನಿಯೋಗ ಮಾಡುವಂತೆ ತಿಳಿಸಿದರು.

ಶ್ರೀ ಬನ್ನಿಮಹಾಕಾಳಿ ಅಮ್ಮನವರುನ್ನು ಸಮಸ್ತ ಭಕ್ತರು ಆರಾಧಿಸುತ್ತಾರೆ. ಪುರಾತನ ದೇವಾಲಯ ಆಗಿರುವುದರಿಂದ ದೇಗುಲದ ಸಮಿತಿಯವರು ಜೀರ್ಣೋದ್ಧಾರಕ್ಕಾಗಿ ಮನವಿ ಮಾಡಿದ್ದರು. 2026–27ನೇ ಆಯವ್ಯಯದಲ್ಲಿ ಧನಸಹಾಯವನ್ನು ನೀಡಲು ಎಲ್ಲ ನಗರಸಭಾ ಸದಸ್ಯರು ಒಕ್ಕೊರಲಿನಿಂದ ಸಮ್ಮತಿಸಿದ್ದರು. ಅದರಂತೆ ಈಗ ಚೆಕ್ ನೀಡಲಾಗಿದೆ ಎಂದರು.

ಶ್ರೀ ಬನ್ನಿಮಹಾಕಾಳಿ ಅಮ್ಮನವರ ದೇವಾಲಯಕ್ಕೆ ಇತಿಹಾಸ ಇದೆ. ಆಷಾಢ ಮಾಸದಲ್ಲಿ ಕರಗ ಮಹೋತ್ಸವ ಆರಂಭವಾದ ಮೇಲೆ ಬೇರೆ ಕರಗಗಳು ಆರಂಭಗೊಳ್ಳುತ್ತೇವೆ. ರೋಗ ರುಜಿನೆಗಳು ಬರ ಬಾರದೆಂದು ನಗರ ದೇವತೆಗಳನ್ನು ಪೂಜಾ ಕೈಂಕರ್ಯಗಳ ಮೂಲಕ ಆರಾಧನೆ ಮಾಡುತ್ತೇವೆ. ಆ ದೇವಿಯರ ಆಶೀರ್ವಾದ ನಗರದ ಜನರ ಮೇಲೆ ಸದಾ ಇರಲೆಂದು ಪ್ರಾರ್ಥಿಸಿದರು.

ರಾಮನಗರದ ಜನರು ಸೌಹಾರ್ದತೆಯಿಂದ ಜೀವನ ಸಾಗಿಸುತ್ತಿದ್ದು, ಪ್ರತಿಯೊಂದು ವರ್ಗದವರು ಜನರ ಭಾವನೆಗಳಿಗೆ ಅನುಗುಮವಾಗಿ ನಡೆದುಕೊಳ್ಳಬೇಕು. ದೇವಾಲಯ, ಮಸೀದಿ, ದರ್ಗಾ, ಚರ್ಚ್‌ಗಳು ಎಲ್ಲರಿಗೂ ಸೇರಿದ್ದು, ಅವುಗಳ ಅಭಿವೃದ್ಧಿಗೆ ಪರಸ್ಪರ ಸಹಕಾರ ಕೊಡಬೇಕು ಎಂದು ಕೆ.ಶೇಷಾದ್ರಿ ಹೇಳಿದರು.



### ಅಪರೂಪದಲ್ಲಿ ಅಪರೂಪದ ಅಧ್ಯಕ್ಷರು

ಜಿಲ್ಲಾ ದಲಿತ ಒಕ್ಕೂಟಗಳ ಅಧ್ಯಕ್ಷ ಶಿವಕುಮಾರಸ್ವಾಮಿ ಮಾತನಾಡಿ, ರಾಮನಗರ ನಗರಸಭೆ ತನ್ನ ಸಮಾಜ ಮುಖಿ ಕಾರ್ಯಗಳ ಮೂಲಕ ದೇಶದಲ್ಲಿಯೇ ಮಾದರಿ ನಗರಸಭೆಯಾಗಿ ರೂಪುಗೊಂಡಿದೆ. ನಗರಸಭೆ ಅಧ್ಯಕ್ಷ ಶೇಷಾದ್ರಿರವರು ಪೌರಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು ಮಾತ್ರವಲ್ಲದೆ ಎಲ್ಲ ವರ್ಗದ ಜನರಿಗೂ ಅವರ ಕುಲಕಸುಬಿಗೆ ಪೂರಕವಾದ ಕಿಟ್ ಗಳನ್ನು ವಿತರಿಸುವ ಮೂಲಕ ನಿಜವಾದ ಜನನಾಯಕ ಎನಿಸಿಕೊಂಡಿದ್ದಾರೆ ಎಂದು ಬಣ್ಣಿಸಿದರು.

### ಜನೋಪಯೋಗಿ ಕೆಲಸಗಳಿಗೆ ನಮ್ಮ ಸಹಕಾರವಿದೆ

ನಗರಸಭೆ ಸದಸ್ಯ ಮಂಜುನಾಥ್ ಮಾತನಾಡಿ, ನಗರಸಭೆಯು ಜನರ ತೆರಿಗೆ ಹಣದಿಂದಲೇ ರಸ್ತೆ, ಚರಂಡಿ, ಬೀದಿ ದೀಪಗಳನ್ನು ಒದಗಿಸುವ ಕಾರ್ಯಗಳು ನಿರಂತರವಾಗಿ ನಡೆಯುತ್ತಿವೆ. ಧಾರ್ಮಿಕ ಕೇಂದ್ರಗಳು ನೆಮ್ಮದಿ ಕಲ್ಪಿಸುವ ಸ್ಥಳಗಳು. ಆಯವ್ಯಯದಲ್ಲಿ ಘೋಷಿಸಿದಂತೆ ಜನರ ತೆರಿಗೆ ಹಣವನ್ನು ಜನರ ಉಪಯೋಗಕ್ಕೆ ವಿನಿಯೋಗಿಸಲಾಗುತ್ತಿದೆ ಎಂದು ಹೇಳಿದರು. ನಗರಸಭೆ ವತಿಯಿಂದ ಸಾರ್ವಜನಿಕ ಸ್ಥಳಗಳಲ್ಲಿ ದಿನ ಪತ್ರಿಕೆಗಳನ್ನು ಓದುವ ಸ್ಟಾಂಡ್, ಫುಡ್ ಸ್ಟ್ರೀಟ್ ನಿರ್ಮಾಣ ಸೇರಿದಂತೆ ಅನೇಕ ಜನೋಪಯೋಗಿ ಕೆಲಸಗಳು ನಡೆಯುತ್ತಿವೆ. ಅಧ್ಯಕ್ಷರು ಪಕ್ಷ ಬೇಧ ಮರೆತು ವಿಪಕ್ಷಗಳನ್ನು ವಿಶ್ವಾಸಕ್ಕೆ ಪಡೆದು ಕೆಲಸ ಮಾಡುತ್ತಿದ್ದಾರೆ. ನಾವುಗಳು ವಿರೋಧ ಪಕ್ಷದಲ್ಲಿದ್ದರೂ ಒಳ್ಳೆಯ ಉದ್ದೇಶಗಳಿಗೆ ರಾಜಕೀಯ ಮಾಡಬಾರದೆಂದು ಅಭಿವೃದ್ಧಿ ಕಾರ್ಯಗಳಿಗೆ ಕೈ ಜೋಡಿಸುತ್ತಾ ಬಂದಿದ್ದೇವೆ ಎಂದರು.

### ದೇವಾಲಯಕ್ಕೆ ಆರ್ಥಿಕ ನೆರವು ಸ್ವಾಗತ

ನಗರಸಭೆ ಸದಸ್ಯ ನಿಜಾಮುದ್ದೀನ್ ಷರೀಫ್ ಮಾತನಾಡಿ, ತನ್ನ ವಾರ್ಡಿನ ವ್ಯಾಪ್ತಿಗೆ ಬರುವ ಬನ್ನಿಮಹಂಕಾಳಿ ದೇಗುಲದ ಜೀರ್ಣೋದ್ಧಾರಕ್ಕೆ ನಗರಸಭೆ ಆರ್ಥಿಕ ನೆರವು ಕಲ್ಪಿಸುತ್ತಿರುವುದು ಸಂತಸದ ವಿಷಯ. ದೇವಾಲಯದ ಉಸ್ತುವಾರಿಯವರು ಯಾವ ಕೆಲಸವನ್ನು ವಹಿಸಿ ದರು ಪಾಲಿಸುತ್ತೇನೆ. ಕರಗ ಮಹೋತ್ಸವದ ಸಂದರ್ಭದಲ್ಲಿ ದೇವಾಲಯ ಸಮಿತಿಯವರು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ಕೊಡಬೇಕು ಎಂದು ತಿಳಿಸಿದರು.

ವರ್ತಕ ಕೆ.ವಿ.ಉಮೇಶ್ ಮಾತನಾಡಿ, ರಾಮನಗರದಲ್ಲಿ ಅನೇಕ ರಾಜಕಾರಣಿಗಳು ಪಕ್ಷಪಾತ ಮಾಡದೆ ಸಹಾಯ ಹಸ್ತ ಚಾಚುತ್ತಾ ಬಂದಿದ್ದಾರೆ. ಅವರೆಲ್ಲರ ಪೈಕಿ ನಗರಸಭೆ ಅಧ್ಯಕ್ಷ ಶೇಷಾದ್ರಿ ಅಪರೂಪದಲ್ಲಿ ಅಪರೂಪದ ರಾಜಕಾರಣಿಯಾಗಿದ್ದಾರೆ. ರಾಮದೇವರ ತೇರಿನ ಹಿನ್ನೆಲೆಯಲ್ಲಿ ರಸ್ತೆ ನಿರ್ಮಿಸಿಕೊಟ್ಟರಲ್ಲದೆ, ತೇರಿಗಾಗಿ ಒಂದು ಲಕ್ಷ ಘೋಷಣೆ ಮಾಡಿದ್ದಾರೆ. ಸುಸಜ್ಜಿತ ರಸ್ತೆ, ಕುಡಿಯುವ ನೀರು, ಫುಡ್ ಸ್ಟ್ರೀಟ್ , ಗೋಡೆ ಗಡಿಯಾರ ನಿರ್ಮಾಣ ಸೇರಿದಂತೆ ನಗರವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಿದ್ದಾರೆ ಎಂದು ಹೇಳಿದರು.

ಬಿಜೆಪಿ ಮುಖಂಡ ಎಸ್. ಆರ್. ನಾಗರಾಜ್, ಮುಖಂಡರಾದ ಹರೀಶ್, ಕೃಷ್ಣಮೂರ್ತಿ ಮಾತನಾಡಿದರು. ನಗರಸಭೆ ಆಯುಕ್ತ ಜಯಣ್ಣ, ಉಪಾಧ್ಯಕ್ಷೆ ಗಿರಿಜಮ್ಮ, ಸ್ಥಾಯಿಷಸಮಿತಿ ಅಧ್ಯಕ್ಷ ಆರೀಫ್, ಸದಸ್ಯರಾದ ಮಂಜುನಾಥ್, ನರಸಿಂಹ, ನಿಜಾಮುದ್ದೀನ್ ಷರೀಫ್, ಅಜ್ಮತ್ ಉಲ್ಲಾ ಖಾನ್, ಸೋಮಶೇಖರ್ (ಮಣಿ), ಸಮದ್, ಗೋವಿಂದರಾಜು, ಮೋಯಿನ್ ಖುರೇಷಿ, ರಮೇಶ್, ಗ್ಯಾಬ್ರಿಯಲ್, ಪಾರ್ವತಮ್ಮ, ಪವಿತ್ರ, ವಿಜಯ ಕುಮಾರಿ, ನಾಗಮ್ಮ, ಮಹಾಲಕ್ಷ್ಮಿ, ಮಂಜುಳಾ ಉಪಸ್ಥಿತರಿದ್ದರು.

ಮೊದಲ ಪುಟದಿಂದ

## ದಸರಾದಲ್ಲಿ ಕಂಬಳಕ್ಕೆ ವಿರೋಧ

ದಸರಾವನ್ನು ಇನ್ನಷ್ಟು ಭವ್ಯ, ಸುಸಂಘಟಿತ ಹಾಗೂ ಜನಸ್ನೇಹಿ ಉತ್ಸವವನ್ನಾಗಿ ರೂಪಿಸಲು ತಮ್ಮ ಸಂಪೂರ್ಣ ಸಹಕಾರವಿದೆ. ಮೈಸೂರು ದಸರಾ ಕೆಲವೇ ಜನರ ಹಬ್ಬವಲ್ಲ. ಅದು ಪ್ರತಿಯೊಬ್ಬ ಕನ್ನಡಿಗನ ಹೆಮ್ಮೆ. ಪ್ರತಿಯೊಬ್ಬ ನಾಗರಿಕನಿಗೂ ದಸರಾ ಕಾರ್ಯಕ್ರಮಗಳನ್ನು ವೀಕ್ಷಿಸುವ ಸಮಾನ ಅವಕಾಶ ದೊರೆಯಬೇಕು. ದಸರಾ ಪಾಸ್‌ಗಳ ವಿತರಣೆಯಲ್ಲಿ ಪಾರದರ್ಶಕತೆ ಮತ್ತು ಸಾರ್ವಜನಿಕರಿಗೆ ಸುಲಭ ಪ್ರವೇಶವೇ ಮುಖ್ಯ ಆದ್ಯತೆಯಾಗಬೇಕು ಎಂದು ಅವರು ಆಗ್ರಹಿಸಿದರು. ಸಂಸದರಿಗೆ ನೀಡಲಾಗುವ ಎಲ್ಲಾ ವಿಧದ ದಸರಾ ಪಾಸ್ ಗಳನ್ನು ತಾವು ಸ್ವೀಕರಿಸುವುದಿಲ್ಲ. ದಸರಾ ಮಹೋತ್ಸವ ಕೆಲವೇ ವ್ಯಕ್ತಿಗಳಿಗಾಗಿಯಲ್ಲ. ಅದು ಪ್ರತಿಯೊಬ್ಬ ಕನ್ನಡಿಗನ ಹಾಗೂ ದೇಶದ ಪ್ರತಿಯೊಬ್ಬ ನಾಗರಿಕನ ಹಬ್ಬವಾಗಿರುವುದರಿಂದ ಜನರಿಗೆ ಪಾರದರ್ಶಕ ಹಾಗೂ ನ್ಯಾಯಸಮ್ಮತ ರೀತಿಯಲ್ಲಿ ಪ್ರವೇಶ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು. ದಸರಾ ಪಾಸ್‌ಗಳ ವಿತರಣೆಯಲ್ಲಿ ಪಾರದರ್ಶಕತೆ ಇರಬೇಕು. ಆಯ್ದ ಕೆಲವರಿಗೆ ಮಾತ್ರ ಪಾಸ್ ಸೀಮಿತವಾಗದೆ ಸಾಮಾನ್ಯ ನಾಗರಿಕರು ಸೇರಿದಂತೆ ಎಲ್ಲರಿಗೂ ಸಮಾನ ಅವಕಾಶ ದೊರೆಯುವಂತೆ ವ್ಯವಸ್ಥೆ ರೂಪಿಸಬೇಕು ಎಂದು ಯದುವೀರ್ ಅವರು ಸಭೆಯಲ್ಲಿ ಸಲಹೆ ನೀಡಿದರು.

### ನಾಡಹಬ್ಬ ಅದ್ದೂರಿ ಆಚರಣೆ:

ಸವಾರಿ, ನಂದಿ ಪೂಜೆ ಕಾರ್ಯಕ್ರಮವನ್ನು ಅಕ್ಟೋಬರ್ 21ರಂದು ಮಧ್ಯಾಹ್ನ 1.30ಕ್ಕೆ ನಡೆಸಲಾಗುವುದು ಎಂದು ಮಾಹಿತಿ ನೀಡಿದರು. ಈ ಬಾರಿ ಏರ್ ಶೋ ನಡೆಸಲು ಕೇಂದ್ರ ಸರ್ಕಾರದ ಬಳಿ ಮನವಿ ಮಾಡಬೇಕು ಎಂದು ಸಲಹೆ ಬಂದಿದೆ. ಹೀಗಾಗಿ ಈ ವಿಚಾರವಾಗಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗುವುದು. ದಸರಾ ಉದ್ಘಾಟನೆಯನ್ನು ಯಾರ ಕೈಯಿಂದ ಮಾಡಿಸಬೇಕು ಎಂಬ ತೀರ್ಮಾನವನ್ನು ಸಮಿತಿ ಮುಖ್ಯಮಂತ್ರಿಗಳಿಗೆ ನೀಡಿದೆ. ನಾನು ಚರ್ಚೆ ಮಾಡಿ ತೀರ್ಮಾನ ಮಾಡಲಿದ್ದೇನೆ ಎಂದು ತಿಳಿಸಿದರು.

ಇದಕ್ಕಾಗಿ ಆನ್ ಲೈನ್ ಅರ್ಜಿ ಮತ್ತು ಪಾರದರ್ಶಕ ಹಂಚಿಕೆ ವ್ಯವಸ್ಥೆಯನ್ನು ಜಾರಿಗೊಳಿಸುವಂತೆ ಸರ್ಕಾರವನ್ನು ಕೋರಿದರು. ಇದರಿಂದ ಸಾರ್ವಜನಿಕರಲ್ಲಿ ವಿಶ್ವಾಸ ಹೆಚ್ಚುವುದರ ಜೊತೆಗೆ ದಸರಾ ನಿಜವಾದ ಜನೋತ್ಸವವಾಗಿ ಮತ್ತಷ್ಟು ಅರ್ಥಪೂರ್ಣವಾಗಲಿದೆ ಎಂದು ಅಭಿಪ್ರಾಯಪಟ್ಟರು. ಅರಮನೆ ಆವರಣದಲ್ಲಿ ಆನೆ ಶಿಬಿರದ ಸುತ್ತಮುತ್ತ ಪ್ರತಿದಿನ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಸೇರುವ ಹಿನ್ನೆಲೆಯಲ್ಲಿ, ಜನಸಂದಣಿಯನ್ನು ಸಮರ್ಪಕವಾಗಿ ನಿಯಂತ್ರಿಸಿ. ಆನೆಗಳಿಗೂ ಹಾಗೂ ಸಾರ್ವಜನಿಕರಿಗೂ ಯಾವುದೇ ರೀತಿಯ ಅಪಾಯ ಉಂಟಾಗದಂತೆ ಪರಿಣಾಮಕಾರಿ ಜನಸಂದಣಿ ನಿರ್ವಹಣಾ ವ್ಯವಸ್ಥೆ ಹಾಗೂ ಭದ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಮನವಿ ಮಾಡಿದರು.

## ವನಮಹೋತ್ಸವ: ಸಸಿ ವಿತರಣೆ



ಹನೂರು: ರಾಮಾಪುರ ವನ್ಯಜೀವಿ ವಲಯದ ವತಿಯಿಂದ ಕೌದಳ್ಳಿ ಗ್ರಾಮದ ಸಂತ ಅಂಥೋಣಿ ಪ್ರೌಢ ಶಾಲೆ ಮತ್ತು ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ವನಮಹೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮತ್ತು ಅರಣ್ಯ ಇಲಾಖೆ ಸಿಬ್ಬಂದಿ ಶಾಲಾ ಆವರಣದಲ್ಲಿ ಸಸಿಗಳನ್ನು ನೆಟ್ಟರು. ನಂತರ ವಿದ್ಯಾರ್ಥಿಗಳಿಗೆ ಉಚಿತವಾಗಿ ಸಸಿಗಳನ್ನು ವಿತರಿಸಲಾಯಿತು.


ಈ ವೇಳೆ ವಲಯ ಅರಣ್ಯಾಧಿಕಾರಿ ಮಾದೇಶ ಮಾತನಾಡಿ ಸಸಿ ನೆಡುವುದರಿಂದ ಪರಿಸರ ಸಮ ತೋಲನ ಕಾಪಾಡಲು ಸಾಧ್ಯ. ಮಳೆಗಾಲದಲ್ಲಿ ಪ್ರತಿ ಮನೆಯಲ್ಲೂ ಕನಿಷ್ಠ 5 ಸಸಿಗಳನ್ನು ನೆಡಬೇಕು. ವನಮಹೋತ್ಸವ ಕೇವಲ ಒಂದು ದಿನದ ಆಚರಣೆ ಯಲ್ಲ, ವರ್ಷಪೂರ್ತಿ ಸಸಿಗಳನ್ನು ರಕ್ಷಿಸುವ ಜವಾ ಬ್ದಾರಿ ನಮ್ಮ ಮೇಲಿದೆ" ಎಂದು ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸಿದರು. ಕಾಲೇಜಿನ ಪ್ರಾಂಶುಪಾಲ ಸಂಪತ್, ಉಪ ವಲಯ ಅರಣ್ಯಾಧಿಕಾರಿಗಳಾದ ಆನಂದ್ ಮತ್ತು ವಿಜಯ್ ಕುಮಾರ್, ಅರಣ್ಯ ಸಿಬ್ಬಂದಿ ಪ್ರೇಮನಗೌಡ, ಸಿದ್ದು, ಮಲ್ಲಪ್ಪ, ವಿಕ್ರಮ್, ಶಾಲಾ ಉಪನ್ಯಾಸಕರು ಮತ್ತು ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ವರ್ತಮಾನ ವರದಿ ಫಲಶ್ರುತಿ**

# ಮೊರಾರ್ಜಿ ವಸತಿ ಶಾಲೆ ಸುತ್ತಲೂ ಕಾಂಪೌಂಡ್ ನಿರ್ಮಾಣ

**▸▸ ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ಸಮೀಪದ ಶಿರಮಹಳ್ಳಿ ಗ್ರಾಮದ ಹೊರಹೊಲಯದಲ್ಲಿ 2019ರಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರ್ಮಿಸಿದ್ದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಶಾಲೆಗೆ ಅಗತ್ಯವಿರುವ ಕೆಲವು ಮೂಲಸೌಲಭ್ಯಗಳನ್ನು ನೀಡುವಲ್ಲಿ ನಿರ್ಲಕ್ಷ್ಯ ವಹಿಸಿದ್ದರು. ವರ್ತಮಾನ ದಿನಪತ್ರಿಕೆ ವರದಿ ಪರಿಣಾಮ ಇದೀಗ ಶಾಲೆ ಸುತ್ತಲೂ ಕಾಂಪೌಂಡ್ ನಿರ್ಮಿಸಿದ್ದಾರೆ.



ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ
ಪಂಚಾಯತ್ ರಾಜ್ ಇಂಜಿನಿಯರಿಂಗ್, ಉಪ ವಿಭಾಗ, ಹೆಚ್.ಡಿ.ಕೋಟೆ-571 114
ದೂರವಾಣಿ ಮತ್ತು ಫ್ಯಾಕ್ಸ್ ಸಂಖ್ಯೆ.08228-255336

ಸಂ. ಸಕಾಇಇ : ಪಂ.ರಾ.ಇಂ.ಉ.ವಿ : ಹೆಚ್.ಡಿ.ಕೋಟೆ : 2025-26

123
19.07.2026

| ಕ್ರಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಹೆಚ್.ಡಿ.ಕೋಟೆ ತಾಲ್ಲೂಕು, ಕೊಲ್ಲೇಗೌಡನಹಳ್ಳಿ ವೃತ್ತದಿಂದ ಮೊರಾರ್ಜಿ ದೇಸಾಯಿ ಮಾದರಿ ವಸತಿ ಶಾಲೆಯವರೆಗೆ ಸಿಸಿ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ | 100.00 |



ಏಳು ವರ್ಷಗಳಲ್ಲಿ ಪ್ರಾರಂಭವಾದ ಶಾಲೆಯಲ್ಲಿ ಕೋಟೆ, ಸರಗೂರು ತಾಲೂಕಿನ ಅನೇಕ ಗ್ರಾಮಗಳ ಸುಮಾರು ಮುನ್ನೂರಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಶಾಲೆ ಹೊರವಲಯದಲ್ಲಿ ಇರುವುದರಿಂದ ಕಾಡುಪ್ರಾಣಿಗಳು ಆಗಿಂದಾಗೆ ಮಕ್ಕಳಿಗೆ ದರ್ಶನ ನೀಡುತ್ತಿದ್ದವು. ಒಮ್ಮೊಮ್ಮೆ ಶಾಲೆ ಒಳಗೂ ಪ್ರಾಣಿಗಳು ಬಂದಿರುವ ಉದಾಹರಣೆಯೊಂದಿಗೆ ಇಲ್ಲಿರುವ ಅಭದ್ರತೆಯ ಬಗ್ಗೆ ವಿದ್ಯಾರ್ಥಿಗಳು ವರ್ತಮಾನ ದಿನಪತ್ರಿಕೆಯೊಂದಿಗೆ ಅಳಲು ತೋಡಿಕೊಂಡಿದ್ದರು.

ವಸತಿ ಶಾಲೆಗೆ ಬೇಕಿದೆ ಸವಲತ್ತುಗಳು ವಸತಿ ಶಾಲೆಗೆ ರಸ್ತೆ, ಕಾಂಪೌಂಡ್, ಕ್ರೀಡಾಂಗಣದ ಅನಿವಾರ್ಯತೆ ಎಂಬ ತಲೆಬರಹದಡಿ ಸುದ್ದಿ ಪ್ರಕಟಿಸಿತ್ತು. ವರದಿ ಗಮನಿಸಿದ್ದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ(ಕ್ರೈಸ್), ಕಾಂಪೌಂಡ್ ಮತ್ತು ಬಯಲು ರಂಗಮಂದಿರ, ಶಾಲೆ ಒಳಗಡೆ ಸಿಸಿ ರಸ್ತೆ, ಚರಂಡಿ, ಆಟದ ಮೈದಾನ, ಭದ್ರತಾ ಕೊಠಡಿ, ಧ್ವಜಸ್ತಂಭ, ಬಟ್ಟೆ ಒಗೆಯಲು ಶೆಡ್



SINCE 1957
ವರ್ತಮಾನ
ಭವಿಷ್ಯದ ಮುನ್ನುಡಿ
ವಸತಿ ಶಾಲೆಯ ಮೂಲ ಸೌಲಭ್ಯಕ್ಕೆ ಕೋ, ರೂಗಳ ಅಂದಾಜು ತಯಾರಿ
ಆಡಳಿತಾತ್ಮಕ ಅನುಮೋದನೆಗೆ ಕಡತ ಸಲ್ಲಿಕೆ
ವರದಿಯಿಂದ ಎಚ್ಚೆತ್ತ ಅಧಿಕಾರಿಗಳು । ಮೊರಾರ್ಜಿ ದೇಸಾಯಿ ಶಾಲೆಗೆ ಮೂಲಸೌಲಭ್ಯ
ಕ್ರೀಡಾಂಗಣ, ಸಭಾಂಗಣ, ರಸ್ತೆ,ಧ್ವಜ ಸ್ತಂಭ ನಿರ್ಮಾಣಕ್ಕೆ ಮುಂದಾದ KRIES
ಪತ್ರಿಕೆಯ ವರದಿ ಉಲ್ಲೇಖ
ವಸತಿ ಶಾಲೆಗೆ ಬೇಕಿದೆ ಸವಲತ್ತುಗಳು

ಹಾಗೂ ಸಂಪ್ ನಿರ್ಮಾಣ, ವಸತಿ ಗೃಹಗಳಿಗೆ ಸೋಲಾರ್ ವಾಟರ್ ಹೀಟರ್ ಅಳವಡಿಸುವುದಕ್ಕೆ 3 ಕೋ.ರೂ.ಅಂದಾಜು ತಯಾರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಕಾಮಗಾರಿಗಳ ಪಟ್ಟಿಯಲ್ಲಿ ಮೊದಲ ಭಾಗವಾಗಿ ಶಾಲೆ ಸುತ್ತಲೂ ಕಾಂಪಾಂಡ್ ನಿರ್ಮಿಸಿದ್ದಾರೆ.

### ರಸ್ತೆ ನಿರ್ಮಿಸುವಲ್ಲಿ ಶಾಸಕರ ನಿರ್ಲಕ್ಷ್ಯ

ಕೊಲ್ಲೇಗೌಡನ ಹಳ್ಳಿ ಗ್ರಾಮದಿಂದ ಶಾಲೆಗೆ ಸಂಪರ್ಕ ಕಲ್ಪಿಸುವ 1 ಕಿ.ಮೀ ರಸ್ತೆಗೆ 2020ರಲ್ಲಿ ಅರೆಬರೆಯಾಗಿ ಕಾಮಗಾರಿ ನಡೆಸಲಾಗಿದೆ. ನಿರ್ಮಾಣದ ಒಂದೆರಡು ದಿನಕ್ಕೆ ರಸ್ತೆ ತೀರಾ ಹದಗೆಟ್ಟಿದೆ. ಇದರಿಂದ ಉಷಾರಿಲ್ಲದ ವೇಳೆ ಆಸ್ಪತ್ರೆಗೆ ತೆರಳಲು, ಪೋಷಕರು ಮಕ್ಕಳನ್ನು ಶಾಲೆಗೆ ಬಿಡಲು, ಕರೆದುಕೊಂಡು ಹೋಗುವ ವೇಳೆ ಆಯ ತಪ್ಪಿಬಿದ್ದಿದ್ದರುವ ಉದಾಹರಣೆಗಳಿವೆ. ಈ ಘಟನೆಗಳಿಂದ ಮರುಗಿದ್ದ ಮಕ್ಕಳು ಗುಣಮಟ್ಟದ ರಸ್ತೆ ನಿರ್ಮಿಸಿಕೊಡುವಂತೆ ಶಾಸಕ ಅನಿಲ್ ಚಿಕ್ಕಮಾದು ಅವರಿಗೆ ಸಾಕಷ್ಟು ಬಾರಿ ಮನವಿ ಮಾಡಿದ್ದಾರೆ. ಆದರೆ, ಯಾವುದೇ ಪ್ರಯೋಜನವಾಗಿಲ್ಲ. ವರ್ತಮಾನ ದಿನ ಪತ್ರಿಕೆ ವರದಿ ಗಮನಿಸಿದ್ದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಎಚ್.ಡಿ.ಕೋಟೆ ಸಹಾಯಕ ಕಾರ್ಯಪಾಲಕ ಅಭಿಯಂತರ ಖುದ್ದು ಭೇಟಿ ನೀಡಿ ಪರಿಶೀಲಿಸಿ, ಕೊಲ್ಲೇಗೌಡನಹಳ್ಳಿ ವೃತ್ತದಿಂದ ಶಾಲೆವರೆಗೆ ಸಿಸಿ ರಸ್ತೆ, ಚರಂಡಿ ನಿರ್ಮಾಣಕ್ಕೆ 1 ಕೋ.ರೂ.ಅಂದಾಜು ತಯಾರಿಸಿ, ಪತ್ರಿಕೆ ವರದಿ ಉಲ್ಲೇಖಿಸಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೂಲಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವಾಲಯಕ್ಕೆ ಕಡತ ರವಾನಿಸಿದ್ದಾರೆ.

# ಬೆಳ್ಳಂಬೆಳಿಗ್ಗೆ ಕಾರ್ಯಾಚರಣೆಗಿಳಿದ ಅಧಿಕಾರಿಗಳು, ಮೊದಲ ದಿನ 30ಕ್ಕೂ ಅಂಗಡಿ ತೆರವು

## ಮೈಸೂರಲ್ಲೂ ಜೆಸಿಬಿ ಘರ್ಜನೆ

ಮೈಸೂರು: ಬೆಂಗಳೂರು ಮಾದರಿ ಸಾಂಸ್ಕೃತಿಕ ನಗರಿ ಮೈಸೂರಿನಲ್ಲೂ ಫುಟ್ ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಭರ್ಜರಿಯಾಗಿ ಪ್ರಾರಂಭಗೊಂಡಿದ್ದು, ಮೊದಲ ದಿನವೇ ಬರೋಬ್ಬರಿ 30ಕ್ಕೂ ಹೆಚ್ಚು ಪೆಟ್ಟಿಗೆಗಳ ನೆಲಸಮಗೊಳಿಸಿವೆ.

ಮಹಾನಗರ ಪಾಲಿಕೆಯ ವಲಯ ಕಚೇರಿ–5ರ ವ್ಯಾಪ್ತಿಯ ಮೇಟಗಳ್ಳಿ ಪ್ರದೇಶದಲ್ಲಿ ಶುಕ್ರವಾರ ಬೆಳ್ಳಂಬೆಳಿಗ್ಗೆ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿದ್ದು, ಕೆ.ಆರ್.ಎಸ್. ಮುಖ್ಯರಸ್ತೆಯ ಫುಟ್‌ಪಾತ್ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ಪೆಟ್ಟಿಗೆ ಅಂಗಡಿ, ಶೆಡ್, ತಳ್ಳುವ ಗಾಡಿಗಳು ಹಾಗೂ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಯಿತು. ಮಹಾನಗರ ಪಾಲಿಕೆಯ ನೂತನ ಆಯುಕ್ತೆ ಎಂ.ಕೆ.ಸವಿತಾ ಮಾರ್ಗ ದರ್ಶನದ ಮೇರೆಗೆ ವಲಯ ಕಚೇರಿ–5ರ ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ) ಯತೀಂದ್ರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಯಿತು. ಜೆಸಿಬಿ ಯಂತ್ರದ ಸಹಾಯದಿಂದ ನಡೆದ ಕಾರ್ಯಾ ಚರಣೆಯಲ್ಲಿ 30ಕ್ಕೂ ಹೆಚ್ಚು ಪೆಟ್ಟಿಗೆ ಅಂಗಡಿಗಳು ಮತ್ತು ಇತರೆ ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸಲಾಗಿದೆ. ಇದರಿಂದ ಹಲವು ವರ್ಷಗಳಿಂದ ಫುಟ್ ಪಾತ್ ಒತ್ತುವರಿ ಮಾಡಿಕೊಂಡಿದ್ದ ವ್ಯಾಪಾರಿಗಳಿಗೆ ಅಚ್ಚರಿ ಹಾಗೂ



ಆತಂಕ ಎದುರಾಯಿತು. ಕಾರ್ಯಾಚರಣೆಯಲ್ಲಿ ವರ್ಕ್ ಇನ್ಸ್ ಪೆಕ್ಟರ್ ನಾಗರಾಜು, ಹೆಲ್ತ್ ಇನ್ಸ್ ಪೆಕ್ಟರ್ ಗೀತಾ, ಮೇಟಗಳ್ಳಿ ಪೊಲೀಸ್ ಠಾಣೆಯ ಇನ್ಸ್ ಪೆಕ್ಟರ್ ಅರುಣ್ ಸೇರಿ 50ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ನಗರದ ವಿವಿಧ ಭಾಗಗಳಲ್ಲಿ ಫುಟ್ ಪಾತ್ ಗಳನ್ನು ಸಾರ್ವಜನಿಕರ ಸಂಚಾರಕ್ಕೆ ಮುಕ್ತಗೊಳಿಸುವ ಉದ್ದೇಶದಿಂದ ಮುಂದಿನ ದಿನಗಳಲ್ಲಿಯೂ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

## ಎರಡು ದಿನಗಳಲ್ಲಿ ಪೂರ್ಣ ತೆರವು: ಆಯುಕ್ತ



**ಮೈಸೂರು:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಮುಖ್ಯರಸ್ತೆಗಳ ಬದಿಯಲ್ಲಿನ ಸಾರ್ವಜನಿಕ ಫುಟ್‌ಪಾತ್‌ಗಳನ್ನು (ಕಾಲುದಾರಿಗಳನ್ನು) ಕೆಲವರು ಅನಧಿಕೃತವಾಗಿ ಅತಿಕ್ರಮಣ ಮಾಡಿಕೊಂಡು ವ್ಯಾಪಾರ ವಹಿವಾಟು ನಡೆಸಲಾಗುತ್ತಿದೆ. ಇದರಿಂದಾಗಿ ಪಾದಚಾರಿಗಳು ಪ್ರಾಣಭಯದಿಂದ ಮುಖ್ಯ ರಸ್ತೆಯಲ್ಲೇ ಓಡಾಡುವಂತಾಗಿದೆ. ಇದು ನಿರಂತರ ಸಂಚಾರ ದಟ್ಟಣೆ ಮತ್ತು ಅಪಘಾತಗಳಿಗೆ ಕಾರಣವಾಗುತ್ತಿದೆ. "ಸಾರ್ವಜನಿಕ ರಸ್ತೆ ಮತ್ತು ಫುಟ್‌ಪಾತ್‌ಗಳು ಸಾರ್ವಜನಿಕರ ಆಸ್ತಿಯಾಗಿದ್ದು, ಅವುಗಳನ್ನು ಯಾವುದೇ ಕಾರಣಕ್ಕೂ ಅತಿಕ್ರಮಣ ಮಾಡುವಂತಿಲ್ಲ" ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಆದೇಶ ನೀಡಿದ್ದು, ಫುಟ್‌ಪಾತ್‌ಗಳನ್ನು ಮುಕ್ತವಾಗಿಡುವುದು ನಾಗರೀಕರ ಮೂಲಭೂತ ಹಕ್ಕಾಗಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಆದ್ದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಗೌರವಾನ್ವಿತ ಸುಪ್ರೀಂ ಕೋರ್ಟ್ನ ನಿಯಮಗಳ ಪ್ರಕಾರ, ಈ ಕೂಡಲೇ ಕಾರ್ಯಪ್ರವೃತ್ತರಾಗಿ ಫುಟ್‌ಪಾತ್ ಅತಿಕ್ರಮಣವನ್ನು ಸಂಪೂರ್ಣವಾಗಿ ಇನ್ನೆರಡು ದಿನಗಳಲ್ಲಿ ತೆರವುಗೊಳಿಸಬೇಕು. ತಪ್ಪಿದಲ್ಲಿ, ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆಗಾಗಿ ನಿಯಮಾನುಸಾರ ಕಾನೂನು ಕ್ರಮಗಳನ್ನು ಎದುರಿಸಬೇಕಾಗುತ್ತದೆ ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತ ತಿಳಿಸಿದ್ದಾರೆ.

## 85 ಕೋಟಿ ರೂ. ವೆಚ್ಚದ ಯುಜಿಡಿ ಯೋಜನೆಗೆ ಸಿದ್ಧತೆ

**ಎಸ್ಟಿಪಿ ನಿರ್ಮಾಣ ಸ್ಥಳ ಪರಿಶೀಲನೆ**

**ಡಿಪಿಆರ್ ಪ್ರಗತಿ ಪರಿಶೀಲನೆ–ಅಧಿಕಾರಿಗಳ ಭೇಟಿ**



ಗುಂಡ್ಲುಪೇಟೆ: ಪಟ್ಟಣದಲ್ಲಿ ಸಮಗ್ರ ಒಳಚರಂಡಿ (ಯುಜಿಡಿ) ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ 85 ಕೋಟಿ ರೂ. ವೆಚ್ಚದ ಬೃಹತ್ ಯೋಜನೆಗೆ ಪೂರ್ವಸಿದ್ಧತೆಗಳು ಆರಂಭಗೊಂಡಿವೆ. ಇದರ ಭಾಗವಾಗಿ ಪುರಸಭೆ ಮುಖ್ಯಾಧಿಕಾರಿ ಶರವಣ ಎಸ್. ಅವರು ಶುಕ್ರವಾರ ಉದ್ದೇಶಿತ ಕೊಳಚೆ ನೀರು ಸಂಸ್ಕರಣಾ ಘಟಕಗಳ (ಎಸ್ಟಿಪಿ) ನಿರ್ಮಾಣ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಅವರ ಸೂಚನೆಯ ಮೇರೆಗೆ ನಡೆದ ಈ ಪರಿಶೀಲನಾ ಕಾರ್ಯದಲ್ಲಿ, ಯೋಜನೆಯ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವ ಕಾರ್ಯದ ಪ್ರಗತಿಯನ್ನು ಅವಲೋಕಿಸಲಾಯಿತು. ಈ ಸಂದರ್ಭದಲ್ಲಿ ಕೆ.ಯು.ಐ.ಡಿ.ಎಫ್.ಸಿ ತಾಂತ್ರಿಕ ವಿಭಾಗದ ಎಇಇ ಮಂಜುನಾಥ್, ಚೈತ್ರಾ, ಪುರಸಭೆ ಎಂಜಿನಿಯರ್ ಮಂಜುನಾಥ್ ಹಾಗೂ ಪರಿಸರ ಎಂಜಿನಿಯರ್ ಮಹೇಶ್ ಉಪಸ್ಥಿತರಿದ್ದರು.

**ಗುಣಮಟ್ಟಕ್ಕೆ ಆದ್ಯತೆ, ಪ್ರತಿ ಮನೆಗೂ ಸಂಪರ್ಕ ಕಡ್ಡಾಯ**

ಅಧಿಕಾರಿಗಳ ತಂಡವು ಕೊಡಿಹಳ್ಳಿ ಸರ್ಕಲ್ ರಸ್ತೆಯ ಸಮೀಪ ಉದ್ದೇಶಿತ ಎಸ್ಟಿಪಿ–3 ಹಾಗೂ ದೊಡ್ಡ ಕೆರೆ ಸರ್ವೆ ನಂಬರ್‌ನಲ್ಲಿ ನಿರ್ಮಾಣಗೊಳ್ಳಲಿರುವ ಎಸ್ಟಿಪಿ–4 ಸ್ಥಳಗಳಿಗೆ ಭೇಟಿ ನೀಡಿ ಸುದೀರ್ಘ ಪರಿಶೀಲನೆ ನಡೆಸಿತು. ಯೋಜನೆಯ ಡಿಪಿಆರ್ ಸಿದ್ಧಪಡಿಸುವ ಸಂದರ್ಭದಲ್ಲಿ ಗುಣಮಟ್ಟಕ್ಕೆ ಅತ್ಯುನ್ನತ ಆದ್ಯತೆ ನೀಡಬೇಕು. ಜೊತೆಗೆ, ಪಟ್ಟಣದ ಯಾವುದೇ ಮನೆಯು ಯುಜಿಡಿ ಸಂಪರ್ಕದಿಂದ ಹೊರಗುಳಿಯದಂತೆ ಎಚ್ಚರವಹಿಸಿ ಸಮಗ್ರ ಯೋಜನೆ ರೂಪಿಸುವಂತೆ ಮುಖ್ಯಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಎಸ್ಟಿಪಿಗೆ ಸಂಪರ್ಕ ಕಲ್ಪಿಸುವ ಪೈಪ್ಲೈನ್ ವಿನ್ಯಾಸವನ್ನು ವೈಜ್ಞಾನಿಕವಾಗಿ ಹಾಗೂ ಸಮರ್ಪಕವಾಗಿ ರೂಪಿಸಬೇಕು. ಯೋಜನೆಯ ಆರಂಭಿಕ ಹಂತದಲ್ಲಿಯೇ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಬಾರದು ಎಂದು ಅವರು ಎಚ್ಚರಿಸಿದರು.

**ದೋಷರಹಿತ ಯೋಜನೆಗೆ ಡಿಸಿ ಸೂಚನೆ ಹಾಗೂ ಮುಂದಿನ ಗುರಿ**

ಸ್ಥಳ ಪರಿಶೀಲನೆ ವೇಳೆ ಮಾತನಾಡಿದ ಮುಖ್ಯಾಧಿಕಾರಿ ಶರವಣ ಎಸ್., "ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಎರಡನೇ ಬಾರಿಗೆ ಯುಜಿಡಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಆದ್ದರಿಂದ ಯೋಜನಾ ಹಂತದಲ್ಲಿಯೇ ಎಲ್ಲಾ ತಾಂತ್ರಿಕ ಅಂಶಗಳನ್ನು ಸಮರ್ಪ ಕವಾಗಿ ಪರಿಶೀಲಿಸಿ ವರದಿ ಸಿದ್ಧಪಡಿಸಬೇಕು. ಜಿಲ್ಲಾಧಿಕಾರಿಗಳಾದ ಶ್ರೀರೂಪ ಅವರೂ ಸಹ ಭವಿಷ್ಯದಲ್ಲಿ ಯಾವುದೇ ಸಮಸ್ಯೆ ಉಂಟಾಗದಂತೆ ಅತ್ಯಂತ ಎಚ್ಚರಿಕೆಯಿಂದ ಡಿಪಿಆರ್ ಸಿದ್ಧಪಡಿಸಲು ಸೂಚಿಸಿದ್ದಾರೆ," ಎಂದು ವಿವರಿಸಿದರು. ಈ ಬೃಹತ್ ಯೋಜನೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ಹಾಗೂ ಆಡಳಿತಾತ್ಮಕ ಅನುಮೋದನೆಗಳು ದೊರೆತ ಬಳಿಕ, ಮುಂದಿನ ಆರು ತಿಂಗಳೊಳಗೆ ಕಾಮಗಾರಿ ಆರಂಭಿಸುವ ಗುರಿಯನ್ನು ಹೊಂದಲಾಗಿದೆ ಎಂದು ಅವರು ಮಾಹಿತಿ ನೀಡಿದರು.

## ನೇಣು ಬಿಗಿದುಕೊಂಡು ಆತ್ಮಹತ್ಯೆ

ಗುಂಡ್ಲುಪೇಟೆ: ಕೌಟುಂಬಿಕ ಕಲಹದ ಹಿನ್ನೆಲೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ತಾಲೂಕಿನ ಭೋಗಯ್ಯನಹುಂಡಿ ಗ್ರಾಮದಲ್ಲಿ ನಡೆದಿದೆ. ತಾಲೂಕಿನ ಭೋಗಯ್ಯನಹುಂಡಿ ಗ್ರಾಮದ ಗುರುಸ್ವಾಮಿ(52) ಮೃತ ವ್ಯಕ್ತಿ. ಜಮೀನಿಗೆ ತೆರಳುವ ದಾರಿ ವಿಚಾರಕ್ಕೆ ಸಹೋದರನೊಂದಿಗೆ ಜಗಳವಾಗಿದೆ. ಇದರಿಂದ ಮನವೊಂದು ಶೆಡ್‌ನಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ. ಮಾಹಿತಿ ಅರಿತ ಬೇಗೂರು ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಮೃತದೇಹವನ್ನು ಬೇಗೂರು ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ. ಈ ಸಂಬಂಧ ಬೇಗೂರು ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಕಾಲೇಜಿಗೆ ಮಹನೀಯರ ಹೆಸರಿಡಿ

## ಮೆಡಿಕಲ್‌ಗೆ ದೇವೇಗೌಡ, ಇಂಜಿನಿಯರಿಂಗ್‌ಗೆ ಎಸ್.ಎಂ.ಕೃಷ್ಣ : ನಂಜಾವಧೂತ ಶ್ರೀ

ಮೈಸೂರು: ರಾಜ್ಯ ಒಕ್ಕಲಿಗರ ಸಂಘ ನಿರ್ಮಿಸುವ ಮೆಡಿ ಕಲ್ ಕಾಲೇಜಿಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಇಂಜಿನಿಯರಿಂಗ್ ಕಾಲೇಜಿಗೆ ಮಾಜಿ ಮುಖ್ಯ ಮಂತ್ರಿ ಹೆಸರಿಡಿ ಎಂದು ಎಂದು ಸ್ಪಟಿಕಪುರಿ ಮಹಾಸಂ ಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಂಜಾವಧೂತ ಸ್ವಾಮೀಜಿ ಹೇಳಿದರು.

ವಿಜಯನಗರದಲ್ಲಿ ರಾಜ್ಯ ಒಕ್ಕಲಿಗರ ಸಂಘದಿಂದ ಉಚಿತ ವಿದ್ಯಾರ್ಥಿನಿಯರ ನಿಲಯದ ಹೆಚ್ಚುವರಿ ಮಹಡಿ ಕೊಠಡಿಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವ ಹಿಸಿ ಮಾತನಾಡಿದ ಅವರು, ಬೆಂಗಳೂರನ್ನು ವಿಶ್ವಮಟ್ಟ ದಲ್ಲಿ ಗುರುತಿಸಬೇಕಾದರೆ ಇಬ್ಬರೂ ಮಹನೀಯರನ್ನು ಸ್ಮರಿಸಬೇಕಿದೆ. ಒಂದು ದೇವೇಗೌಡರು ಮತ್ತೊಂದು ಎಸ್. ಎಂ.ಕೃಷ್ಣರಾಗಿದ್ದಾರೆ. ಕೊಡುಗೆ ಅಪಾರ ಏನಾದರೂ ಗುರುತು ಉಳಿಯುವಂತಹ ಕೆಲಸ ಮಾಡಬೇಕಿದೆ ಎಂದರು.

ಮೆಡಿಕಲ್, ಇಂಜಿನಿಯರಿಂಗ್ ಕಾಲೇಜು ಹೆಚ್ಚು ಲಾಭ ದಾಯಕವಾಗಿವೆ. ಹೀಗಾಗಿ ಮೈಸೂರು, ತುಮಕೂರು ಭಾಗದಲ್ಲಿಯೂ ಹೆಚ್ಚು ಬೇಡಿಕೆಯಿವೆ. ಎರಡು ಕಡೆಗಳಲ್ಲಿ ಹೆಚ್ಚಿನ ಜಾಗ ನೋಡಿ ವಿಶ್ವವಿದ್ಯಾನಿಲಯಗಳನ್ನು ಪ್ರಾರಂ ಭಿಸುವ ಮೂಲಕ ಸಂಘ ಕೇವಲ ಬೆಂಗಳೂರಿಗೆ ಸೀಮಿ ತವಾಗಿದೆ ಎಂಬ ಅಪವಾದದಿಂದ ಹೊರ ಬರಬೇಕು. ಸಂಘದಲ್ಲಿ ಸದ್ಯ 850 ಕೋಟಿ ಹಣ ಇರುವುದು ನಿಜಕ್ಕೂ ಹಣ ಸೋರಿಕೆ ಆಗದಿರುವಂತೆ ಮಾಡಿರುವ ನಡೆ ಶ್ಲಾಘನೀಯ ಎಂದರು.

**10 ಜಿಲ್ಲೆಗಳಲ್ಲಿ ಒಕ್ಕಲಿಗರ ಭವನ ನಿರ್ಮಿಸಿ**

ಕನಿಷ್ಠ 10 ಜಿಲ್ಲೆಗಳಲ್ಲಿಯಾದರೂ 50 ಕೋಟಿ ಮೀಸಲಿರಿಸಿ 5 ಕೋಟಿ ವೆಚ್ಚದಲ್ಲಿ ಒಕ್ಕಲಿ ಭವನಗಳನ್ನು ನಿರ್ಮಿಸಿ. ರಾಜ್ಯ ಒಕ್ಕಲಿಗರ ಸಂಘ ಬಿಳಿಯಾನೆ ಇದ್ದಂತೆ, ಅದರ ಸೋರಿಕೆ ನಿಲ್ಲಿಸಿದರೂ ಬಹಳ ಎತ್ತರಕ್ಕೆ ಬೆಳೆಯುತ್ತದೆ. ಈಗಾಗಲೇ ಬೆಂಗಳೂರಿನ ಇಂಜಿನಿಯರಿಂಗ್ ಕಾಲೇಜು ನಂಬರ್ ಒನ್ ಸ್ಥಾನದಲ್ಲಿದೆ. ಸಂಘದಲ್ಲಿ ಅಗತ್ಯ ಅನುದಾನವೂ ಇರುವುದರಿಂದ ಆದ್ಯತೆ ಮೇರೆಗೆ ಮೊದಲ ಹಂತದಲ್ಲಿ 10 ಜಿಲ್ಲೆಗಳಲ್ಲಿ ಭವನ ನಿರ್ಮಾಣಕ್ಕೆ ಸಂಘ ಮುಂದಾಗಿ ಸಮಾಜಕ್ಕೆ ಕೊಡುಗೆ ನೀಡಬೇಕೆಂದು ಹೇಳಿದರು.

**ತರಬೇತಿ ಕೇಂದ್ರ ತೆರೆಯಿರಿ**

ರಾಜ್ಯ ಸಂಘದಿಂದ ರಾಜಕೀಯ ತರಬೇತಿ ಕೇಂದ್ರ ತೆರೆದು ಅಲ್ಲಿರುವವರೆಲ್ಲಾ ಸೇರಿ ತರಬೇತಿ ನೀಡುವುದು ಒಳಿತು. ಯಾಕೆಂದರೆ ವಿಧಾನಸೌಧದಲ್ಲೂ ನಡೆಯದ ರಾಜಕೀಯ ಮೇಲಾಟ ಸಂಘದಲ್ಲಿ ನಡೆಯುತ್ತದೆ. ಹೀಗಾಗಿ ನೀವೇ ರಾಜಕೀಯ ಪಾಠ ಮಾಡಿದರೆ ಸರಿಯಾಗುತ್ತದೆ. ನಿಜಕ್ಕೂ ಸಂಘದ ಬೆಳವಣಿಗೆ ನೋಡಿ ಬೇಸರ ತರಿಸಿದೆ. ಮೇಲಾಟ ಕಡಿಮೆ ಆಗಬೇಕಿದೆ. ನಾವು ಜಗತ್ತಿಗೆ ಸಲಹೆ ನೀಡಿದವರು. ಯಾವ ನಕ್ಷತ್ರ ಯಾವಾಗ ಬರುತ್ತದೆ ಯಾವ ನಕ್ಷತ್ರಕ್ಕೆ ಮಳೆ ಬರುತ್ತದೆ ಎಂದು ಅರಿತದ್ದವರು. ನಮ್ಮನ್ನು ನೋಡಿ ಅನುಸರಿಸುವವರು ಇದ್ದಾರೆ. ಹೀಗಾಗಿ ಸಂಘವನ್ನು ನೋಡಿ ಕಲಿಯುವಂತಿರಬೇಕು ಎಂದರು.

ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ನಾನು ವಿವಿಯಲ್ಲಿ ಕೆಲಸ ಮಾಡುತ್ತಿದ್ದಾಗ ಸಮಸ್ಯೆ ಅರಿವಿತ್ತು. ಪ್ರತಿ ವರ್ಷ 15ಸಾವಿರ ವಿದ್ಯಾಭ್ಯಾಸ ಮಾಡಿ ಹೋಗುತ್ತಿದ್ದಾರೆ. ಇಷ್ಟು ಮಂದಿಯ ಪೈಕಿ ಕೇವಲ 350 ಮಂದಿಗಷ್ಟೇ ವಿದ್ಯಾರ್ಥಿನಿಲಯದ ಅವಕಾಶವಿತ್ತು. ನಾನು ಶಾಸಕನಾದ ಬಳಿಕ ಮಹಾರಾಣಿಕಾಲೇಜಿನಲ್ಲಿ 180 ಕೋಟಿ ಹಣವನ್ನು ಸಿಎಂ ಸಿದ್ದರಾಮಯ್ಯ ಬಿಡುಗಡೆ ಮಾಡಿದರು. ಇದರಿಂದ 3000 ವಿದ್ಯಾರ್ಥಿನಿಯರಿಗೆ ಅನುಕೂಲ ಆಗಲಿದೆ. ದೀನದಂಯಾಳು ಇಲಾಖೆಯಿಂದ 400 ವಿದ್ಯಾರ್ಥಿ ಹಾಗೂ 400ಮಂದಿ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿನಿಲಯ ಕೊಟ್ಟಿದ್ದಾರೆ. 10 ವರ್ಷದ ಬಳಿಕ ಇದನ್ನು ಹೆಚ್ಚುವರಿ ಮಾಡಿರುವುದು ಸ್ವಾಗತಾರ್ಹ ಎಂದರು.

ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ 2.5ಎಕರೆ ಸಿಎ ನಿವೇಶನ ಜಾಗವಿದೆ. ರಾಜ್ಯ ಒಕ್ಕಲಿಗರ ಸಂಘ ಹೆಣ್ಣು ಮಕ್ಕಳಿಗೆ ವಿದ್ಯಾರ್ಥಿನಿಲಯ ಮಾಡುವುದಾದರೆ ಅದನ್ನು ಕೊಡಿಸುವ ಕೆಲಸ ಮಾಡುತ್ತೇನೆ. ಸಮುದಾಯದ ಭವಿಷ್ಯದ ಮಕ್ಕಳಿಗೆ ನೆರವು ನೀಡುವ ಕೆಲಸ ಮಾಡಬೇಕಿದೆ ಎಂದರು. ಮಾಜಿ ಸಂಸದ ಪ್ರತಾಪಸಿಂಹ, ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಎಲ್.ಶ್ರೀನಿವಾಸ್, ಗೌರವಾಧ್ಯಕ್ಷ ಬಿ. ಕೆಂಚಪ್ಪಗೌಡ, ಪ್ರಧಾನ ಕಾರ್ಯದರ್ಶಿ ಸಿ.ಜಿ. ಗಂಗಾಧರ್, ಖಜಾಂಚಿ ಕೆ.ವಿ.ಶ್ರೀಧರ್, ಉಪಾಧ್ಯಕ್ಷರಾದ ಡಾ.ಕೆ.ವಿ.ರೇಣುಕಾ ಪ್ರಸಾದ್, ಎಂ.ಪುಟ್ಟಸ್ವಾಮಿ, ಸಹಾಯಕ ಕಾರ್ಯದರ್ಶಿ ಡಾ.ಡಿ.ಕೆ.ಸುರೇಶ್, ಮಾಜಿ ಅಧ್ಯಕ್ಷ ಸಿ.ಎನ್.ಬಾಲಕೃಷ್ಣ, ಆಂತರಿಕ ಲೆಕ್ಕ ಪರಿಶೋಧಕ ರಾಘವೇಂದ್ರ, ಕಾನೂನು ಸಲಹೆಗಾರ ಆರ್.ಹನುಮಂತರಾಯಪ್ಪ, ಸಂಘಟನಾ ಕಾರ್ಯದರ್ಶಿ ಎನ್.ಬಾಲಕೃಷ್ಣ, ನಿರ್ದೇಶಕರಾದ ಎಂ.ಬಿ.ಮಂಜೇಗೌಡ, ಎಚ್.ಎನ್.ಅಶೋಕ, ಕೆ.ಎಸ್.ಸುರೇಶ್, ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಮರಿಸ್ವಾಮಿ, ಪ್ರಧಾನ ಕಾರ್ಯದರ್ಶಿ ಈ. ಎಂ.ಚೇತನ್ ಇನ್ನಿತರರು ಉಪಸ್ಥಿತರಿದ್ದರು.



2022ರಲ್ಲಿ ನಮ್ಮ ಕಮಿಟಿ ಅಧಿಕಾರಕ್ಕೆ ಬಂದಾಗ 100 ಕೋಟಿ ಇದ್ದ ಹಣವನ್ನು ಈಗ 850 ಕೋಟಿ ರೂ.ಗೆ ಕೊಂಡೊಗಿದ್ದೇವೆ. ಶ್ರೀರಂಗಪಟ್ಟಣದ ಶೆಟ್ಟಿಹಳ್ಳಿಯಲ್ಲಿ ಈಗಾಗಲೇ 120 ಜಾಗ ನೋಡಿದ್ದು, ಅಲ್ಲಿ ಮೆಡಿಕಲ್ ಕಾಲೇಜು ತೆರೆಯುವ ಚಿಂತನೆಯಲ್ಲಿದ್ದೇವೆ. ಜತೆಗೆ ರಾಜ್ಯದಲ್ಲಿ ಎಲ್ಲಾ ಕಡೆಗಳಿಗೂ ಸಂಘವನ್ನು ವಿಸ್ತರಿಸಲು ಮುಂದಾಗಿದ್ದೇವೆ. ನಾವು ಟೀಕೆಗಳಿಗೆ ಹೆದರಲ್ಲ, ಪಾರದರ್ಶಕ ಆಡಳಿತ ನೀಡುತ್ತಿದ್ದೇವೆ. ಹೀಗಾಗಿ ಸಂಘದಲ್ಲಿ ಸಾಕಷ್ಟು ಅಭಿವೃದ್ಧಿ ಕೈಗೊಳ್ಳುತ್ತೇವೆ.

–**ಎಲ್.ಶ್ರೀನಿವಾಸ್** ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ

**ದಾಖಲೆಗಳಿದ್ದರೆ ಕೊಟ್ಟು ಮಾತನಾಡಲಿ**

ರಾಜ್ಯ ಒಕ್ಕಲಿಗರ ಸಂಘದ ಬಗ್ಗೆ ಅನೇಕರು ಆಧಾರ ರಹಿತ ಆರೋಪ ಮಾಡಿದರು. ಅವರು ಮಾಡಿರುವ ಆರೋಪಗಳಿಗೆ ದಾಖಲೆಗಳಿದ್ದರೆ ತಂದು ಕೊಡಲಿ. ಅದನ್ನು ಬಿಟ್ಟು ಸುಮ್ಮನೆ ಟೀಕೆ ಮಾಡುವುದು ಸರಿಯಲ್ಲ. ನಮ್ಮ ಅವಧಿಯಲ್ಲಿ ಅನೇಕ ಹೊಸ ಬದಲಾವಣೆ ತರುತ್ತಿದ್ದೇವೆ. ರಾಜ್ಯ ಒಕ್ಕಲಿಗರ ಸಂಘದಿಂದ ಮತ್ತೊಂದು ಮಹಡಿ ನಿರ್ಮಾಣ ಟೆಂಡರ್ ಹಂತದಲ್ಲಿದ್ದು, ಅದು ಆದರೆ ಸಾವಿರ ವಿದ್ಯಾರ್ಥಿಗಳಿಗೆ ಅನೂಕೂಲ ಆಗಲಿದೆ.

–**ಕೆ.ವಿ.ಶ್ರೀಧರ್** ರಾಜ್ಯ ಒಕ್ಕಲಿಗರ ಸಂಘ ಖಜಾಂಚಿ

**ದೇವೇಗೌಡರಿಗೆ ನಾಗರಿಕ ಸನ್ಮಾನ ಮಾಡಿ**

ಎಸ್.ಎಂ.ಕೃಷ್ಣ ಹಾಗೂ ದೇಶದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರಿಗೆ ಸಮುದಾಯ ಬೃಹತ್ ಪ್ರಮಾಣದಲ್ಲಿ ಸೇರಿ ನಾಗರಿಕ ಸನ್ಮಾನ ಮಾಡಿ ಎಂದು ಹೇಳುತ್ತಿದ್ದೇನೆ. ಈಗಾಗಲೇ ಎಸ್.ಎಂ.ಕೃಷ್ಣ ಅವರು ನಮ್ಮನ್ನು ಅಗಲಿದ್ದು, ವೀಲ್ ಚೇರ್‌ನಲ್ಲಿ ಪ್ರಧಾನಿವರೆಗೂ ಹೋಗಿ ಸಮುದಾಯದ ಕಾಲೇಜಿಗೆ ಹೆಚ್ಚುವರಿ ಮೆಡಿಕಲ್ ಸೀಟ್ ಕೊಡಿಸಿಕೊಟ್ಟಿರುವ ಎಚ್.ಡಿ.ದೇವೇಗೌಡರಿಗೆ ಆದರೂ ಸನ್ಮಾನ ಮಾಡುವ ಕಾರ್ಯವನ್ನು ರಾಜ್ಯ ಸಂಘ ಮಾಡಬೇಕು. ಮುಖ್ಯಮಂತ್ರಿಯಾಗಿ ನಮ್ಮವರೇ ಡಿ.ಕೆ.ಶಿವಕುಮಾರ್ ಇದ್ದು, ಅವರ ನೇತೃತ್ವದಲ್ಲೇ ಈ ಕಾರ್ಯಕ್ರಮ ನಡೆಸಬೇಕು.

– **ಶ್ರೀ ನಂಜಾವಧೂತ ಸ್ವಾಮೀಜಿ**

**ಮೆಡಿಕಲ್ ಕಾಲೇಜು ಕೊಡಿ**

ಕಿಮ್ಸ್ ರಾಜ್ಯಕ್ಕೆ ಕಳಸ ಪ್ರಾಯವಾಗಿದೆ. ಮೈಸೂರು ಸಾಕಷ್ಟು ಅಭಿವೃದ್ಧಿ ವಿಚಾರದಲ್ಲಿ ಬೆಳೆದಿದೆ. ಹೀಗಾಗಿ ಮೈಸೂರಿನಲ್ಲೂ ಒಂದು ಮೆಡಿಕಲ್ ಕಾಲೇಜು ಮಾಡಿಕೊಡಿ. ಒಕ್ಕಲಿಗರ ಸಂಘ ಕಟ್ಟಿದ ಎಲ್ಲಾ ಸಂಸ್ಥೆಗಳು ಚೆನ್ನಾಗಿ ನಡೆಯುತ್ತಿದ್ದು, ಈ ಭಾಗಕ್ಕೆ ದೊಡ್ಡ ಅನೂಕೂಲ ಆಗಲಿದೆ.

–**ಪ್ರತಾಪಸಿಂಹ** ಮಾಜಿ ಸಂಸದ

ಬೆಂಗಳೂರಿಗೆ ಸೀಮಿತವಾಗಿರದೇ ಪ್ರತಿ ಜಿಲ್ಲೆಯಲ್ಲೂ ವಿದ್ಯಾರ್ಥಿನಿಲಯಗಳ ಸ್ಥಾಪನೆ ಮಾಡಲು ಹೊರಟಿರುವುದು ಶ್ಲಾಘನೀಯ. 900 ಮಂದಿಗೆ ಅನೂಕೂಲ ಮಾಡಿಕೊಟ್ಟಿರುವುದು ಸ್ವಾಗತಾರ್ಹ. ಇಂತಹ ಸತ್ಕಾರ್ಯಗಳು ಮತ್ತಷ್ಟು ಮಾಡಿ. ಒಕ್ಕಲಿಗ ಸಂಘ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುವ ಕಾರ್ಯ ಮುಂದುವರೆಸಲಿ.

–**ಶ್ರೀ ಸೋಮೇಶ್ವರನಾಥ ಸ್ವಾಮೀಜಿ** ಆದಿಚುಂಚನಗರಿ ಶಾಖಾ ಮಠ

## ಜು.17ರಿಂದ ಆಷಾಢ: ಪೊಲೀಸರಿಂದ ಪರಿಶೀಲನೆ



ಮೈಸೂರು: ಜು.17 ರಿಂದ ಆರಂಭವಾಗುವ" ಆಷಾಢ ಮಾಸ" ದ ಹಿನ್ನೆಲೆಯಲ್ಲಿ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ನೇತೃತ್ವದಲ್ಲಿ ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಕುರಿತು ಪರಿಶೀಲನೆ ನಡೆಸಲಾಯಿತು.

ಈ ವೇಳೆ ಹಿರಿಯ ಪೊಲೀಸ್ ಅಧಿಕಾರಿಗಳು, ಕೆಎಸ್ ಆರ್‌ಟಿಸಿ ಹಾಗೂ ಚಾಮುಂಡಿ ಬೆಟ್ಟ ಪ್ರಾಧಿಕಾರದ ಅಧಿಕಾರಿಗಳು ಹಾಜರಿದ್ದರು. ಬೆಟ್ಟದ ಮೇಲಿರುವ ಬಸ್ ನಿಲ್ದಾಣ ಹಾಗೂ ವಾಹನ ನಿಲ್ದಾಣದ (ಪಾರ್ಕಿಂಗ್) ಸ್ಥಳಗಳಿಗೆ ಭೇಟಿ ನೀಡಿ ಅಗತ್ಯ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಎರಡು ಕಡೆಗಳಲ್ಲಿ ತಾತ್ಕಾಲಿಕ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಹೇಳಿದರು.

## 13ಕ್ಕೆ ಬಿಸಿನೆಸ್ ಇನ್‌ಕ್ಯುಬೇಷನ್ ಕೇಂದ್ರ ಅನಾವರಣ

ಮೈಸೂರು: ಮೇಟಗಳ್ಳಿ ಬಡಾವಣೆಯಲ್ಲಿನ ಸೇಪಿಯಂಟ್ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜಿನಲ್ಲಿ ಬಿಸಿನೆಸ್ ಇನ್‌ಕ್ಯುಬೇಷನ್ ಕೇಂದ್ರ ತೆರೆದಿದ್ದು, ಇದರ ಉದ್ಘಾಟನೆ ಜು. 13 ರ ಬೆಳಗ್ಗೆ 9.30ಕ್ಕೆ ಕಾಲೇಜು ಆವರಣದಲ್ಲಿ ನಡೆಯಲಿದೆ ಎಂದು ಡೀನ್ ಡಾ. ಸುಜಾತ ಬೋಪಣ್ಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಮೋಸಿಸ್ ಅಂಡ್ ವಿಲಿಂಕಿನ್ ಎಂಬ ವಿದೇಶೀ ಸಂಸ್ಥೆಯೊಂದರ ಜೊತೆ ಒಡಂಬಡಿಕೆ ಮಾಡಿಕೊಂಡು ಈ ಕೇಂದ್ರ ತೆರೆಯಲಾಗುತ್ತಿದೆ. ವಿದ್ಯಾಭ್ಯಾಸದ ಜೊತೆಗೆ ವಿದ್ಯಾರ್ಥಿಗಳಿಗೆ ಉದ್ಯೋಗ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ ಇದಾಗಿದೆ. ಉದ್ಯೋಗವನ್ನು ಉತ್ತಮವಾಗಿ ನಿರ್ವಹಿಸಲು ಅಥವಾ ಹೊಸ ಜವಾಬ್ದಾರಿ ಪಡೆಯಲು ನೆರವಾಗುವ ತರಬೇತಿ ಇಲ್ಲಿ ನೀಡಲಾಗುವುದು. ಉದ್ಯೋಗ ಮಾರುಕಟ್ಟೆಯಲ್ಲಿ ವಿದ್ಯಾರ್ಥಿಗಳು ಯಶಸ್ವಿಯಾಗಲು ಸಹಕರಿಸಲಾಗುವುದು ಎಂದು ಮಾಹಿತಿ ನೀಡಿದರು. ಪ್ರಾಚಾರ್ಯ ಡಾ.ಕೆ. ಗಣೇಶ್, ಸುಜಿತ್ ಪಡಿವಾಲ್, ದೀಪಾ ಜೈನ್, ಕಿಯಾ ಇದ್ದರು.




**ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಹೇಳಿಕೆ । ಹಂತ, ಹಂತವಾಗಿ ಆದ್ಯತೆ ಮೇರೆಗೆ ಮೂಲಸೌಕರ್ಯಗಳ ವೃದ್ಧಿ**

# ನಗರದಲ್ಲಿ ಮೂಲಸೌಕರ್ಯಗಳ ವೃದ್ಧಿಗೆ ನಗರಸಭೆ ಬದ್ಧ

ರಾಮನಗರ: ವಿವೇಕಾನಂದನಗರ ವಾರ್ಡು (27ನೇ ವಾರ್ಡು) ದೊಡ್ಡ ಪ್ರದೇಶ, ಇಲ್ಲಿ ರಸ್ತೆ, ಯುಜಿಡಿ ಕಾಮಗಾರಿಗಳು ಇನ್ನು ಆಗಬೇಕಾಗಿದೆ. ಈ ವಾಡಿಗೆ ನೂರು ಕೋಟಿ ಅನುದಾನವೂ ಸಾಲುವುದಿಲ್ಲ. ಆದರೆ ನಗರಸಭೆಯ ಹಣಕಾಸಿನ ಇತಿಮಿತಿಯಲ್ಲಿ ಆದ್ಯತೆ ಮೇರೆಗೆ ಕೆಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿ ಕೊಳ್ಳಲಾಗಿದೆ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ತಿಳಿಸಿದರು.

ನಗರದ 27ನೇ ವಾರ್ಡುನಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ನಂತರ ಅವರು ಮಾಧ್ಯಮ ಪ್ರತಿನಿಧಿಗಳ ಬಳಿ ಮಾತನಾಡಿದರು. ಈ ಭಾಗದಲ್ಲಿ ರಸ್ತೆ, ಯುಜಿಡಿ ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಯಾಗಬೇಕು ಎಂದು 27ನೇ ವಾರ್ಡಿನ ಸದಸ್ಯೆ ಪವಿತ್ರ ಲಕ್ಷ್ಮೀಕಾಂತ್ ಪದೇ ಪದೇ ಗಮನ ಸೆಳೆಯುತ್ತಿದ್ದರು. ಒತ್ತಡ ಹೇರಿದ್ದರು. ವಿವಿಧ ಯೋಜನೆಗಳಡಿಯಲ್ಲಿ 3–4 ಕೋಟಿ ರೂಗಳ ಅಭಿವೃದ್ಧಿ ಕಾಮಗಾರಿಗಳು ಜಾರಿಯಲ್ಲಿವೆಯಾದರು, ಸಮುದ್ರದಂತಿರುವ ಈ ವಾರ್ಡಿಗೆ ಹೆಚ್ಚು ಅನುದಾನ ಬೇಕಾಗಿದೆ. ಹಣಕಾಸಿನ ಕೊರತೆಯಿಂದಾಗಿ ಇಲ್ಲಿ ಕಾಮಾರಿಗಳು



ವಿಳಂಬವಾಗಿದೆ. ಹಂತ, ಹಂತವಾಗಿ ಆದ್ಯತೆ ಮೇರೆಗೆ ಈ ವಾರ್ಡಿನಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲು ನಗರಸಭೆ ಕಟಿ ಬದ್ದವಾಗಿದೆ ಎಂದರು.

**ಹಿಂದೆ ಆಗಿರುವ ತಪ್ಪಿಗೆ ನಾಗರೀಕರ ಬಲಿ ಸರಿಯಲ್ಲ**

ದುರಾದೃಷ್ಟವಶಾತ್ 27ನೇ ವಾರ್ಡಿನಲ್ಲಿ ಅಪ್ರೂವ್ಡ್ ಲೇಔಟ್‌ಗಳ ಪ್ರಮಾಣ ಕೇವಲ ಶೇ 25 ಮಾತ್ರ. ಉಳಿದೆಡೆ ರಸ್ತೆ, ಒಳಚರಂಡಿ ವ್ಯವಸ್ಥೆ ಇಲ್ಲದಿದ್ದರೂ ಅನೇಕರು ಮನೆಗಳನ್ನು ನಿರ್ಮಿಸಿಕೊಂಡುಬಿಟ್ಟಿದ್ದಾರೆ. ಹಿಂದೆ ಯಾರೋ ಮಾಡಿದ ತಪ್ಪಿಗೆ ಇಂದು ನಾಗರೀಕರನ್ನು ಸಮಸ್ಯೆಗೆ ದೂಡುವುದು ಸರಿಯಲ್ಲ. ನಗರ ಸಭೆಯ ಹಣಕಾಸಿನ ಪರಿಸ್ಥಿತಿಯನ್ನು ಆಧರಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕಾಗಿದೆ ಎಂದರು. ಇಂದು ಕೈಗೆತ್ತಿಕೊಳ್ಳಲಾಗಿರುವ ಕಾಮ ಗಾರಿಗಳನ್ನು ನಗರಸಭೆಯ ನಿಧಿಯಿಂದ ಪೂರೈಸಲಾಗುತ್ತಿದೆ ಎಂದು ಮಾಹಿತಿ ಕೊಟ್ಟರು.

**ಅನುದಾನಕ್ಕೆ ಸಿಎಂಗೆ ಮನವಿ**

27ನೇ ವಾರ್ಡು ಸೇರಿದಂತೆ ನಗರದ ಎಲ್ಲಾ ವಾರ್ಡುಗಳಲ್ಲಿ ಮೂಲ ಸೌಕರ್ಯಗಳ ವೃದ್ಧಿಯಾಗಬೇಕಾಗಿದೆ. ಇದಕ್ಕಾಗಿ ಹೆಚ್ಚಿನ ಅನುದಾನಕ್ಕೆ ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದೇವೆ. ನಮ್ಮ ಜಿಲ್ಲೆಯವರೇ ಮುಖ್ಯಮಂತ್ರಿಗಳಾಗಿದ್ದಾರೆ. ಅನುದಾನ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿಗಳಿಗೂ ಮನವಿ ಮಾಡಿದ್ದೇವೆ. ಈ ಭಾಗದ ಜನರ ಬವಣೆಯನ್ನು ಅರಿತು ಮುಖ್ಯಮಂತ್ರಿಗಳು ಅನುದಾನವನ್ನು ಬಿಡುಗಡೆ ಮಾಡುತ್ತಾರೆ ಎಂಬ ನಿರೀಕ್ಷೆ ಇದೆ. ಅನುದಾನ ಲಭ್ಯವಾದರೆ ಮೂಲಸೌಕರ್ಯಗಳ ಅಗತ್ಯವನ್ನು ಪೂರೈಸಬಹುದು ಎಂದು ಅಭಿಪ್ರಾಯಪಟ್ಟರು. ಈ ವೇಳೆ ನಗರಸಭಾ ಸದಸ್ಯೆ ಪವಿತ್ರ, ಮುಖಂಡ ಪತಿ ಸೇರಿದಂತೆ ನಗರಸಭಾ ಸದಸ್ಯರು, ಆ ಭಾಗದ ನಾಗರೀಕ ಪ್ರಮುಖರು, ನಗರಸಭೆಯ ಅಧಿಕಾರಿಗಳು ಹಾಜರಿದ್ದರು.

**ಫುಟ್‌ಪಾತ್ ಅತಿಕ್ರಮಣ**

## 2 ದಿನಗಳಲ್ಲಿ ತೆರವುಗೊಳಿಸಿ

ಮೈಸೂರು:– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಮುಖ್ಯರಸ್ತೆಗಳ ಬದಿಯಲ್ಲಿನ ಸಾರ್ವಜನಿಕ ಫುಟ್‌ಪಾತ್‌ಗಳನ್ನು (ಕಾಲುದಾರಿಗಳನ್ನು) ಕೆಲವರು ಅನಧಿಕೃತವಾಗಿ ಅತಿಕ್ರಮಣ ಮಾಡಿಕೊಂಡು ವ್ಯಾಪಾರ ವಹಿವಾಟು ನಡೆಸಲಾಗುತ್ತಿದೆ. ಇದರಿಂದಾಗಿ ಪಾದಚಾರಿಗಳು ಪ್ರಾಣಭಯದಿಂದ ಮುಖ್ಯ ರಸ್ತೆಯಲ್ಲೇ ಓಡಾಡುವಂತಾಗಿದೆ. ಇದು ನಿರಂತರ ಸಂಚಾರ ದಟ್ಟಣೆ ಮತ್ತು ಅಪಘಾತಗಳಿಗೆ ಕಾರಣವಾಗುತ್ತಿದೆ. "ಸಾರ್ವಜನಿಕ ರಸ್ತೆ ಮತ್ತು ಫುಟ್‌ಪಾತ್‌ಗಳು ಸಾರ್ವಜನಿಕರ ಆಸ್ತಿಯಾಗಿದ್ದು, ಅವುಗಳನ್ನು ಯಾವುದೇ ಕಾರಣಕ್ಕೂ ಅತಿಕ್ರಮಣ ಮಾಡುವಂತಿಲ್ಲ" ಎಂದು ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಆದೇಶ ನೀಡಿದ್ದು, ಫುಟ್‌ಪಾತ್‌ಗಳನ್ನು ಮುಕ್ತವಾಗಿಡುವುದು ನಾಗರೀಕರ ಮೂಲಭೂತ ಹಕ್ಕಾಗಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಆದ್ದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಗೌರವಾನ್ವಿತ ಸುಪ್ರೀಂ ಕೋರ್ಟ್ನ ನಿಯಮಗಳ ಪ್ರಕಾರ, ಈ ಕೂಡಲೇ ಕಾರ್ಯಪ್ರವೃತ್ತರಾಗಿ ಫುಟ್‌ಪಾತ್ ಅತಿಕ್ರಮಣವನ್ನು ಸಂಪೂರ್ಣವಾಗಿ ಇನ್ನೆರಡು ದಿನಗಳಲ್ಲಿ ತೆರವುಗೊಳಿಸಬೇಕು. ತಪ್ಪಿದಲ್ಲಿ, ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆಗಾಗಿ ನಿಯಮಾನುಸಾರ ಕಾನೂನು ಕ್ರಮಗಳನ್ನು ಎದುರಿಸಬೇಕಾಗುತ್ತದೆ ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಹಾರ ಸೇವನೆ ನಂತರ ಎಂಟು ಮಕ್ಕಳು ಅಸ್ವಸ್ಥ



ರಾಮನಗರ: ತಾಲ್ಲೂಕಿನ ಬಸವನಪುರದಲ್ಲಿರುವ ಆಶ್ರಮ ಶಾಲೆಯಲ್ಲಿ ಗುರುವಾರ ರಾತ್ರಿ ಆಹಾರ ಸೇವಿಸಿದ ಮಕ್ಕಳ ಪೈಕಿ ಎಂಟು ಮಂದಿ ಅಸ್ವಸ್ಥಗೊಂಡು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಎಲ್ಲ ಮಕ್ಕಳ ಆರೋಗ್ಯದಲ್ಲಿ ಚೇತರಿಕೆಯಾಗುತ್ತಿದೆ.

ವೈದ್ಯಕೀಯ ವರದಿಯಲ್ಲಿ ಆಹಾರ ಕಲುಷಿತ ಗೊಂಡಿಲ್ಲ ಎಂಬ ಅಂಶ ಪ್ರಮುಖವಾಗಿದ್ದು, ಮಕ್ಕಳು ಅಸ್ವಸ್ಥರಾಗಲು ಬೇರೆ ಕಾರಣ ಇರಬಹುದು ಎಂದು ವೈದ್ಯರು ತಿಳಿಸಿದ್ದಾರೆ.

ಈ ವಸತಿ ಶಾಲೆಯಲ್ಲಿ 27 ವಿದ್ಯಾರ್ಥಿಗಳಿದ್ದು, ರಾತ್ರಿ ಎಲ್ಲರು ಸೊಪ್ಪಿನ ಸಾರು, ಅನ್ನ ಊಟ ಸೇವಿಸಿದ್ದರು. ಇವರಲ್ಲಿ 6 ಹೆಣ್ಣು ಮತ್ತು 2 ಗಂಡು ಮಕ್ಕಳಿಗೆ ಎದೆ, ಹೊಟ್ಟೆನೋವು ಕಾಣಿಸಿಕೊಂಡು ನರಳಾಡಿದ್ದಾರೆ.

ಕೂಡಲೇ ವಾರ್ಡನ್ ಮಹದೇವಪ್ಪ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ್ ರವರು ಮಕ್ಕಳನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ. ಚಿಕಿತ್ಸೆಯ ನಂತರ ವಿದ್ಯಾರ್ಥಿಗಳ ಆರೋಗ್ಯದಲ್ಲಿ ಚೇತರಿಕೆ ಕಂಡು ಬಂದಿದ್ದು, ಯಾರಿಗೂ ಪ್ರಾಣಾಪಾಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ. ಮಕ್ಕಳನ್ನು ಆಸ್ಪತ್ರೆಯಲ್ಲಿಯೇ ಉಳಿಸಿಕೊಂಡು ಬೆಳಗ್ಗೆ ಬಿಡುಗಡೆ ಮಾಡಲಾಗುವುದು ಎಂದು ತಿಳಿದು ಬಂದಿದೆ.

- ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ
- ಬಸವನಪುರದ ಆಶ್ರಮ ಶಾಲೆಯಲ್ಲಿ ಘಟನೆ
- ಆಹಾರ ಕಲುಷಿತಗೊಂಡಿಲ್ಲ – ವರದಿ

ಈ ಘಟನೆ ವಿಷಯ ತಿಳಿಯುತ್ತಿದ್ದಂತೆ ವಿದ್ಯಾರ್ಥಿಗಳ ಪೋಷಕರು ಆತಂಕದಲ್ಲಿ ಜಿಲ್ಲಾಸ್ಪತ್ರೆಗೆ ಧಾವಿಸಿದರು. ವಸತಿ ಶಾಲೆಯ ಅಡುಗೆ ಮನೆಯಲ್ಲಿ ಶುಚಿತ್ವ ಕಾಪಾಡುತ್ತಿಲ್ಲ. ಶುಚಿಗೊಳಿಸದ ಅಕ್ಕಿಯನ್ನು ಬಳಸಿ ಊಟ ತಯಾರು ಮಾಡುತ್ತಾರೆ. ಈ ಬಗ್ಗೆ ದೂರು ಹೇಳಿದರೆ ವಿದ್ಯಾರ್ಥಿಗಳನ್ನು ಹೆದರಿಸುತ್ತಾರೆ ಎಂದು ಪೋಷಕರು ವಸತಿ ನಿಲಯದ ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಶಿವಕುಮಾರ್ ರವರು ಅಂಬೇಡ್ಕರ್ ವಸತಿ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರಲ್ಲದೆ, ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ವಿಚಾರಿಸಿದರು.

# ಭೂ ಕಬಳಿಕೆ ಯತ್ನ: ಆರೋಪ



ಮೈಸೂರು: ಎಚ್.ಡಿ. ಕೋಟೆಯ ಸರ್ವೆ ನಂಬರ್ 82ರಲ್ಲಿನ ಒಟ್ಟು 40ಎಕರೆ ವಾರಸುದಾರರಿಲ್ಲದ ಭೂಮಿಯನ್ನು ನಕಲಿ ದಾಖಲೆ ಸೃಷ್ಟಿಸಿ ಭೂಗಳ್ಳರಿಂದ ಕಬಳಿಕೆ ಮಾಡಿಕೊಳ್ಳುವ ಯತ್ನ ನಡೆದಿದೆ ಎಂದು ತಾರಕ ಮತ್ತು ಹೆಬ್ಬಳ್ಳ ಅಚ್ಚುಕಟ್ಟು ರೈತರ ಹೋರಾಟ ಸಮಿತಿ ಮುಖಂಡರು ಜಂಟಿ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ಅಧ್ಯಕ್ಷ ಹೊ.ಕೆ.ಮಹೇಂದ್ರ ಮಾತನಾಡಿ, ಪಟ್ಟಣದಲ್ಲಿನ ಸ.ನಂ. 82 ರ ಒಟ್ಟು 40 ಎಕರೆ ಭೂಮಿಯನ್ನು 1975 ರಲ್ಲಿ ಎಸ್. ಮಣಿ, ಜಿ. ಲಕ್ಷ?ಮಣ್, ಜಿ. ಗೋಪಾಲ್, ರಾಜಾ ಭೋವಿ, ಎಚ್.ಕೆ. ಶ್ರೀನಿವಾಸ ರಾಜು ಎಂಬುವರ ಹೆಸರಿನಲ್ಲಿ ಪಹಣಿ ಆಯಿತು. 1986087 ರಲ್ಲಿ ಅಲಿಹಸನ್, ಹಬೀಬುನ್ನೀಸಾ, ರಿಜ್ವಾನ್ ಎಂಬುವವರು ಕ್ರಯಕ್ಕೆ ಪಡೆದು ಖಾತೆ ದಾಖಲಾಗಿ ಆರ್‌ಟಿಸಿ ಮುಂದುವರಿದಿದೆ. ಈ ಮೂವರು 1990 ರಲ್ಲಿ ವಿದೇಶಕ್ಕೆ ಹೋಗಿದ್ದಾರೆಂದು ಹೇಳಲಾಗಿದ್ದು, ಇವರಾರೂ ವಾಪಸು ಬಂದಿಲ್ಲ. ಹೀಗಾಗಿ ಸುಮಾರು 20 ವರ್ಷ ಈ ಭೂಮಿ ಪಾಳು ಬಿದ್ದಿತ್ತೆಂದರು.


ನಂತರ ಇದರ ಮಾಹಿತಿ ಪಡೆದ ಭೂಮಾಫಿಯಾದವರು ಈ ಮೊದಲಿನ ಮಾಲೀಕರು ಮರಣ ಹೊಂದಿದ್ದಾರೆ ಎಂಬ ದಾಖಲೆ ಪಡೆದು ಪೌತಿ ಖಾತೆ ಮಾಡಿಸಿಕೊಂಡು ಆರ್‌ಟಿಸಿ ಪಡೆದಿದ್ದಾರೆ. ಈ ನಂತರ ಈ ಜಮೀನು ಕುರಿತ ಹಲವಾರು ವ್ಯವಹಾರ ನಡೆದು ನ್ಯಾಯಾಲಯದ ಮೆಟ್ಟಿಲು ಏರಿತ್ತಾದರೂ ಮೂಲ ವಾರಸುದಾರರು ಈಗ ಎಲ್ಲಿದ್ದಾರೆಂಬುದು ಯಾರಿಗೂ ತಿಳಿಯದು. ಆದರೆ ಅವರ ಕುಟುಂಬದವರೆಂಬ ನಕಲಿ ದಾಖಲೆ ಸೃಷ್ಟಿಸಿ, ಮಾರಾಟ ಮೊದಲಾದ ವ್ಯವಹಾರ ನಡೆಸಲಾಗಿದೆ. ಸರ್ಕಾರಿ ಕಾನೂನಿನ ಪ್ರಕಾರ ವಾರಸುದಾರರಿಲ್ಲದ ಆಸ್ತಿ ಸರ್ಕಾರದ್ದಾಗುತ್ತದೆ. ಹೀಗಾಗಿ ಸುಮಾರು 100 ಕೋಟಿ ಬೆಲೆ ಬಾಳುವ ಈ ಭೂಮಿಯನ್ನು ಎಚ್.ಡಿ. ಕೋಟೆ ಪಟ್ಟಣ ಪಂಚಾಯಿತಿ ತನ್ನ ವಶಕ್ಕೆ ಪಡೆದು, ಭೂಗಳ್ಳರಿಂದ ಬಿಡಿಸಿಕೊಂಡು ಬಡವರಿಗೆ ನಿವೇಶನ ಇಲ್ಲವೇ, ಇನ್ನಿತರ ಸಾರ್ವಜನಿಕ ಉದ್ದೇಶಕ್ಕೆ ಬಳಸಬೇಕೆಂದು ಕೋರಿದರು. ಕುಮಾರಸ್ವಾಮಿ ಮಾದೇಗೌಡ, ಚೌಡಳ್ಳಿ ಜವರಯ್ಯ, ಗೋವಿಂದೇಗೌಡ, ಕೆಂಪಶೆಟ್ಟಿ ಹಾಗೂ ಇನ್ನಿತರರು ಇದ್ದರು.

## ವಾಹನ ಸವಾರರಿಗೆ ಕಾಡಾನೆ ಕಾಟ

ಗುಂಡ್ಲುಪೇಟೆ: ತಾಲೂಕಿನ ಬಂಡಿಪುರ ಹುಲಿ ಸಂರಕ್ಷಿತ ಪ್ರದೇಶದ ಮೂಲಕ ಮಧುಮಲೈಗೆ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಇತ್ತೀಚೆಗೆ "ತರಕಾರಿ ರಾಜ" ಎಂದು ಸಾಮಾಜಿಕ ಜಾಲತಾಣಗಳು, ದೃಶ್ಯ ಮಾಧ್ಯಮಗಳು ಹಾಗೂ ಪತ್ರಿಕೆಗಳಲ್ಲಿ ಹೆಸರುವಾಸಿಯಾಗಿರುವ ಕಾಡಾನೆ ವಾಹನ ಸವಾರರಿಗೆ ಆತಂಕ ಉಂಟುಮಾಡುತ್ತಿದೆ.

ತರಕಾರಿ ಸಾಗಿಸುತ್ತಿರುವ ಪಿಕಪ್ ಹಾಗೂ ಲಾರಿಗಳು ರಸ್ತೆಯಲ್ಲಿ ಕಾಣಿಸಿಕೊಂಡ ಕೂಡಲೇ ಆನೆ ರಸ್ತೆ ಬದಿಗೆ ಬಂದು ವಾಹನಗಳತ್ತ ಧಾವಿಸಿ ಆಹಾರಕ್ಕಾಗಿ ಕಾಯುತ್ತಿರುವ ದೃಶ್ಯಗಳು ಸಾಮಾನ್ಯವಾಗಿವೆ. ಕೆಲವೊಮ್ಮೆ ಆನೆ ರಸ್ತೆಯ ಮಧ್ಯದಲ್ಲೇ ನಿಂತುಕೊಳ್ಳುವುದರಿಂದ ಎರಡೂ ಬದಿಗಳಲ್ಲಿ ವಾಹನಗಳು ಸಾಲುಗಟ್ಟಿ ನಿಂತು ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ಇದರ ನಡುವೆಯೇ ಕೆಲ ಬೈಕ್ ಸವಾರರು ಹಾಗೂ ಕಾರುಗಳಲ್ಲಿ ಪ್ರಯಾಣಿಸುತ್ತಿದ್ದವರು ವಾಹನಗಳಿಂದ ಇಳಿದು ಆನೆಯನ್ನು ಸಮೀಪದಿಂದ ನೋಡಲು, ಛಾಯಾಚಿತ್ರ ಹಾಗೂ ವಿಡಿಯೊ ಸೆರೆಹಿಡಿಯಲು ಮುಂದಾಗುತ್ತಿರುವುದು ಅಪಾಯಕ್ಕೆ ಆಹ್ವಾನ ನೀಡಿದಂತಾಗಿದೆ. ಕೆಲವು ಸಂದರ್ಭಗಳಲ್ಲಿ ಆನೆಯನ್ನು ಓಡಿಸಲು ಯತ್ನಿಸುತ್ತಿರುವ ಘಟನೆಗಳೂ ವರದಿಯಾಗಿವೆ.

ಬಂಡಿಪುರ ಅರಣ್ಯ ವ್ಯಾಪ್ತಿಯ ಹಲವು ಕಡೆಗಳಲ್ಲಿ "ರಸ್ತೆ ಮಧ್ಯೆ ಅಥವಾ ಅರಣ್ಯ ಪ್ರದೇಶದಲ್ಲಿ ವಾಹನಗಳಿಂದ ಇಳಿಯಬಾರದು. ನಿಯಮ ಉಲ್ಲಂಘಿಸಿದರೆ ದಂಡ ವಿಧಿಸಲಾಗುವುದು" ಎಂದು ಅರಣ್ಯ ಇಲಾಖೆ ಎಚ್ಚರಿಕೆ ಫಲಕಗಳನ್ನು ಅಳವಡಿಸಿದ್ದರೂ, ಕೆಲವರು ಅವುಗಳನ್ನು ನಿರ್ಲಕ್ಷಿಸಿ ನಿಯಮ ಉಲ್ಲಂಘಿಸುತ್ತಿದ್ದಾರೆ. ಸಾರ್ವಜನಿಕರ ಸುರಕ್ಷತೆ ಹಾಗೂ ವನ್ಯಜೀವಿಗಳ ನೆಮ್ಮದಿಯನ್ನು ಕಾಪಾಡುವ ದೃಷ್ಟಿಯಿಂದ ರಸ್ತೆ ಮಧ್ಯೆ ವಾಹನಗಳಿಂದ ಇಳಿದು ನಿಯಮ ಉಲ್ಲಂಘಿಸುವವರ ವಿರುದ್ಧ ಅರಣ್ಯ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.



# ಆಡಳಿತದಲ್ಲಿ ಕನ್ನಡ ಅನುಷ್ಠಾನ ಕಡ್ಡಾಯ

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಸೂಚನೆ

ಚಾಮರಾಜನಗರ: ಆಡಳಿತದಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಕನ್ನಡ ಅನುಷ್ಠಾನ ಪ್ರಗತಿ ಕುರಿತು ಸಭೆ ನಡೆಸಿದ ಬಳಿಕ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಮಾದರಿ ಗಡಿ ಜಿಲ್ಲೆ ಚಾಮರಾಜನಗರ

ಸರ್ಕಾರಿ ಅಧೀನದ ಎಲ್ಲ ಇಲಾಖೆಗಳಲ್ಲಿ ಕನ್ನಡ ಭಾಷೆ ಸಮರ್ಪಕವಾಗಿ ಅನುಷ್ಠಾನವಾಗಬೇಕು. ಕಳೆದ ಒಂದೂವರೆ ವರ್ಷದಲ್ಲಿ ರಾಜ್ಯದ 24 ಜಿಲ್ಲೆಗಳಿಗೆ ಪ್ರವಾಸ ಕೈಗೊಂಡು 1,200ಕ್ಕೂ ಹೆಚ್ಚು ವಿಭಾಗಗಳ ಅಧಿಕಾರಿಗಳನ್ನು ಭೇಟಿ ಮಾಡಿ ಆಡಳಿತದಲ್ಲಿ ಕನ್ನಡ ಅನುಷ್ಠಾನದ ಬಗ್ಗೆ ಚರ್ಚಿಸಿದ್ದೇನೆ. ಗಡಿಜಿಲ್ಲೆಯಾಗಿರುವ ಚಾಮರಾಜನಗರದಲ್ಲಿ ಹಲವು ಭಾಷೆಗಳಿದ್ದರೂ ಭಾಷಾ ಸಂಘರ್ಷ ಇಲ್ಲದಿರುವುದು ವಿಶೇಷ. ಈ ಭಾಗದಲ್ಲಿ ಕನ್ನಡದ ಸೊಗಡು ಉಳಿದಿದೆ ಮತ್ತು ಕನ್ನಡವನ್ನು ಪ್ರೀತಿಸುವ ಜನರಿದ್ದಾರೆ. ಆಡಳಿತದಲ್ಲಿ ಕನ್ನಡ ಅನುಷ್ಠಾನದ ಕಾಳಜಿಗೆ ಜಿಲ್ಲಾಡಳಿತ ಸೇರಿದಂತೆ ವಿವಿಧ ಇಲಾಖೆಗಳು ಪೂರಕವಾಗಿ ಸ್ಪಂದಿಸಿವೆ. ಇದನ್ನು ಮಾದರಿಯಾಗಿ ಬೇರೆ ಜಿಲ್ಲೆಗಳು ಅನುಸರಿಸಬೇಕಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

### ಮಾತೃಭಾಷೆಯಲ್ಲಿ ಬ್ಯಾಂಕಿಂಗ್ ಪರೀಕ್ಷೆಗೆ ಆಗ್ರಹ

ಜಿಲ್ಲೆಯ ವಿವಿಧ ಬ್ಯಾಂಕ್ಗಳಲ್ಲಿ ಬೇರೆ ಭಾಷೆಯ ಅಧಿಕಾರಿಗಳಿರುವುದರಿಂದ ಗ್ರಾಮೀಣ ಜನರಿಗೆ ತೊಂದರೆಯಾಗುತ್ತಿರುವ ಕುರಿತು ದೂರುಗಳಿವೆ. ಬ್ಯಾಂಕ್ ಅಧಿಕಾರಿಗಳು ಜನರೊಂದಿಗೆ ಕನ್ನಡದಲ್ಲಿ ವ್ಯವಹರಿಸಲು ತರಬೇತಿಯ ಅವಶ್ಯಕತೆಯಿದೆ. ಬ್ಯಾಂಕಿಂಗ್ ಪರೀಕ್ಷೆಗಳನ್ನು 22 ಭಾಷೆಗಳಲ್ಲೂ ನಡೆಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಎಲ್ಲರಿಗೂ ಅವರವರ ಮಾತೃಭಾಷೆಯಲ್ಲಿ ಪರೀಕ್ಷೆ ಬರೆಯಲು ಅವಕಾಶ ಸಿಗಬೇಕು. ಬ್ಯಾಂಕ್ಗಳಲ್ಲಿ ಶೇ. 100 ರಷ್ಟು ಕನ್ನಡಿಗರು ಇರಲು ಹಾಗೂ ಕನ್ನಡಿಗರಿಗೆ ಬ್ಯಾಂಕ್ಗಳಲ್ಲಿ ಹೆಚ್ಚಿನ ಉದ್ಯೋಗ ಸಿಗಲು ಇದು ಸಹಕಾರಿಯಾಗಲಿದೆ ಎಂದು ತಿಳಿಸಿದರು.



### ಸರ್ಕಾರಿ ಶಾಲೆಗಳ ಆಸ್ತಿ ರಕ್ಷಣೆ, ಪಾರಂಪರಿಕ ಶಾಲೆ

ರಾಜ್ಯದಲ್ಲಿ ಶತಮಾನ ಕಂಡ ಸರ್ಕಾರಿ ಕನ್ನಡ ಶಾಲೆಗಳನ್ನು 'ಪಾರಂಪರಿಕ ಶಾಲೆ'ಗಳಾಗಿ ಪರಿವರ್ತಿಸಿ ಅಭಿವೃದ್ಧಿಪಡಿಸಬೇಕಿದೆ. ಪ್ರತಿ ಜಿಲ್ಲೆಗೊಂದರಂತೆ ಇಂತಹ ಶಾಲೆಗಳನ್ನು ಮಾಡಬೇಕು. ರಾಜ್ಯದ 19,700 ಸರ್ಕಾರಿ ಶಾಲೆಗಳಿಗೆ ಆಸ್ತಿ ಖಾತಾ ನೋಂದಣಿ ಪತ್ರವೇ ಇಲ್ಲ. ಶಾಲೆ ಮುಚ್ಚಿದ ಬಳಿಕ ದಾನಿಗಳ ಮೊಮ್ಮಕ್ಕಳು ಅಥವಾ ಖಾಸಗಿಯವರು ಆ ಜಾಗವನ್ನು ಮಾರಾಟ ಮಾಡುತ್ತಿದ್ದಾರೆ. ಶಾಲೆ ಮುಚ್ಚಿದರೂ ಆ ಜಾಗ ಸರ್ಕಾರದ ಅಧೀನದಲ್ಲಿಯೇ ಇರಬೇಕು. ಚಾಮರಾಜನಗರ ಜಿಲ್ಲೆಯಲ್ಲೂ 115 ಸರ್ಕಾರಿ ಶಾಲೆಗಳಿಗೆ ಖಾತಾ ಪತ್ರವಿಲ್ಲ. ಈ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ವಿವರಿಸಿದರು.

### ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ ಶೇ.40 ಉದ್ಯೋಗ

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಯಿಂದ ಜಮೀನು ಪಡೆದ ಕೈಗಾರಿಕೆಗಳಲ್ಲಿ, ಸ್ಥಳೀಯ ಕನ್ನಡಿಗರಿಗೆ ಶೇ. 40 ರಷ್ಟು ಉದ್ಯೋಗ ಮೀಸಲಿಡುವಂತೆ ಸರ್ಕಾರದ ಸುತ್ತೋಲೆ ಇದೆ. ಆದರೆ, ಇದು ಉಲ್ಲಂಘನೆಯಾಗುತ್ತಿರುವುದು ಕಂಡುಬಂದಿದೆ. ಈ ಸಂಬಂಧ ಜಿಲ್ಲಾಡಳಿತವು ಜಿಲ್ಲಾ ವ್ಯಾಪ್ತಿಯ ಕೈಗಾರಿಕೆಗಳಿಗೆ ಖುದ್ದು ಭೇಟಿಕೊಟ್ಟು ಪರಿಶೀಲನೆ ನಡೆಸಬೇಕು. ಕೈಗಾರಿಕೆಗಳಲ್ಲಿ ಸ್ಥಳೀಯ ಕನ್ನಡಿಗರಿಗೆ ಉದ್ಯೋಗ ಲಭ್ಯತೆಯ ವರದಿ ಪಡೆದು ಸರ್ಕಾರಕ್ಕೆ ಸಲ್ಲಿಸುವ ಮೂಲಕ ಕನ್ನಡಿಗರಿಗೆ ಹೆಚ್ಚು ಉದ್ಯೋಗ ಕಲ್ಪಿಸಿಕೊಡಲು ಪ್ರಾಧಿಕಾರ ಬದ್ಧವಾಗಿದೆ ಎಂದು ಅಧ್ಯಕ್ಷರು ಹೇಳಿದರು.

### ನಾಮಫಲಕ, ರಸೀದಿಗಳಲ್ಲಿ ಕನ್ನಡ ಕಡ್ಡಾಯ

ಪೊಲೀಸ್ ಇಲಾಖೆಯಲ್ಲಿನ ಸೂಚನಾ ಫಲಕಗಳು ಇಂಗ್ಲಿಷ್ ಭಾಷೆಯಲ್ಲಿದ್ದು, ಕಡ್ಡಾಯವಾಗಿ ಕನ್ನಡದಲ್ಲಿ ಫಲಕಗಳು ಇರಬೇಕು. ವ್ಯಾಪಾರಿಗಳ ಬಳಿ ವಸ್ತುಗಳನ್ನು ಗಿರವಿ ಇಡುವವರ ಪತ್ರಗಳು ಕನ್ನಡದಲ್ಲಿ ಇರುವಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಕನ್ನಡದ ನಾಮಫಲಕ ಹಾಕಬೇಕು. ಮಲೆ ಮಹದೇಶ್ವರ ಬೆಟ್ಟದ ರಸೀದಿಗಳನ್ನು ಕನ್ನಡದಲ್ಲಿಯೇ ಮುದ್ರಿಸಬೇಕು. ವೈದ್ಯರು ಔಷಧಿ ಚೀಟಿ ಬರೆಯುವಾಗ ಕನಿಷ್ಠ ರೋಗಿಯ ಹೆಸರನ್ನಾದರೂ ಕನ್ನಡದಲ್ಲಿ ಬರೆಯಬೇಕು. ಕೆಪಿಎಸ್ ಶಾಲೆಗಳಲ್ಲಿ 5ನೇ ತರಗತಿಯವರೆಗೆ ಕಡ್ಡಾಯವಾಗಿ ಕನ್ನಡ ಮಾಧ್ಯಮ ಇರಬೇಕು. ನಮ್ಮ ಮುಂದಿನ ತಲೆಮಾರಿಗೆ ಉತ್ತಮ ಕನ್ನಡ ಕಲಿಕಾ ವಿಧಾನಗಳನ್ನು ನೀಡಬೇಕಾಗಿದೆ ಎಂದು ಪ್ರಾಧಿಕಾರದ ಅಧ್ಯಕ್ಷರು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರಾಜು, ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ್ ಹಾನಗಲ್, ಹಿರಿಯ ಸದಸ್ಯ ಡಾ. ಗುರುರಾಜು, ಆಪ್ತ ಕಾರ್ಯದರ್ಶಿ ಪಣಿಕುಮಾರ್, ಕನ್ನಡ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾದ ಅರುಣ್ ಕುಮಾರ್, ಪಿ. ಮಹೇಶ್, ಪದ್ಮಪುರುಷೋತ್ತಮ್, ರೂಬಿನ್ ಸಂಜಯ್ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ ಆಯುಷ್ ಇಲಾಖೆ
ಜಿಲ್ಲಾ ಪಂಚಾಯತ್, ಹಾಸನ
ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ಆಯುಷ್ ಇಲಾಖೆ, ಹೊಸಲೈನ್ ರಸ್ತೆ, ಹಾಸನ–573201
E-mail: dao.hassan09@gmail.com ದೂರವಾಣಿ ಸಂ:08172–272272
ಸಂ: ಜಿಆಕಹಾ/69/ಬ.ಮೆ/ಸಿ(1)2024–25 ದಿನಾಂಕ: 09.07.2026

**ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ**

ಜಿಲ್ಲಾ ಆಯುಷ್ ಕಛೇರಿಯ ವ್ಯಾಪ್ತಿಯಲ್ಲಿರುವ ಆಸ್ಪತ್ರೆ/ಚಿಕಿತ್ಸಾಲಯಗಳ ವೈದ್ಯಕೀಯ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಲು ನೋಂದಾಯಿತ ಏಜೆನ್ಸಿಯವರಿಂದ 01 ವರ್ಷದ ಅವಧಿಗೆ ಇ–ಪ್ರೊಕ್ಯೂರ್‌ಮೆಂಟ್ ವೆಬ್ ಸೈಟ್ ಮೂಲಕ ಅಲ್ಪಾವಧಿ ಇ–ಟೆಂಡರ್ ಆಹ್ವಾನಿಸಲಾಗಿದೆ. ದಿನಾಂಕ: 09.07.2026 ರಿಂದ 24.07.2026 ರವರೆಗೆ ಆನ್ ಲೈನ್‌ನಲ್ಲಿ ಅರ್ಜಿಯನ್ನು ಪಡೆದು ಸಲ್ಲಿಸುವುದು. ಟೆಂಡರ್ ಹೆಚ್ಚಿನ ಮಾಹಿತಿಗಾಗಿ www.kppp.karnataka.gov.in ವೆಬ್‌ಸೈಟ್ ಅಧಿಸೂಚನೆ ಸಂಖ್ಯೆ: AYD/2026-27/SE0226 ನಲ್ಲಿ ನೋಡಬಹುದಾಗಿದೆ.

ಸಹಿ/–ಜಿಲ್ಲಾ ಆಯುಷ್ ಅಧಿಕಾರಿಗಳು,
ಜಿಲ್ಲಾ ಆಯುಷ್ ಕಛೇರಿ, ಹಾಸನ ಜಿಲ್ಲೆ.
ವಾಸಾಸಂಇ/ಹಿಸನಿ/ಹಾಸನ/319/ಕೆಎಸ್‌ಎಂಸಿಎ/2026–27

## ಹೊನ್ನಹಳ್ಳಿ ಸಮೀಪ ಬೊಲೆರೋ ಪಿಕಪ್ ಮಗುಚಿ 5 ಜನರಿಗೆ ಗಾಯ

ಚಾಮರಾಜನಗರ, ತಾಲೂಕಿನ ಹೊನ್ನಹಳ್ಳಿ ಗ್ರಾಮದ ಸಮೀಪ ಬೊಲೆರೋ ಪಿಕಪ್ ಮಗುಚಿ, ಚಾಲಕನ ಜೊತೆಗೆ 5 ಜನರಿಗೆ ತೀವ್ರವಾಗಿ ಗಾಯಗೊಂಡಿದ್ದಾರೆ.

ತಾಲೂಕಿನ ದೊಡ್ಡ ಮೋಳೆ ಗ್ರಾಮದ ದರ್ಶನ್ ಹಾಗೂ ಕೂಲಿ ಕೆಲಸಕ್ಕೆ ಹೋಗಿದ್ದ ಶೇಷ, ಉಮೇಶ, ಅಭಿ ಹಾಗೂ ಗೋವಿಂದ ಗಾಯಗೊಂಡಿದ್ದಾರೆ. ಎಳನೀರು ಸಂಗ್ರಹ ಮಾಡಲು ಅಮಚವಾಡಿ ಗ್ರಾಮದಿಂದ ಅರಕಲವಾಡಿ ಗ್ರಾಮಕ್ಕೆ ಹೋಗಿ, ವಾಪಸ್ ಬರುವಾಗ ಹೊನ್ನಳ್ಳಿ ಗ್ರಾಮದ ರಸ್ತೆಯ ತಿರುವಿನಲ್ಲಿ ವಾಹನದ ಆಕ್ಸಲ್ ಕಟ್ಟಾಗಿ ರಸ್ತೆಯ ತಿರುವಿನಲ್ಲಿ ಮಗುಚಿ ಬಿದ್ದ ಪರಿಣಾಮ ವಾಹನದಲ್ಲಿ ಇದ್ದವರಿಗೆ ಗಾಯಗಳಾಗಿವೆ. ಅಪಘಾತದ ವಿಚಾರ ತಿಳಿಯುತ್ತಿದ್ದಂತೆ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಗಾಯಳುಗಳನ್ನು ಚಾಮರಾಜನಗರ ಸಿಮ್ಸ್ ಆಸ್ಪತ್ರೆಗೆ ಚಿಕಿತ್ಸೆಗೆ ರವಾನಿಸಿದರು.



# ಎಸ್‌ಐಆರ್ ಜಾಗೃತಿ ಕಾರ್ಯಕ್ರಮ




ಮೈಸೂರು:– ನಂಜನಗೂಡು ತಾಲ್ಲೂಕು ಪಂಚಾಯಿತಿ ವತಿಯಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಎಸ್‌ಐಆರ್ – 2026ರ ಹಿನ್ನೆಲೆ ದಕ್ಷಿಣಕಾಶಿ ಎಂದೇ ಪ್ರಸಿದ್ದವಾಗಿರುವ ಶ್ರೀಕಂಠೇಶ್ವರ ದೇವಾಲಯದ ಆವರಣದಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಎಸ್.ಐ.ಆರ್ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡು, ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಬಿ.ಎಲ್ undefined ಫೆಸಿಲಿಟೇಷನ್ ಸೆಂಟರ್ ಹಾಗೂ ವೋಟರ್ ಫೆಸಿಲಿಟೇಷನ್ ಸೆಂಟರ್ ತೆರಯಲಾಗಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಮತದಾರರು ಇದರ ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಲಾಗಿದೆ. ಮತದಾರರ ಪಟ್ಟಿ ಶುದ್ದೀಕರಣದ ಉದ್ದೇಶದಿಂದ ನಡೆಯುತ್ತಿರುವ ಮತದಾರರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಸಂಪೂರ್ಣ ನೀಡುವಂತೆ ಕರೆ ನೀಡಲಾಯಿತು. ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿಯ ತಾಲ್ಲೂಕು ಯೋಜನಾಧಿಕಾರಿ ಶ್ವೇತಾ, ಸಹಾಯಕ ನಿರ್ದೇಶಕರಾದ ಜ್ಯೋತಿ, ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳಾದ ದಿನೇಶ್, ಕಾವ್ಯ ಹಾಗೂ ನವೀನ್ ಹಾಜರಿದ್ದರು.

# ಸಾಧನೆಗೆ ಶಿಕ್ಷಣವೇ ಪ್ರಧಾನಾಸ್ತ್ರ: ಪುಟ್ಟರಂಗಶೆಟ್ಟಿ

## ಚಂದಕವಾಡಿ ಸರ್ಕಾರಿ ಪ್ರೌಢಶಾಲೆಯಲ್ಲಿ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳ ಹಾಗೂ ಕಂಪ್ಯೂಟರ್ ಪ್ರಯೋಗಾಲಯ ಉದ್ಘಾಟನೆ.

ಚಾಮರಾಜನಗರ: ವಿದ್ಯಾರ್ಥಿಗಳನ್ನು ಸಮಾಜದ ಉತ್ತಮ ಪ್ರಜೆಗಳನ್ನಾಗಿಸುವ ಹೊಣೆ ಶಿಕ್ಷಕರ ಮೇಲಿದೆ ಎಂದು ಎಂಎಸ್ಐಎಲ್ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ.ಪುಟ್ಟರಂಗಶೆಟ್ಟಿ ಅಭಿಪ್ರಾಯಪಟ್ಟರು.

ತಾಲೂಕಿನ ಚಂದಕವಾಡಿ ಸರ್ಕಾರಿಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ 2026–27 ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾಚಟುವಟಿಕೆಗಳು, ಸ್ಕೌಟ್ ಅಂಡ್ ಗೈಡ್, ರೇಂಜರ್, ರೋವರ್, ಎನ್‌ಎಸ್‌ಎಸ್, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಪ್ರತಿಭಾಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಇಂದು ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೂ ಶಿಕ್ಷಣವನ್ನೇ ಅವಲಂಬಿಸಬೇಕು, ಶಿಕ್ಷಣಕ್ಕೆ ಅಂತಹ ಮಹತ್ವದ ಸ್ಥಾನವಿದೆ. ಚಂದಕವಾಡಿ ಪ್ರೌಢಶಾಲೆ ಪ್ರತಿವರ್ಷ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ 100 ಫಲಿತಾಂಶ ದಾಖಲಿಸುತ್ತಿರುವುದು ಹೆಮ್ಮೆಯ ವಿಷಯ ಎಂದರು. ಜಿಲ್ಲೆಯಲ್ಲಿ ಉನ್ನತ ಶಿಕ್ಷಣಸಂಸ್ಥೆಗಳಿಗೇನೂ ಕೊರತೆಇಲ್ಲ. ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದರೆ ಅದು ನಿಮ್ಮ ಉನ್ನತ ಶಿಕ್ಷಣಕ್ಕೆ ದಾರಿಮಾಡಿಕೊಡಲಿದೆ ಎಂದರು. ಇದೇವೇಳೆ ಕಲಾವಿಭಾಗ, ವಾಣ ಜ ವಿಭಾಗ. ವಿಜ್ಞಾನ ವಿಭಾಗ ಹಾಗೂ ಕನ್ನಡಭಾಷೆಯಲ್ಲಿ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳನ್ನು ಹಾಗೂ ವೇದಿಕೆಯ ಗಣ್ಯರು ಸನ್ಮಾನಿಸಿದರು.



ಸಿಎಸ್‌ಆರ್ ನಿಧಿ 10.50 ಲಕ್ಷ ರೂ,ವೆಚ್ಚದಲ್ಲಿ ನಿರ್ಮಿಸಿರುವ ಕಂಪ್ಯೂಟರ್ ಪ್ರಯೋಗಾಲಯವನ್ನು ಶಾಸಕರು ಉದ್ಘಾಟಿಸಿದರು.

ಹೆಣ್ಣುಮಕ್ಕಳಿಗೆ ಶೌಚಾಲಯ, ಸಭಾಂಗಣ ನಿರ್ಮಿಸಿಕೊಡಬೇಕು ಎಂಬ ಶಿಕ್ಷಕರ ಮನವಿಗೆ ಶಾಸಕರು ಸ್ಪಂದಿಸುವ ಮೂಲಕ ನಿರ್ಮಿಸಿಕೊಡುವ ಭರವಸೆ ನೀಡಿದರು, ಶಾಲಾಭಿ ವೃದ್ಧಿ ಸಮಿತಿ ಸದಸ್ಯರಾದ ವಿಜಯಕುಮಾರಿ, ಗೋವಿಂದರಾಜು, ದಡದಹಳ್ಳಿರಮೇಶ್, ಬಿಇಒ ಹನುಮಶೆಟ್ಟಿ,ಸರ್ಕಾರಿಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎಂ.ಸ್ವಾಮಿ, ಉಪಪ್ರಾಂಶುಪಾಲ ಚಂದ್ರಶೇಖರ್, ಸಹಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

## ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕುಮಾರ

# ಎಸ್.ಐ.ಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ

ಚಾಮರಾಜನಗರ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಆರಂಭವಾಗಿದ್ದು, ಎಲ್ಲರೂ ಸಕ್ರಿಯವಾಗಿ ಭಾಗವಹಿಸಬೇಕು ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ತಾಲೂಕು ಸ್ವೀಪ್ ಸಮಿತಿಯ ಅಧ್ಯಕ್ಷ ಕುಮಾರ ತಿಳಿಸಿದರು.

ಕೊಳ್ಳೇಗಾಲ ಪಟ್ಟಣದ ಜೆ.ಎಸ್.ಎಸ್ ಕಾಲೇಜಿನ ಸಭಾಂಗಣದಲ್ಲಿಂದು ತಾಲೂಕು ಪಂಚಾಯತಿ ಮತ್ತು ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಮಾತನಾಡಿದರು.

ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್.ಒ) ಈಗಾಗಲೇ ಮನೆ ಮನೆಗೆ ಭೇಟಿ ನೀಡುತ್ತಿದ್ದಾರೆ. ಎಲ್ಲರೂ ಗಣತಿ ನಮೂನೆ (ಎನ್ಯುಮರೇಷನ್ ಫಾರಂ) ಯನ್ನು ನಿಖರವಾದ ಮಾಹಿತಿಯೊಂದಿಗೆ ಭರ್ತಿ ಮಾಡಬೇಕು. ಹೊಸದಾಗಿ ಸೇರ್ಪಡೆಯಾಗುವ ಯುವ ಮತದಾರರು ನಮೂನೆ 6ಎ ಫಾರಂ ನಲ್ಲಿ ಸೂಕ್ತ ಮಾಹಿತಿ ಸಲ್ಲಿಸಬೇಕು ಎಂದು ತಿಳಿಸಿದರು.




ಕಾಲೇಜಿನ ವಿದ್ಯಾರ್ಥಿಗಳಲ್ಲಿ 18 ವರ್ಷ ತುಂಬಿದ ವಯಸ್ಕ ಮತದಾರರು ಹೊಸ ಮತದಾರರ ಪಟ್ಟಿಗೆ ಸೇರ್ಪಡೆಯಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಿಮ್ಮ ಹತ್ತಿರದ ಗ್ರಾಮ ಪಂಚಾಯತಿಯಲ್ಲಿ ಎಸ್.ಐ.ಆರ್ ಸಂಬಂಧ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಬಹುದಾಗಿದೆ. ಹೊಸದಾಗಿ ಮತದಾರ ಪಟ್ಟಿಗೆ ಸೇರ್ಪಡೆಗೊಳ್ಳಲು ಇದು ಉತ್ತಮ ಅವಕಾಶವಾಗಿದ್ದು, ಇದರ ಸದುಪಯೋಗಪಡೆಯಬೇಕು ಎಂದರು.

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ತಳಹದಿ ಬಲಪಡಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ ಎಸ್‌ಐಆರ್ ಪ್ರಕ್ರಿಯೆಯ ಮೂಲಕ ಮತದಾರರ ಪಟ್ಟಿಯಲ್ಲಿ ಅರ್ಹರನ್ನು ಸೇರಿಸುವುದು ಮತ್ತು ಅನರ್ಹರು, ಮೃತಪಟ್ಟವರ ಹೆಸರುಗಳನ್ನು ತೆಗೆಯುವ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಮಾಡಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ ಅಗತ್ಯ ದಾಖಲೆ ಹಾಗೂ ಮಾಹಿತಿ ಒದಗಿಸಿ ಎಸ್.ಐ.ಆರ್ ಯಶಸ್ಸಿಗೆ ಸಹಕರಿಸಬೇಕು ಎಂದು ಕುಮಾರ ಅವರು ಹೇಳಿದರು.

ಸಹಾಯಕ ಲೆಕ್ಕಾಧಿಕಾರಿ ರಾಜಣ್ಣ, ಜಿಲ್ಲಾ ಐ.ಇ.ಸಿ ಸಂಯೋಜಕರಾದ ನವೀನ, ಜೆ.ಎಸ್.ಎಸ್ ಕಾಲೇಜಿನ ಪ್ರಾಂಶುಪಾಲರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಕಚೇರಿಗಳಲ್ಲಿ ಕನ್ನಡ ನಾಮಫಲಕ ಕಡ್ಡಾಯ ಅಳವಡಿಕೆಗೆ ಸೂಚನೆ

**ಚಾಮರಾಜನಗರ:** ಕನ್ನಡ ಭಾಷೆಯ ಸಮರ್ಪಕ ಅನುಷ್ಠಾನಕ್ಕಾಗಿ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳು, ಬ್ಯಾಂಕ್ಗಳು ಹಾಗೂ ಸ್ಥಳೀಯ ಸಂಸ್ಥೆಗಳು ಆಡಳಿತದಲ್ಲಿ ಕನ್ನಡ ಕುರಿತ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ಮಾತೃಭಾಷೆ ಕನ್ನಡ. ಆಡಳಿತ ಭಾಷೆಯೂ ಆಗಿರುವ ಕನ್ನಡವನ್ನು ಆಡಳಿತ ವ್ಯವಹಾರ ನಡೆಸಲು ಮಾತ್ರವಲ್ಲ, ನಮ್ಮ ಹೃದಯಭಾಷೆಯಾಗಬೇಕು. ಆಗಮಾತ್ರ ಪ್ರತಿಯೊಬ್ಬ ಕನ್ನಡಿಗರು ಕನ್ನಡ ಭಾಷೆಯನ್ನು ಉಳಿಸಿ ಬೆಳೆಸಲು ಸಾಧ್ಯವಾಗಲಿದೆ. ಆಡಳಿತದಲ್ಲಿ ಕನ್ನಡ ಅನುಷ್ಠಾನಗೊಳಿಸಲು ಇರುವ ದೋಷಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ನಿರೀಕ್ಷಿತ ಮಟ್ಟದಲ್ಲಿ ಕನ್ನಡವನ್ನು ನಾವು ಬಳಸಬೇಕು. ಈ ನಿಟ್ಟಿನಲ್ಲಿ ಜಿಲ್ಲಾ, ತಾಲೂಕುಮಟ್ಟದ ಇಲಾಖೆಗಳು ಆಡಳಿತದಲ್ಲಿ ಕನ್ನಡ ಕುರಿತ 60*40 ಅಳತೆ ನಾಮಫಲಕವನ್ನು ಕಡ್ಡಾಯವಾಗಿ ಹಾಕುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆಡಳಿತದಲ್ಲಿ ಕನ್ನಡ ಅನುಷ್ಠಾನ ಸಮರ್ಪಕವಾಗಿರುವ ಬಗ್ಗೆ ಪರಿಶೀಲಿಸುವುದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪ್ರಮುಖ ಉದ್ದೇಶವಾಗಿದೆ. 1994ರಲ್ಲಿ ಅಸ್ತಿತ್ವಕ್ಕೆ ಬಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸ



ಕೈಗೊಂಡು ಆಡಳಿತದಲ್ಲಿ ಕನ್ನಡ ಅನುಷ್ಠಾನದ ಸಮಸ್ಯೆಗಳ ಕುರಿತು ಜಿಲ್ಲಾಡಳಿತದ ಮೂಲಕ ವರದಿ ಸಂಗ್ರಹಿಸಿ ಸರ್ಕಾರಕ್ಕೆ ಸಲ್ಲಿಸುವ ಕೆಲಸ ಮಾಡುತ್ತಿದೆ. 2015ರ ಸಮಗ್ರ ಕನ್ನಡ ಅನುಷ್ಠಾನದ ಪ್ರಕಾರ ಕನ್ನಡವನ್ನು ಮೊದಲ ಭಾಷೆಯಾಗಿ ಕಲಿಯಬೇಕಿದೆ. ಜಿಲ್ಲಾಮಟ್ಟದಲ್ಲಿ ಕನ್ನಡ ಜಾಗೃತಿ ಸಮಿತಿ ಸಭೆಗಳನ್ನು ನಡೆಸಬೇಕು. ರಾಜ್ಯದಲ್ಲಿರುವ ಇತರ ಭಾಷಿಕರಿಗೆ ಕನ್ನಡ ಕಲಿಸಬೇಕು. ಅದಕ್ಕಾಗಿ ಆಡಳಿತ ತರಬೇತಿ ಸಂಸ್ಥೆಗಳು ಅವಶ್ಯವಾಗಿವೆ ಎಂದರು.

ಆಸ್ಪತ್ರೆಗಳಲ್ಲಿ ವೈದ್ಯರು ರೋಗಿಗೆ ಔಷಧ ಚೀಟಿಗಳನ್ನು ಕನ್ನಡದಲ್ಲಿ ಬರೆಯಬೇಕು. ಕನಿಷ್ಠ ರೋಗಿಯ ಹೆಸರು, ಉಳಿದ ಮಾಹಿತಿಗಳನ್ನಾದರೂ ಕನ್ನಡದಲ್ಲಿಯೇ ಬರೆಯುವಂತಾಗಬೇಕು. ಬ್ಯಾಂಕ್ ಗಳಲ್ಲಿ ಚಲನ್ ಗಳು ಕನ್ನಡದಲ್ಲಿ ಮುದ್ರಿಸಿರಬೇಕು. ಕನ್ನಡ ಬಾರದ ಬ್ಯಾಂಕ್ ಅಧಿಕಾರಿಗಳಿಗೆ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕೆಲ ವಿದ್ಯಾರ್ಥಿಗಳು ಕನ್ನಡ ಭಾಷೆಯಲ್ಲಿಯೇ ಅನುತ್ತೀರ್ಣರಾಗುತ್ತಿರುವುದು ದುರಂತದ ಸಂಗತಿ. ಇದರ ನಿವಾರಣೆಗಾಗಿ ಪಠ್ಯಪುಸ್ತಕಗಳ ಪರಿಷ್ಕರಣೆಯಾಗಬೇಕು. ಶತಮಾನ ಕಂಡ ಕನ್ನಡ ಶಾಲೆಗಳನ್ನು ರಾಷ್ಟ್ರನಾಯಕರು, ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಖ್ಯಾತ ಕವಿಗಳ ಹೆಸರಿನಲ್ಲಿ ಪಾರಂಪರಿಕ ಶಾಲೆಗಳಾಗಿ ಪರಿವರ್ತಿಸಬೇಕು. ಸಾಕಷ್ಟು ಸರ್ಕಾರಿ ಶಾಲೆಗಳಿಗೆ ಆಸ್ತಿ ಹಕ್ಕುಪತ್ರ ನೊಂದಣಿಯಾಗಬೇಕು ಎಂದು ಅಧ್ಯಕ್ಷರು ಹೇಳಿದರು.

ಜಾಗತೀಕರಣದ ವ್ಯಾಮೋಹದಿಂದ ಕನ್ನಡಿಗರೇ ಇಂದು ಕನ್ನಡ ಭಾಷೆಯನ್ನು ಕಡೆಗಣಿಸುತ್ತಿರುವುದು ಕಂಡುಬಂದಿದೆ. ಇದು ಸಲ್ಲದು. ದೇಶದಲ್ಲಿ ಹಿಂದಿ ಭಾಷೆ ಶೇ. 66ರ ವೇಗದಲ್ಲಿ ಬೆಳೆಯುತ್ತಿದೆ. ಇತರೆ ಭಾಷೆಗಳು ಶೇ. 9 ಹಾಗೂ ಕನ್ನಡ ಭಾಷೆಯು ಶೇ. 3.4ರ ವೇಗದಲ್ಲಿ ಬೆಳೆಯುತ್ತಿದೆ. ಇದು ಸಾಕಾಗುವುದಿಲ್ಲ. ರಾಜ್ಯದೆಲ್ಲೆಡೆ ಆಂದೋಲನ ಮಾದರಿಯಲ್ಲಿ ಕನ್ನಡ ಅಭಿಯಾನ ಆರಂಭಿಸಬೇಕಾಗಿದೆ. ರಾಜ್ಯದ ಗಡಿಭಾಗಗಳಲ್ಲಿ ಕನ್ನಡ ಭಾಷೆ ಬಳಕೆಗೆ ತೊಡಕಾಗದಂತೆ ಎಚ್ಚರ ವಹಿಸಬೇಕು. ರಸ್ತೆಗಳು ಹಾಗೂ ಎಲ್ಲಾ ಅಂಗಡಿ ಮುಂಗಟ್ಟುಗಳಲ್ಲಿ ಕನ್ನಡದ ನಾಮಫಲಕ ಕಡ್ಡಾಯವಾಗಿ ಹಾಕಬೇಕು. ಕೈಗಾರಿಕೆಗಳಲ್ಲಿ ಶೇ. 40ರಷ್ಟು ಉದ್ಯೋಗಗಳನ್ನು ಸ್ಥಳೀಯ ಕನ್ನಡಿಗರಿಗೆ ಮೀಸಲಿರಿಸುವಂತೆ ನೋಡಿಕೊಳ್ಳಬೇಕಾಗಿದೆ ಎಂದು ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ಜಿಲ್ಲಾ ವ್ಯಾಪ್ತಿಯಲ್ಲಿರುವ ಕೈಗಾರಿಕೆಗಳಿಗೆ ಭೇಟಿ ನೀಡಿ ಸ್ಥಳೀಯ ಕನ್ನಡಿಗರಿಗೆ ಉದ್ಯೋಗ ನೀಡಿರುವ ಬಗ್ಗೆ ಸ್ಥಳ ಪರಿಶೀಲನೆ ನಡೆಸಲಾಗುವುದು. ಸ್ಥಳೀಯ ಕನ್ನಡಿಗರಿಗೆ ಉದ್ಯೋಗದಲ್ಲಿ ಆದ್ಯತೆ ನೀಡಿರುವ ಕುರಿತು ಪರಿಶೀಲಿಸಲಾಗುವುದು. ಮುಂದಿನ ದಿನಗಳಲ್ಲಿ ಕನ್ನಡಿಗರಿಗೆ ನಿಗದಿತ ಪ್ರಮಾಣದ ಉದ್ಯೋಗ ಲಭ್ಯತೆ ದೊರಕಿಸಲಾಗುವುದು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಮುತ್ತುರಾಜು, ಬಿ.ಆರ್.ಟಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶ್ರೀಪತಿ, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಿ.ಸಿ. ಶೃತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ್ ಹಾನಗಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರಾಜು, ಹಿರಿಯ ಸದಸ್ಯರಾದ ಡಾ. ಗುರುರಾಜ್, ರೂಬಿನ್ ಸಂಜಯ್, ಕನ್ನಡ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾದ ಅರುಣ್ ಕುಮಾರ್, ಪಿ. ಮಹೇಶ್, ಪದ್ಮಪುರುಷೋತ್ತಮ್, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಲೋಕ ಅದಾಲತ್




**ಮಂಡ್ಯ:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ರಾಜ್ಯಾದ್ಯಂತ ಜುಲೈ 11 ರಂದು (ನಾಳೆ) ರಾಷ್ಟ್ರೀಯ ಲೋಕ್-ಅದಾಲತ್‌ನ್ನು ಹಮ್ಮಿಕೊಂಡಿದ್ದು, ಮಂಡ್ಯ ಜಿಲ್ಲೆಯಲ್ಲಿ 7 ತಾಲ್ಲೂಕುಗಳಲ್ಲಿಯ? ಸಹ ಲೋಕ್ ಅದಾಲತ್ ಮುಖಾಂತರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಪೂರ್ವಭಾವಿ ಬೈಠಕ್‌ಗಳನ್ನು ನಡೆಸಲಾಗುತ್ತಿದೆ

ಆಸ್ತಿ ವಿವಾದಗಳನ್ನು ಒಳಗೊಂಡಂತೆ ಸಿವಿಲ್ ವ್ಯಾಜ್ಯಗಳು, ವಿಭಾಗದ ದಾವೆಗಳು, ಹಣವಸೂಲಾತಿ ದಾವೆಗಳು, ನಿರ್ದಿಷ್ಟ ಪರಿಹಾರ ಕಾಯ್ದೆಯಡಿ ದಾಖಲಿಸಿರುವ ದಾವೆಗಳು, (ಒಗಿಅ) ಮೋಟಾರು ವಾಹನಗಳ ಪ್ರಕರಣಗಳು, ಒಒಖಆ ಪ್ರಕರಣಗಳು, ಜೀವನಾಂಶ ಪ್ರಕರಣ, ದಾಂಪತ್ಯ ಪುನರ್ ಸ್ಥಾಪನೆ ಪ್ರಕರಣಗಳು, ರಾಜಿ ಆಗಬಹುದಾದಂತಹಕ್ರಿಮಿನಲ್ ಪ್ರಕರಣಗಳನ್ನು ಮತ್ತು ಚೆಕ್ ಬೌನ್ಸ್ ಪ್ರಕರಣಗಳು, ಐಂಅಪ್ರಕರಣಗಳು, Exectution ಪ್ರಕರಣಗಳನ್ನು ರಾಜಿಗೆ ತೆಗೆದುಕೊಂಡು ಆಯಾ ನ್ಯಾಯಾಲಯಗಳಲ್ಲಿ ಲೋಕ್ ಅದಾಲತ್ ನ್ಯಾಯಾಲಯಗಳನ್ನು ರಚಿಸಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಪ್ರಯತ್ನ ಮಾಡಲಾಗುತ್ತಿದೆ.

ಲೋಕ ಅದಾಲತ್ ಪೀಠದಲ್ಲಿ ನ್ಯಾಯಾಧೀಶರು ಮತ್ತು ನುರಿತ ವಕೀಲರು ಕುಳಿತು ವಾದಿ-ಪ್ರತಿವಾದಿಗಳನ್ನು ಕೂರಿಸಿಕೊಂಡು ಅವರ ಮನವೊಲಿಸಿ ವ್ಯಾಜ್ಯಕ್ಕೆ ಅವರ ಸಮಕ್ಷಮದಲ್ಲೇ ಪರಿಹಾರ ಕಂಡುಕೊಳ್ಳಬಹುದಾಗಿರುತ್ತದೆ ಹಾಗೂ ಲೋಕ ಅದಾಲತ್ ಮೂಲಕ ವ್ಯಾಜ್ಯ ಇತ್ಯರ್ಥಪಡಿಸಿಕೊಂಡರೆ ನ್ಯಾಯಲಯದ ಶುಲ್ಕ ವಿಧಿಸುವುದಿಲ್ಲ ಈಗಾಗಲೇ ಕಟ್ಟಿರುವಂತಹ ನ್ಯಾಯಾಲಯದ ಶುಲ್ಕವನ್ನು ಸಹ ಮರಳಿ ನೀಡಲಾಗುತ್ತದೆ. ಹಾಗೂ ಲೋಕ ಅದಾಲತ್ ನಲ್ಲಿ ಪ್ರಕರಣಗಳು ಇತ್ಯರ್ಥಗೊಂಡರೆ ಅದರ ವಿರುದ್ಧ ಮೇಲ್ಮನವಿ ಸಲ್ಲಿಸಲು ಸಾಧ್ಯವಿಲ್ಲ. ಈ ತೀರ್ಮಾನವು ನ್ಯಾಯಾಲಯ ನೀಡಿದ ತೀರ್ಮಾನದಷ್ಟೇ ಮೌಲ್ಯ ಹೊಂದಿರುತ್ತದೆ.

ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವಂತಹ ಪ್ರಕರಣಗಳ ಜೊತೆಗೆ, ನ್ಯಾಯಾಲಯಕ್ಕೆ ದಾಖಲಾಗುವ ಮುನ್ನ ಅಂದರೆ, ವ್ಯಾಜ್ಯಪೂರ್ವ ಪ್ರಕರಣಗಳು (ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಕಾರ್ಮಿಕ ವಿವಾದ ಪ್ರಕರಣಗಳು, ರಾಜೀಯಾಗಬಲ್ಲ ಅಪರಾಧಿಕ ಪ್ರಕರಣಗಳು, ವೈವಾಹಿಕ ಕುಟುಂಬ ನ್ಯಾಯಾಲಯ ಹಾಗೂ ಇತರೆ ಸಿವಿಲ್ ಪ್ರಕರಣಗಳು) ಸಂಬಂಧಿಸಿದಂತೆ ಉಭಯ ಪಕ್ಷಗಾರರಿಗೆ

ನೋಟೀಸ್ ನೀಡಿ ಕರೆಸಿ ಪ್ರಾಧಿಕಾರದ ವತಿಯಿಂದ ಪೂರ್ವಭಾವಿ ಬೈಠಕ್ ನಡೆಸಿ ಅದಾಲತ್‌ನಲ್ಲಿ ರಾಜಿಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ

ಇಂತಹ ಪ್ರಕರಣಗಳಿಗೆ ನ್ಯಾಯಾಲಯಕ್ಕೆ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ವಕೀಲರ ಮುಖಾಂತರ ಅಥವಾ ಖುದ್ದಾಗಿ ಪ್ರಾಧಿಕಾರಕ್ಕೆ ಭೇಟಿ ನೀಡಿ ಪ್ರಕರಣವನ್ನು ರಾಜಿಮಾಡಿಕೊಳ್ಳಬಹುದಾಗಿರುತ್ತದೆ. ಇದರಿಂದ ಪ್ರಕರಣವು ಶೀಘ್ರವಾಗಿ ಇತ್ಯರ್ಥವಾಗುತ್ತದೆ ಹಾಗೂ ಹಣ ಹಾಗೂ ಅಮೂಲ್ಯವಾದ ಸಮಯ ಉಳಿತಾಯವಾಗುತ್ತದೆ.

ಈ ಬಾರಿಯ ಲೋಕ್-ಅದಾಲತ್‌ನಲ್ಲಿ ಕಕ್ಷಿದಾರರ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸಿ ಕಕ್ಷಿದಾರರಿಗೆ ಅನುಕೂಲವಾಗುವ ರೀತಿಯಲ್ಲಿ ನ್ಯಾಯಧಾನ ಮಾಡಬೇಕೆಂಬ ಇಚ್ಛೆಯಿಂದ ಈ ಮೇಲಿನ ಎಲ್ಲಾ ಪ್ರಕರಣಗಳನ್ನು ತೆಗೆದುಕೊಂಡಿದ್ದು, ಜನ ಸಾಮಾನ್ಯರು ಹಾಗೂ ಕಕ್ಷಿದಾರರು ಇದರ ಸದುಪಯೋಗವನ್ನು ಪಡೆದುಕೊಂಡು ಲೋಕ್ ಅದಾಲತ್‌ನಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವ ಮೂಲಕ ಲೋಕ್-ಅದಾಲತ್ ಅನ್ನು ಯಶಸ್ವಿಗೊಳಿಸಬೇಕಾಗಿ ತಿಳಿಸಲಾಗಿದೆ.

## ಎರಡು ಬೈಕ್ ಗಳ ನಡುವೆ ಅಪಘಾತ: ಸ್ಥಳದಲ್ಲೇ ಓರ್ವ ಸಾವು

**ಗುಂಡ್ಲುಪೇಟೆ:** ಎರಡು ಬೈಕ್ ಗಳ ನಡುವೆ ಡಿಕ್ಕಿ ಸಂಭವಿಸಿ ಬೈಕ್ ಸವಾರನೋರ್ವ ಸ್ಥಳದಲ್ಲೇ ಮೃತ ಪಟ್ಟಿರುವ ಘಟನೆ ಕೇರಳ ರಾಷ್ಟ್ರೀಯ ಹೆದ್ದಾರಿ ಭೀಮನಬೀಡು ಪೆಟ್ರೋಲ್ ಬಂಕ್ ಬಳಿ ನಡೆದಿದೆ.

ತಾಲೂಕಿನ ಕೂತನೂರು ಗ್ರಾಮದ ಮಂಜು(32) ಮೃತ ಬೈಕ್ ಸವಾರ. ಈತ ಗುಂಡ್ಲುಪೇಟೆ ಕಡೆಗೆ ಬರುತ್ತಿದ್ದ ವೇಳೆ ಮತ್ತೊಂದು ಬೈಕ್ ಡಿಕ್ಕಿ ಹೊಡೆದಿದೆ ಎನ್ನಲಾಗುತ್ತಿದ್ದು, ಘಟನೆಯಲ್ಲಿ ಮಂಜು ತಲೆಗೆ ತೀವ್ರ ಪೆಟ್ಟು ಬಿದ್ದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮತ್ತೊಂದು ಬೈಕ್ ಡಿಕ್ಕಿ ಹೊಡೆದು ಪರಾರಿಯಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಮಾಹಿತಿ ಅರಿತ ಗುಂಡ್ಲುಪೇಟೆ ಠಾಣೆ ಪೊಲೀಸರು ತಕ್ಷಣ ಆಗಮಿಸಿ ಬೈಕ್ ಸವಾರನ ಮೃತದೇಹವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದ್ದಾರೆ. ಈ ಸಂಬಂಧ ಬೈಕ್ ಅನ್ನು ವಶಕ್ಕೆ ಪಡೆದು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.



## ಎಸ್‌ಐಆರ್ ಕುರಿತು ಜಾಗೃತಿ ಕಾರ್ಯಕ್ರಮ

**ಮೈಸೂರು:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ2026ರ ಅಂಗವಾಗಿ ನಂಜನಗೂಡು ತಾಲ್ಲೂಕು ಪಂಚಾಯಿತಿಯ ವತಿಯಿಂದ ಶ್ರೀಕಂಠೇಶ್ವರ ದೇವಾಲಯದ ಆವರಣದಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ತಾಲ್ಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಮತದಾರರ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಮತದಾರರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಲಾಯಿತು.

ಮತದಾರರ ಪಟ್ಟಿಯನ್ನು ನಿಖರ ಹಾಗೂ ಸಮಗ್ರಗೊಳಿಸುವ ಉದ್ದೇಶದಿಂದ ನಡೆಯುತ್ತಿರುವ ವಿಶೇಷ ಪರಿಷ್ಕರಣೆ ಕಾರ್ಯದಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ಸಹಕರಿಸಬೇಕು ಎಂದು ಅಧಿಕಾರಿಗಳು ಕರೆ ನೀಡಿದರು.

ಅಗತ್ಯ ದಾಖಲೆಗಳನ್ನು ಸಲ್ಲಿಸಿ ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳುವಂತೆ ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಯೋಜನಾಧಿಕಾರಿ ಶ್ವೇತಾ, ಸಹಾಯಕ ನಿರ್ದೇಶಕಿ ಜ್ಯೋತಿ, ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳಾದ ದಿನೇಶ್, ಕಾವ್ಯ ಹಾಗೂ ನವೀನ್ ಉಪಸ್ಥಿತರಿದ್ದರು.

## ಭೂಸ್ವಾಧೀನ ಪರಿಹಾರ ತ್ವರಿತವಾಗಿ ನೀಡಿ-ರೈತರ ಒತ್ತಾಯ

**ರಾಮನಗರ:** ಬಿಡದಿ ಪಟ್ಟಣ ಯೋಜನೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಿರುವ ಹಿನ್ನೆಲೆಯಲ್ಲಿ ಪರಿಹಾರ ಮೊತ್ತವನ್ನು ಶೀಘ್ರದಲ್ಲೇ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು ಎಂದು ಯೋಜನೆ ವ್ಯಾಪ್ತಿಯ ರೈತರು ಒತ್ತಾಯಿಸಿದರು.

**ಬಿಡದಿ ಟೌನ್ ಶಿಪ್ ಯೋಜನೆ**

ನಗರದ ಕಂದಾಯ ಭವನದಲ್ಲಿರುವ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಸಭೆಯ ಬಳಿಕ ಮಾತನಾಡಿದ ರೈತ ಮುಖಂಡ ಹೊಸೂರು ರಾಜಣ್ಣ, ಕಳೆದ ಒಂದೂವರೆ ವರ್ಷದಿಂದ ಭೂಸ್ವಾಧೀನ ಪ್ರಕ್ರಿಯೆ ಮುಂದುವರಿದಿದ್ದರೂ ಪರಿಹಾರ ವಿತರಣೆಯಲ್ಲಿ ವಿಳಂಬವಾಗುತ್ತಿದೆ. ಎಲ್ಲ ಪ್ರಕ್ರಿಯೆಗಳನ್ನು ಶೀಘ್ರ ಪೂರ್ಣಗೊಳಿಸಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಭೂಸ್ವಾಧೀನಕ್ಕೆ ಒಪ್ಪಿಗೆ ನೀಡಿರುವ ರೈತರು



ಎದುರಿಸುತ್ತಿರುವ ಸಮಸ್ಯೆಗಳನ್ನು ಮುಖ್ಯಮಂತ್ರಿ ಗಮನಕ್ಕೆ ತರಲು ಶಾಸಕರ ಮೂಲಕ ಮನವಿ ಮಾಡಲಾಗಿದೆ. ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡುವ ಅವಕಾಶ ಕಲ್ಪಿಸುವುದಾಗಿ ಶಾಸಕರು ಭರವಸೆ ನೀಡಿದ್ದಾರೆ ಎಂದು ಹೇಳಿದರು.

ಪರಿಹಾರ ಮೊತ್ತ ಮಾತ್ರವಲ್ಲದೆ ಭೂಸ್ವಾಧೀನ ಪ್ರದೇಶದಲ್ಲಿರುವ ಬಡ ಕುಟುಂಬಗಳು, ಕೂಲಿ ಕಾರ್ಮಿಕರು ಹಾಗೂ ವಸತಿರಹಿತರ ಸಮಸ್ಯೆಗಳಿಗೂ ಸರ್ಕಾರ ಸ್ಪಂದಿಸಬೇಕು. ಈ ಕುರಿತು 12 ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು.

ಅಂತಿಮ ಅಧಿಸೂಚನೆ ಹೊರಬಂದಿರುವ ಪ್ರದೇಶಗಳಲ್ಲಿ ತಕ್ಷಣವೇ ಪರಿಹಾರ ವಿತರಣೆ ಆರಂಭಿಸಬೇಕು ಎಂದು ಸಭೆಯಲ್ಲಿ ಒತ್ತಾಯಿಸಲಾಗಿದೆ. ಈ ಕುರಿತು ಶಾಸಕರು ಹಾಗೂ ಪ್ರಾಧಿಕಾರದ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.


ಭೂಮಾಲೀಕ ಸಿದ್ದರಾಜು ಮಾತನಾಡಿ, ಕೆಲವರ ವೈಯಕ್ತಿಕ ಕಾರಣಗಳಿಂದ ಪ್ರಕ್ರಿಯೆ ವಿಳಂಬವಾಗುವುದು ಸರಿಯಲ್ಲ. ಪರಿಹಾರ ಹಣದ ನಿರೀಕ್ಷೆಯಲ್ಲಿ ಅನೇಕ ರೈತರು ಹೊಸ ಭೂಮಿ ಖರೀದಿ ಮಾಡಲು ಸಾಧ್ಯವಾಗದೆ ಸಂಕಷ್ಟ ಅನುಭವಿಸುತ್ತಿದ್ದಾರೆ. ಭೂಮಿಯ ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವುದರಿಂದ ಇನ್ನಷ್ಟು ವಿಳಂಬ ರೈತರಿಗೆ ನಷ್ಟ ಉಂಟುಮಾಡಲಿದೆ ಎಂದು ಹೇಳಿದರು.

## ಮಳವಳ್ಳಿ ಟಿಎಪಿಸಿಎಂಎಸ್‌ನಲ್ಲಿ ಭ್ರಷ್ಟಾಚಾರ ಆರೋಪ:

# ಸಮಗ್ರ ತನಿಖೆಗೆ ನಿರ್ದೇಶಕ ಚಂದಳ್ಳಿ ಶ್ರೀಧರ್ ಆಗ್ರಹ

**ಮಂಡ್ಯ:** ಮಳವಳ್ಳಿ ಟಿಎಪಿಸಿಎಂಎಸ್‌ನ ಹಿಂದಿನ ಆಡಳಿತ ಮಂಡಳಿಯಿಂದ ಭಾರಿ ಭ್ರಷ್ಟಾಚಾರ ನಡೆದಿದ್ದು, ಈ ಸಂಬಂಧ ಸಮಗ್ರ ತನಿಖೆ ನಡೆಸಲು ಮುಂದಾಗಬೇಕು ಎಂದು ಹಾಲಿ ನಿರ್ದೇಶಕ ಚಂದಳ್ಳಿ ಶ್ರೀಧರ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಸಾಲಿನಲ್ಲಿ ನಿರ್ದೇಶಕರಾದ್ದರೇ ಈ ಬಾರಿ ಅಧ್ಯಕ್ಷರಾಗಿದ್ದಾರೆ. ಕಳೆದ ಆಡಳಿತದಲ್ಲಿ ಅಕ್ರಮ ಮತ್ತು ಅವ್ಯವಹಾರ ನಡೆದಿದೆ. ಹಾಲಿ ಶಾಸಕರು ಹಿಂದಿನ ಮಂಡಳಿಯಲ್ಲಿ ನಿರ್ದೇಶಕರಾಗಿದ್ದರು, ಈಗಲೂ ನಿರ್ದೇಶಕರಾಗಿದ್ದು ಈ ಅವ್ಯವಹಾರದಲ್ಲಿ ಪಾಲುದಾರರೇ ಎಂಬ ಅನುಮಾನ ಮೂಡಿ ಬಂದಿದೆ ಎಂದರು.



ಸಂಘದ ತಳಗವಾದಿ ಉಪಶಾಖೆಯಲ್ಲಿ 96 ಲಕ್ಷ ರೂ.ಗಳ ರಸಗೊಬ್ಬರ ದಾಸ್ತಾನು ಇತ್ತು. ಅದರಲ್ಲಿ ಪರಿಶೀಲನೆ ಮಾಡಲಾಗಿ 25 ಲಕ್ಷ ರೂ.ಗಳಷ್ಟು ದಾಸ್ತಾನು ಉಳಿದಿದೆ. ಸಂಘದ ಸಿಇಓ 64.14 ಲಕ್ಷರೂ ಅವ್ಯವಹಾರ ನಡೆದಿದೆ ಎಂದು ವರದಿ ನೀಡಿದರೆ, ಲೆಕ್ಕ ಪರಿಶೋಧಕರು 69.14 ಲಕ್ಷ ಅವ್ಯವಹಾರ ಆಗಿರುವುದಾಗಿ, ಸಂಘದ ಮುಖಂಡರು 62 ಲಕ್ಷ ರೂ.ಗಳ ಅವ್ಯವಹಾರ ಆಗಿರುವುದಾಗಿ ಬರೆದುಕೊಂಡಿದ್ದು, ನಿರ್ದಿಷ್ಟ ಮಾಹಿತಿ ನೀಡುತ್ತಿಲ್ಲ ಎಂದು ದೂರಿದರು.

ಸಹಕಾರಿ ನಿಯಮ ಗಾಳಿಗೆ ತೂರಿ ಸಂಘದ ಸದಸ್ಯರಲ್ಲದ 18 ಮಂದಿಗೆ ಸಾಲ ನೀಡಿದ್ದು, ಈ ಸಂಬಂಧ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿದೆ. ವಿನಃ ಕಾರಣ ಸಣ್ಣ-ಸಣ್ಣ ಕಾಮಗಾರಿ ಮಾಡಿ ಹಣ ದುರುಪಯೋಗ ಮಾಡಲಾಗಿದೆ. ಅನುಮತಿಯಿಲ್ಲದೇ ಮೀಸಲ ನಿಧಿಯ 76 ಲಕ್ಷ ಹಾಗೂ ನೌಕರರ ಗ್ರಾಟ್ಯುಟಿ 15 ಲಕ್ಷ ರೂ.ಗಳ ದುರ್ಬಳಕೆ, ದುಡಿಯುವ ಬಂಡವಾಳದಲ್ಲಿ 4.5 ಕೋಟಿ ರೂ ದುರುಪಯೋಗವಾಗಿದೆ. ಅಧ್ಯಕ್ಷರು ಹಾಗೂ ಲೆಕ್ಕ ಪರಿಶೋಧಕರು ಒಂದೇ ಗ್ರಾಮದವರಾಗಿದ್ದು, ಆಡಿಟ್ ರಿಪೋರ್ಟ್‌ನಲ್ಲಿ ಬೋಗಸ್ ನಡೆದಿದೆ ಎಂದು ಆರೋಪಿಸಿದರು.

ಅವ್ಯವಹಾರಗಳ ಸಂಬಂಧ 64 ತನಿಖೆಗೆ ಒತ್ತಾಯ ಮಾಡಲಾಗಿದೆ. ಆದರೆ ಅಧ್ಯಕ್ಷರು ಸಕಾರಾತ್ಮಕವಾಗಿ ಸ್ಪಂಧಿಸುತ್ತಿಲ್ಲ. 3 ದಿನದೊಳಗೆ ಸಭೆ ಕರೆದು ತನಿಕೆಗೆ ಆದೇಶ ಮಾಡದೇ ಹೋದಲ್ಲಿ ಸಹಕಾರ ಇಲಾಖೆಗೆ ಹಾಗೂ ಸಚಿವರಿಗೆ ಪತ್ರ ಬರೆಯಲಾಗುವುದು. ಜತೆಗೆ ಸಂಘದ ಷೇರುದಾರರೊಂದಿಗೆ ಮಳವಳ್ಳಿ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗೋಷ್ಠಿಯಲ್ಲಿ ನಿರ್ದೇಶಕರಾದ ಶಿವರುದ್ರಪ್ಪ, ರಾಮಣ್ಣ, ಶೋಭ, ರತ್ನಮ್ಮ ಇದ್ದರು.

## ಕೆ.ಆರ್.ನಗರದಲ್ಲಿ ಉಚಿತ ಕಣ್ಣಿನ ಹಾಗೂ ಆರೋಗ್ಯ ತಪಾಸಣಾ ಶಿಬಿರ



**ಕೆ.ಆರ್.ನಗರ:** ಕ್ಷೇತ್ರದ ಸಾಲಿಗ್ರಾಮ ಪಟ್ಟಣದ ಚಂದನ ಪಾಲಿ ಕ್ಲಿನಿಕ್ ನಲ್ಲಿ ಜು.11ರಂದು ಉಚಿತ ಕಣ್ಣಿನ ಹಾಗೂ ಸಾಮಾನ್ಯ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜನೆ ಮಾಡಲಾಗಿದೆ ಎಂದು ಶಿಬಿರದ ಸಂಘಟಕ ಗೋಪಾಲ್ ತಿಳಿಸಿದ್ದಾರೆ.

ಮೈಸೂರಿನ ಅನ್ನಪೂರ್ಣ ಕಣ್ಣಿನ ಆಸ್ಪತ್ರೆ ಹಾಗೂ ಕ್ಲಿಯರ್ ಮೇಡಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಸಾಲಿಗ್ರಾಮ ಪಟ್ಟಣದ ಚಂದನ ಪಾಲಿ ಕ್ಲಿನಿಕ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜು.11ರ ಶನಿವಾರ ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1:30 ರವರೆಗೆ ಸಾಲಿಗ್ರಾಮ ಪಟ್ಟಣದ ಮಹಾವೀರ ರಸ್ತೆಯಲ್ಲಿರುವ ಚಂದನ ಪಾಲಿ ಕ್ಲಿನಿಕ್ ನಲ್ಲಿ ನುರಿತ ತಜ್ಞ ವೈದ್ಯರುಗಳು ತಪಾಸಣೆಯನ್ನು ನಡೆಸಲಿದ್ದಾರೆ.

ಶಿಬಿರದಲ್ಲಿ ಸಮಗ್ರ ಕಣ್ಣಿನ ತಪಾಸಣೆ, ದೃಷ್ಟಿ ಪರೀಕ್ಷೆ ಹಾಗೂ ಕಣ್ಣಿನ ಕನ್ನಡಕ ಸಲಹೆ, ಸಾಮಾನ್ಯ ಆರೋಗ್ಯ ತಪಾಸಣೆ, ರಕ್ತದ ಒತ್ತಡ ಮತ್ತು ಸಕ್ಕರೆ ಪರೀಕ್ಷೆ ಸೇರಿದಂತೆ ವಿವಿಧ ತಪಾಸಣೆಗಳನ್ನು ನಡೆಸಲಾಗುವುದು. ಸಾರ್ವಜನಿಕರು ಈ ಶಿಬಿರದ ಉಪಯೋಗವನ್ನು ಪಡೆದುಕೊಳ್ಳಬೇಕೆಂದು ಚಂದನ ಪಾಲಿ ಕ್ಲಿನಿಕ್ ನ ಗೋಪಾಲ್ ಮನವಿ ಮಾಡಿದ್ದಾರೆ.

## ಜಿಂಕೆ ಬೇಟೆಯಾಡಿ ಮಾಂಸ ಸಾಗಾಣೆ:

# ಇಬ್ಬರು ಆರೋಪಿಗಳ ಬಂಧನ

**ಗುಂಡ್ಲುಪೇಟೆ:** ಅಕ್ರಮವಾಗಿ ಜಿಂಕೆ ಭೇಟೆಯಾಡಿ ಮಾಂಸ ಸಾಗಾಣೆ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ವಿಶೇಷ ಹುಲಿ ಸಂರಕ್ಷಣಾ ದಳ (ಖಖಿಕಈ) ಬಂಧಿಸಿರುವ ಘಟನೆ ಕೆಬ್ಬೇಪುರದ ಹುಲಿಯಮ್ಮನ ಗುಡಿ ಸಮೀಪ ಗುರುವಾರ ಮುಂಜಾನೆ ನಡೆದಿದೆ.




ತಾಲೂಕಿನ ಕೋಡಹಳ್ಳಿ ಗ್ರಾಮದ ನಿವಾಸಿ ಮಣಿಕಂಠ (27), ಚೌಡಳ್ಳಿ ಗ್ರಾಮದ ನಿವಾಸಿ ಶಿವಯ್ಯ (45) ಬಂಧಿತ ಆರೋಪಿಗಳು. ಗುರುವಾರ ಮುಂಜಾನೆ ಸುಮಾರು 5:30 ಗಂಟೆಗೆ ಉಪ ವಲಯ ಅರಣ್ಯಾಧಿಕಾರಿ ಕಾರ್ತಿಕ್ ಯಾದವ್ ಅವರ ನೇತೃತ್ವದಲ್ಲಿ ಜ್ಞಾನಶೇಖರ್, ರವಿಕುಮಾರ್, ವಿನಯ್ ಹಾಗೂ ವಾಹನ ಚಾಲಕ ಸೋಮು ಅವರನ್ನು ಒಳಗೊಂಡ ಎಸ್.ಟಿ.ಪಿ.ಎಫ್ ಗಸ್ತು ತಂಡವು ಗಸ್ತು ಕರ್ತವ್ಯದಲ್ಲಿದ್ದ ವೇಳೆ ಹೋಂಡಾ ಮೋಟಾರ್ ಸೈಕಲ್ ನಲ್ಲಿ ಸಂಚರಿಸುತ್ತಿದ್ದ ಇಬ್ಬರನ್ನು ಅನುಮಾನಾಸ್ಪದವಾಗಿ ತಡೆದು ತಪಾಸಣೆ ನಡೆಸಿದಾಗ ಆರೋಪಿಗಳ ಬಳಿ ಅಕ್ರಮ ಬೇಟೆಗೆ ಬಳಸಲಾಗುತ್ತಿದ್ದ ಆಯುಧಗಳು, ಉಪಕರಣಗಳು ಹಾಗೂ 30 ಕೆಜಿ ಚುಕ್ಕೆ ಜಿಂಕೆಯ ಮಾಂಸ ಪತ್ತೆಯಾಗಿದೆ. ತಕ್ಷಣ ಇಬ್ಬರನ್ನು ಬಂಧಿಸಿ, ಪರವಾನಗಿ ಇಲ್ಲದ ಒಂದು ಮಜಲ್-ಲೋಡಿಂಗ್ ಬಂದೂಕು, ಮದ್ದುಗುಂಡುಗಳು, ಎರಡು ಚಾಕುಗಳು, ಹೆಡ್ ಟಾರ್ಚ್ ಹಾಗೂ ಒಂದು ಹೋಂಡಾ ಮೋಟಾರ್ ಸೈಕಲ್ ಅನ್ನು ವಶಪಡಿಸಿಕೊಳ್ಳಲಾಗಿದೆ.

ಕಾರ್ಯಾಚರಣೆಯು ಉಪ ಅರಣ್ಯ ಸಂರಕ್ಷಣಾಧಿಕಾರಿ ನಂದೀಶ್, ಎಸ್ಟಿಪಿಎಫ್ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ್ ಹಾಗೂ ವಲಯ ಅರಣ್ಯಾಧಿಕಾರಿ ವೆಂಕಟೇಶ್ ಅವರ ಮಾರ್ಗದರ್ಶನದಲ್ಲಿ ನಡೆದಿದ್ದು, ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

**ಮೈಸೂರಿನ ಕುದೇರು ಮಠದಲ್ಲಿ ಎರಡು ದಿನಗಳ ನಡೆಯುತ್ತಿರುವ ಧಾರ್ಮಿಕ ಕಾರ್ಯಕ್ರಮದಲ್ಲಿ ಮುಡಾ ಮಾಜಿ ಅಧ್ಯಕ್ಷ ಎಚ್. ರಾಜೀವ್ ಹಾಗೂ ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಭಾಗವಹಿಸಿ ಶ್ರೀಗಳ ಆಶೀರ್ವಾದ ಪಡೆದರು.**



# ಖಾಕಿಯಿಂದ ಪೊರಕೆಗೆ ಸ್ವಚ್ಛತೆಯ ಸಿಪಾಯಿ




| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 65

ಖಾಕಿ ಬಟ್ಟೆಯ ಗತ್ತು ಬಿಟ್ಟು, ಕೈಗೆ ಪೊರಕೆ ಹಿಡಿದು ದೇಶವನ್ನೇ ಗುಡಿಸಿದ ಕರ್ಮಯೋಗಿ.ನಿವೃತ್ತ ಐಪಿಎಸ್ ಅಧಿಕಾರಿ ಸರ್ದಾರ್ ಇಂದರ್‌ಜಿತ್ ಸಿಂಗ್ ಸಿಧು ಅವರಿಗೆ 2026ರ ಪದ್ಮಶ್ರೀ ಸಂದಿದೆ. ಸೇವೆಯಲ್ಲಿದ್ದಾಗ ಕಾನೂನಿನ ಕಾವಲುಗಾರರಾಗಿದ್ದ ಇವರು, ನಿವೃತ್ತಿಯ ನಂತರ ಸ್ವಚ್ಛತೆಯ ಹಾದಿ ಹಿಡಿದು ದೇಶಾದ್ಯಂತ ಬ್ರೂಮ್ ವಾರಿಯರ್ ಎಂದೇ ಹೆಸರಾದರು. ಹುದ್ದೆಯ ಗೌರವಕ್ಕಿಂತ ನೆಲದ ಸೇವೆಯೇ ದೊಡ್ಡದು ಎಂದು ತೋರಿಸಿಕೊಟ್ಟರು.

ರಸ್ತೆ,ಬೀದಿ,ಬಸ್ ನಿಲ್ದಾಣ, ದೇವಸ್ಥಾನದ ಅಂಗಳ ಎಲ್ಲೆಂದರಲ್ಲಿ ತಾವೇ ಪೊರಕೆ ಹಿಡಿದು ಕಸ ಗುಡಿಸಿದರು.ಭಾಷಣ ಮಾಡಲಿಲ್ಲ, ಉಪದೇಶ ನೀಡಲಿಲ್ಲ.ಮೌನವಾಗಿ ಕಸ ತೆಗೆಯುತ್ತಾ,ಸ್ವಚ್ಛತೆಯೇ ನಿಜವಾದ ದೇಶಭಕ್ತಿ ಎಂದು ಕಲಿಸಿದರು.ಇವರ ಶಾಂತ ಆದರೆ ಗಟ್ಟಿಯಾದ ಸ್ವಚ್ಛತಾ ನಡೆ ಲಕ್ಷಾಂತರ ಯುವಕರಿಗೆ ಸ್ಫೂರ್ತಿಯಾಯಿತು. ನನ್ನ ಊರು,ನನ್ನ ಜವಾಬ್ದಾರಿ ಎಂಬ ಮಂತ್ರವನ್ನು ಮನೆಮನೆಗೆ ತಲುಪಿಸಿದರು.

ಪೊಲೀಸ್ ಠಾಣೆಯಿಂದ ಬೀದಿಗೆ ಇಳಿದು,ಪೊರಕೆಯನ್ನೇ ಆಯುಧ ಮಾಡಿಕೊಂಡು ಕೊಳಕಿನ ವಿರುದ್ಧ ಯುದ್ಧ



ಸಾರಿದರು.ಸರ್ಕಾರದ ಆದೇಶಕ್ಕಾಗಿ ಕಾಯದೆ,ತಾವೇ ಕೆಲಸ ಶುರುಮಾಡಿದರು. ಇವರನ್ನು ನೋಡಿ ಶಾಲಾ ಮಕ್ಕಳು,ಕಾಲೇಜು ಹುಡುಗರು,ಮನೆಯ ಹೆಂಗಸರು ಎಲ್ಲರೂ ಪೊರಕೆ ಹಿಡಿದರು.ಸ್ವಚ್ಛತೆ ಒಂದು ಆಂದೋಲನವಾಯಿತು.

ಈ ಪದ್ಮಶ್ರೀ ಒಬ್ಬ ಮಾಜಿ ಅಧಿಕಾರಿಗೆ ಸಂದಿಲ್ಲ;ಸೇವೆಗೆ ನಿವೃತ್ತಿ ಇಲ್ಲ ಎಂದು ತೋರಿಸಿದ ಸ್ವಚ್ಛ ಭಾರತದ ನಿಜವಾದ ಸಿಪಾಯಿಗೆ ಸಂದ ಗೌರವ.ಶ್ರೀ ಇಂದರ್‌ಜಿತ್ ಸಿಂಗ್ ಸಿಧು ಅವರ ಬದುಕು ಹೇಳುತ್ತದೆ:ಹುದ್ದೆ ಹೋದರೂ ಕರ್ತವ್ಯ ಮುಗಿಯುವುದಿಲ್ಲ.ದೇಶ ಕಟ್ಟುವ ಕೆಲಸ ಪೊರಕೆಯಿಂದಲೂ ಆಗುತ್ತದೆ.

